ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 103 ಸಂಚಿಕೆ- 103 | PAGE-8 ಪುಟ-8 | ಶುಕ್ರವಾರ 30.05.2025 | RS.2/- ಬೆಲೆ 2/-

# ಸರ್ಕಾರಿ ಶಾಲೆಗಳಲ್ಲೂ ಅತ್ಯುತ್ತಮ ಶಿಕ್ಷಣ ನಮ್ಮ ಗುರಿ: ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮೇ 29 :ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶ ಸಿಕ್ಕರೆ ಎಲ್ಲರ ಪ್ರತಿಭೆಯೂ ಹೊರಗೆ ಬರುತ್ತದೆ. ಸರ್ಕಾರಿ ಶಾಲೆಗಳಲ್ಲೂ ಸಹ ಅತ್ಯುತ್ತಮ ಶಿಕ್ಷಣ ನೀಡುವುದು ಸರ್ಕಾರದ ಗುರಿ. ಯಾರೂ ಕೂಡ ಶಿಕ್ಷಣದಿಂದ ವಂಚಿತರಾಗಬಾರದು. ಶಿಕ್ಷಣ ಬರೀ ಜ್ಞಾನ ಕೊಡುವ ಕ್ಷೇತ್ರವಲ್ಲ ಅದು ವ್ಯಕ್ತಿತ್ವ ರೂಪಿಸುತ್ತದೆ ಎನ್ನುವ ಉದ್ದೇಶದಿಂದ ಶಾಲಾ ಶಿಕ್ಷಣ ಕ್ಷೇತ್ರದಲ್ಲಿ ಎರಡು ವರ್ಷಗಳಲ್ಲಿ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿ ಎಲ್ಲರಿಗೂ ಸಮಾನ ಶಿಕ್ಷಣ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ಇಂದು ಆಡುಗೋಡಿ ಪಟೇಲ್ ಮುನಿಚಿನ್ನಪ್ಪ ಪ್ರೌಢ ಶಾಲೆಯ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಶಾಲಾ ಪ್ರಾರಂಭೋತ್ಸವ 2025-26 ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಮಕ್ಕಳೊಂದಿಗೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಪ್ರತಿಯೊಬ್ಬರಿಗೂ ಶಿಕ್ಷಣ ಕೊಡುವುದು ಸರ್ಕಾರದ ಜವಾಬ್ದಾರಿಯಾಗಿದ್ದು, ಭೂಮಿಯ ಮೇಲೆ ಜನಿಸಿದ ಪ್ರತಿಯೊಬ್ಬರೂ ಶಿಕ್ಷಣ ಪಡೆಯಬೇಕು ಎಂದರು.

ಶಿಕ್ಷಣ ಪಡೆದರೆ ಜ್ಞಾನ ವಿಕಾಸವಾಗುವುದರ ಜೊತೆಗೆ ದೇಶವು ಮುನ್ನಡೆಯುತ್ತದೆ. ಎಲ್ಲರೂ ಶಿಕ್ಷಿತರಾಗಿ ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ನಡೆಯುವುದರ ಜೊತೆಗೆ ಇತರರಿಗೂ ಮಾದರಿಯಾಗಬೇಕು. ನಾವು ಹುಟ್ಟಿದ ಮೇಲೆ ಸಮಾಜ ಏನು ಮಾಡಿತು ಅನ್ನುವುದಕ್ಕಿಂತ, ನಾವು ಸಮಾಜಕ್ಕೆ ಏನು ಮಾಡಿದ್ದೇವೆ ಅನ್ನುವುದು ಮುಖ್ಯ. ಉದಾಹರಣೆಗೆ ಡಾ: ಬಿ.ಆರ್.ಅಂಬೇಡ್ಕರ್ ಅವರು ದಲಿತ ಸಮುದಾಯದಲ್ಲಿ ಹುಟ್ಟಿದ ದೇಶ ಕಂಡ ಮಹಾನ್ ವಿದ್ವಾಂಸರಲ್ಲಿ ಒಬ್ಬರು. ಆದ್ದರಿಂದ ಪ್ರತಿಯೊಬ್ಬರಿಗೂ ಅವಕಾಶ ಸಿಕ್ಕಿದರೆ ಎಲ್ಲರೂ ಪ್ರತಿಭಾವಂತರಾಗಲು ಸಾಧ್ಯ ಎಂದರು.




ಸರ್ಕಾರಿ ಶಾಲೆಯಲ್ಲಿ ಓದಿ 100ಕ್ಕೆ 100 ರಷ್ಟು ಅಂಕ ಪಡೆದ ವಿದ್ಯಾರ್ಥಿಗಳನ್ನು ಇಂದು ಸನ್ಮಾನ ಮಾಡಿದ್ದೇವೆ. ಎಲ್ಲರಲ್ಲಿಯೂ ಸಾಮರ್ಥ್ಯವಿದೆ. ಸಮಾನ ಅವಕಾಶ ಸಿಕ್ಕಿದರೆ ಪ್ರತಿಯೊಬ್ಬರು ತಮ್ಮ ಸಾಮರ್ಥ್ಯ ಹೊರಹಾಕಲು ಸಾಧ್ಯವಾಗುತ್ತದೆ. ಡಾ.ಬಿ.ಆರ್. ಅಂಬೇಡ್ಕರ್ ಅವರು ಕಲಿತ ವಿದ್ಯೆಯಿಂದ ನಮ್ಮ ದೇಶಕ್ಕೆ ವಿಶ್ವದಲ್ಲಿಯೇ ಎಲ್ಲರಿಗೂ ಮಾದರಿಯಾಗುವಂತಹ ಸಂವಿಧಾನವನ್ನು ನಮ್ಮ ದೇಶಕ್ಕೆ ನೀಡಲು ಸಾಧ್ಯವಾಯಿತು. ಅವರು ಹಾಕಿಕೊಟ್ಟಿರುವ ಸಂವಿಧಾನದ ರೀತಿಯಲ್ಲಿ ಸರ್ಕಾರ ಮತ್ತು ನಾವು ನಡೆಯಬೇಕು ಎನ್ನುವ ಬದ್ಧತೆಯಿಂದ ಇಂದು ನಾವು ಪ್ರತೀ ಶಾಲೆಯಲ್ಲೂ ಸಂವಿಧಾನದ ಪ್ರಸ್ತಾವನೆಯನ್ನು ಓದಿಸಲಾಗುತ್ತದೆ. 1ನೇ ತರಗತಿಯ ರಾಕೇಶ್ ಎಂಬ ವಿದ್ಯಾರ್ಥಿ ಸಂವಿಧಾನದ ಪ್ರಸ್ತಾವನೆಯನ್ನು ಕರಗತ ಮಾಡಿಕೊಂಡು ಇಂದು ನಮ್ಮ ಮುಂದೆ ಬೋದಿಸಿದ್ದಾನೆ. ಇದು ಹೆಮ್ಮೆಯ ವಿಷಯ. ಅದೇ ರೀತಿ ಇಡೀ ದೇಶಕ್ಕೆ ಸಂವಿಧಾನ ಕರಗತವಾಗಬೇಕು. ಆಗ ಮಾತ್ರ ಸಮ-ಸಮಾಜ, ಸಮಾನತೆ ಸಾಧ್ಯ ಎಂದರು.

ಶಿಕ್ಷಕರ ಕೊರತೆ ಇದ್ದರೆ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಿಲ್ಲ ಎಂದು ನಾನು 1994 ರಿಂದ 1999 ರಲ್ಲಿ ಹಣಕಾಸಿನ ಮಂತ್ರಿಯಾಗಿದ್ದ ಸಂದರ್ಭದಲ್ಲಿ ಸುಮಾರು 80 ರಿಂದ 90 ಸಾವಿರ ಶಿಕ್ಷಕರ ಕೊರತೆ ಇತ್ತು. ಪ್ರಾಥಮಿಕ ಶಿಕ್ಷಣ ಸಚಿವರಾಗಿದ್ದ ಗೋವಿಂದೇಗೌಡರ ಕಾಲದಲ್ಲಿ ಪ್ರತಿ ವರ್ಷ 20 ಸಾವಿರ ಶಿಕ್ಷಕರಂತೆ, 5 ವರ್ಷದಲ್ಲಿ 1 ಲಕ್ಷ ಶಿಕ್ಷಕರನ್ನು ನೇಮಕ ಮಾಡಲಾಯಿತು. 2013 ರಿಂದ 2018ರ ವರೆಗೆ ಮುಖ್ಯಮಂತ್ರಿಯಾಗಿದ್ದಾಗ ಮತ್ತು ಈಗ ಮುಖ್ಯಮಂತ್ರಿಯಾಗಿದ್ದಾಗಲೂ ಕೂಡ ಶಿಕ್ಷಕರಿಗೆ ಎಲ್ಲಾ ರೀತಿಯ ಸಹಕಾರ ನೀಡಲು ಬದ್ಧನಾಗಿದ್ದೇನೆ. ಸಂವಿಧಾನ ಜಾರಿಯಾಗಿ 75ವರ್ಷ ಕಳೆದರೂ ಸಹ 100 ಕ್ಕೆ 100ರಷ್ಟು ಜನ ವಿದ್ಯಾವಂತರಾಗಿಲ್ಲ. ಸ್ವಾತಂತ್ರ್ಯ ಪೂರ್ವದಲ್ಲಿ ಶೇ. 13 ರಷ್ಟಿದ್ದ ಶಿಕ್ಷಣ ಇಂದು ಶೇ.80 ಕ್ಕಿಂತ ಹೆಚ್ಚು ವಿದ್ಯಾವಂತರಾಗಿದ್ದಾರೆ ಎಂದರು.

ಯಾರೂ ಶಾಲೆ ಬಿಟ್ಟು ಹೋಗಬಾರದು. ಸರ್ಕಾರಿ ಶಾಲೆಗಳಲ್ಲಿ ಪ್ರವೇಶಾತಿ ಹೆಚ್ಚಾಗಬೇಕು. ಖಾಸಗಿ ಶಾಲೆಗಳಲ್ಲಿ ದೊರೆಯುವಂತಹ ಶಿಕ್ಷಣದಂತೆ ಇಂದು ನಮ್ಮ ರಾಜ್ಯದ ಸರ್ಕಾರಿ ಶಾಲೆಗಳಲ್ಲಿಯೂ ಗುಣಮಟ್ಟದ ಶಿಕ್ಷಣ ನೀಡಲು ಪ್ರಯತ್ನಿಸುತ್ತಿದ್ದೇವೆ. ಮಕ್ಕಳಿಗೆ ಪ್ರತಿ ದಿನ ಹಾಲು ಮತ್ತು ಎರಡು ಮೊಟ್ಟೆ ನೀಡುತ್ತೇವೆ. ಮಕ್ಕಳಲ್ಲಿ ಶ್ರೀಮಂತರು ಮತ್ತು ಬಡವರು, ಕೆಳವರ್ಗ, ಮೇಲ್ವರ್ಗ ಎಂಬ ತಾರತಮ್ಯ, ಬೇಧಬಾವ ಹೋಗಲಾಡಿಸಲು ಷೂ, ಸಾಕ್ಸ್, ಪಠ್ಯ-ಪುಸ್ತಕ ಹಾಗೂ ಸಮವಸ್ತ್ರ ವಿತರಿಸಲಾಗುತ್ತಿದೆ ಎಂದರು.

ಕಂದಾಚಾರ-ಮೌಢ್ಯತೆ ಬಿಟ್ಟು ಎಲ್ಲರೂ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು. ನಮ್ಮ ಮಾತೃ ಭಾಷೆ, ಜಲ-ನೆಲದ ಮೇಲೆ ಪ್ರೀತಿ ಬೆಳೆಸಿಕೊಳ್ಳಬೇಕು. ಕನ್ನಡ ಮತ್ತು ಆಂಗ್ಲ ಭಾಷೆ ಎರಡೂ ಭಾಷೆಯಲ್ಲೂ ಕಲಿಯಬೇಕು. ಎಲ್ಲಾ ಭಾಷೆ ಕಲಿತರೂ ಮಾತೃ ಭಾಷೆ ಬಿಟ್ಟು ಕೊಡಬಾರದು. ಕೆಲವು ಪೋಷಕರು ಆಂಗ್ಲ ಭಾಷೆಯಲ್ಲಿ ಕಲಿತರೆ ಮಾತ್ರ ಪ್ರತಿಭಾವಂತರಾಗುತ್ತಾರೆ ಎಂದು ಭಾವಿಸಿದ್ದರೆ ಅದು ಸುಳ್ಳು. ನಾನು ಸರ್ಕಾರಿ ಶಾಲೆಯಲ್ಲಿ ಓದಿ ಇಂದು ಮುಖ್ಯಮಂತ್ರಿಯಾಗಿದ್ದೇನೆ. ಯಾವ

(2ನೇ ಪುಟ ನೋಡಿ)

## ಕಲಬುರಗಿ ಡಿಸಿ ವಿರುದ್ಧ ವಿವಾದಾತ್ಮಕ ಹೇಳಿಕೆ: ರವಿಕುಮಾರಗೆ ಹೈಕೋರ್ಟ ತಾತ್ಕಾಲಿಕ ರಿಲೀಫ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.29: ಕಲಬುರಗಿ ಡಿಸಿ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿದ್ದ ವಿಧಾನ ಪರಿಷತ್ ಸದಸ್ಯ ರವಿಕುಮಾರ್ ವಿರುದ್ಧ ಹೈಕೋರ್ಟ್ ಚಾಟಿ ಬೀಸಿದೆ.

ಹೇಳಿಕೆ ವಿರುದ್ಧ ದಾಖಲಾದ ಎಫ್‌ಐಆರ್ ರದ್ದು ಕೋರಿ ರವಿಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಿಚಾರಣೆ ನಡೆಸಿತು. ಈ ವೇಳೆ ರವಿಕುಮಾರ್ ಅವರನ್ನು ಪೀಠ ತೀವ್ರ ತರಾಟೆಗೆ ತೆಗೆದು-ಕೊಂಡಿತು. ಭಾರತೀಯ ಸೇನೆಯ ಅಧಿಕಾರಿ ಕರ್ನಲ್ ಸೋಫಿಯಾ ಖುರೇಷಿಯವರ ವಿರುದ್ಧ ಹೇಳಿಕೆ ಗಮನಿಸಿದ್ದೀರಿ ಅಲ್ವಾ? ಆ ಸಚಿವರ ಹೇಳಿಕೆಗೆ ಮಧ್ಯಪ್ರದೇಶ ಹೈಕೋರ್ಟ್ ಆದೇಶ ಮಾಡಿರುವುದು ಗೊತ್ತಿದೆಯಾ? ಎಂದು ನ್ಯಾಯಾಧೀಶರು ಪ್ರಶ್ನಿಸಿದರು. ಅಲ್ಲದೇ ನಿಮ್ಮ ಹೇಳಿಕೆ ಸರ್ವತಾ ಅನಗತ್ಯವಾದದ್ದು. ನೀವು ಈ ರೀತಿ ಹೇಳಿಕೆ ಕೊಡಬಾರದು ಎಂದು ಕೋರ್ಟ್ ತಾಕೀತು ಮಾಡಿದೆ.



ರವಿಕುಮಾರ್ ಪರ ವಕೀಲರು, ಅವರು ಕ್ಷಮೆಯಾಚಿಸುತ್ತಾರೆ ಎಂದು ಕೋರ್ಟಗೆ ಮನವಿ ಮಾಡಿದರು. ಕ್ಷಮೆಯಾಚನೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಲು ಕೋರ್ಟ್ ಸೂಚನೆ ನೀಡಿತು. ರವಿಕುಮಾರ್ ಅವರನ್ನು ಬಂಧಿಸುವುದಿಲ್ಲ. ಅವರು ತನಿಖೆಗೆ ಸಹಕರಿಸಲಿ ಎಂದು ಎಸ್‌ಪಿಪಿ ಜಗದೀಶ್ ಹೈಕೋರ್ಟಗೆ ತಿಳಿಸಿದರು. ವಾದ-ಪ್ರತಿವಾದ ಆಲಿಸಿದ ನ್ಯಾಯಾಲಯ ಜೂನ್ 19 ಕ್ಕೆ ವಿಚಾರಣೆ ಮುಂದೂಡಿತು.

ಮೇ 24 ರಂದು ಬಿಜೆಪಿಯ ಕಲಬುರಗಿ ಚಲೋ' ಪ್ರತಿಭಟನಾ ರ್ಯಾಲಿಯನ್ನುದ್ದೇಶಿಸಿ ಮಾತನಾಡುವಾಗ ಎನ್.ರವಿಕುಮಾರ್, ಜಿಲ್ಲಾಡಳಿತವು ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಪ್ರಭಾವದಿಂದ ಕಾರ್ಯನಿರ್ವಹಿಸುತ್ತಿದೆ. ಕಲಬುರಗಿ ಡಿಸಿ ಕಚೇರಿಯೂ ತನ್ನ ಸ್ವಾತಂತ್ರ್ಯ ಕಳೆದುಕೊಂಡಿದೆ. ಡಿಸಿ ಮೇಡಂ ಅವರು (ಕಾಂಗ್ರೆಸ್) ಹೇಳುವುದನ್ನು ಸಹ ಕೇಳುತ್ತಿದ್ದಾರೆ. ಡಿಸಿ ಪಾಕಿಸ್ತಾನದಿಂದ ಬಂದಿದ್ದಾರೋ ಅಥವಾ ಇಲ್ಲಿ ಐಎಎಸ್ ಅಧಿಕಾರಿಯೋ ನನಗೆ ತಿಳಿದಿಲ್ಲ" ಎಂದು ನಾಲಿಗೆ ಹರಿಬಿಟ್ಟಿದ್ದರು. ಈ ವೇಳೆ ಜನರ ಚಪ್ಪಾಳೆಗೆ ಪ್ರತಿಕ್ರಿಯಿಸಿ, ನಿಮ್ಮ ಚಪ್ಪಾಳೆ ನೋಡಿದರೆ, ಡಿಸಿ ಬಹುಶಃ ಪಾಕಿಸ್ತಾನದಿಂದ ಬಂದಿದ್ದಾರೆ' ಎಂದು ಅವಹೇಳನ ಮಾಡಿದ್ದರು. ಇದರ ಬೆನ್ನಲ್ಲೇ ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದರು. ರವಿಕುಮಾರ್ ಅವರ ಹೇಳಿಕೆ ವಿರುದ್ಧ ರಾಜ್ಯ ಸರ್ಕಾರ ಕೂಡ ಕ್ರಮ ಕೈಗೊಳ್ಳಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಎಚ್ಚರಿಕೆ ನೀಡಿದ್ದರು.

## ಸರ್ಕಾರಕ್ಕೆ ಭಾರೀ ಹಿನ್ನಡೆ : ಹುಬ್ಬಳ್ಳಿ ಗಲಭೆ ಸೇರಿದಂತೆ 43 ಕ್ರಿಮಿನಲ್ ಕೇಸ್ ಹಿಂದಕ್ಕೆ ಪಡೆದ ಆದೇಶ ರದ್ದು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.29: ಹುಬ್ಬಳ್ಳಿ ಗಲಭೆ ಪ್ರಕರಣ ಸೇರಿದಂತೆ 43 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆದ ಕರ್ನಾಟಕ ರಾಜ್ಯ ಸರ್ಕಾರದ ಆದೇಶವನ್ನು ಕರ್ನಾಟಕ ಹೈಕೋರ್ಟ್ ರದ್ದುಗೊಳಿಸಿದೆ.

ಸಂಘಟನಾ ಹೋರಾಟಗಾರರು, ರಾಜಕಾರಣಿಗಳು ಸೇರಿದಂತೆ 43 ಪ್ರಕರಣಗಳನ್ನು ಅಕ್ಟೋಬರ್ 10, 2024 ರಂದು ರಾಜ್ಯ ಸರ್ಕಾರ ರದ್ದುಗೊಳಿಸಿತ್ತು. ಸರ್ಕಾರದ ಕ್ರಮವನ್ನು ಪ್ರಶ್ನಿಸಿ ಗಿರೀಶ್ ಭಾರದ್ವಾಜ್ ಎಂಬುವರು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಸಿಜೆ ಎನ್.ವಿ.ಅಂಜಾರಿಯಾ, ನ್ಯಾ.ಕೆ.ವಿ.ಅರವಿಂದ್ ಅವರಿದ್ದ



ದ್ವಿಸದಸ್ಯ ಪೀಠ ಇಂದು ಸರ್ಕಾರದ ಆದೇಶವನ್ನು ರದ್ದುಗೊಳಿಸಿದೆ. ನ್ಯಾ.ಎನ್.ವಿ.ಅಂಜಾರಿಯಾ ಅವರು ಸುಪ್ರೀಂ ಕೋರ್ಟ್ ಜಡ್ಜ್ ಆಗಿ ನೇಮಕವಾಗಿದ್ದು ಇಂದು ಅವರು

(2ನೇ ಪುಟ ನೋಡಿ)

## ಫೋನ್ ಪೇ ಮೂಲಕ ಹಣ ಪಡೆದ ಅಧಿಕಾರಿ ಲೋಕಾಯುಕ್ತ ಬಲೆಗೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.29: ಈರುಳ್ಳಿ ಶೇಡ್ ನಿರ್ಮಾಣದ ಸಬ್ಸಿಡಿ ಹಣದಲ್ಲಿ 20ಸಾವಿರ ರೂಪಾಯಿ ಹಣ ಬೇಡಿಕೆ ಇಟ್ಟು 5 ಸಾವಿರ ಫೋನ್ ಪೇ ಮೂಲಕ ಲಂಚದ ಹಣದ ಪಡೆದಿದ್ದ ಯಾದಗಿರಿ ಸಹಾಯಕ ನಿರ್ದೇಶಕ ಶಿವದತ್ತ ಲೋಕಾಯುಕ್ತ ಪೊಲೀಸರ ಬಲೆಗೆ ಸಿಕ್ಕಿ ಹಾಕಿಕೊಂಡಿದ್ದಾನೆ. ಬದ್ದೆಪಲ್ಲಿ ಗ್ರಾಮದ ರೈತ ಶಂಕರಪ್ಪ ಈರುಳ್ಳಿ ಶೇಡ್ ನಿರ್ಮಾಣ ಮಾಡಿಕೊಂಡಿದ್ದ, ಸರಕಾರ 80 ಸಾವಿರ ರೂಪಾಯಿ ಸಬ್ಸಿಡಿ ಹಣ ಪಾವತಿ ಮಾಡಿತ್ತು. ಸಬ್ಸಿಡಿ ಹಣದಲ್ಲಿ ಸುಮಾರು 20 ಸಾವಿರ ರೂಪಾಯಿ ಬೇಡಿಕೆ ಇಟ್ಟಿದ್ದನು. ಇಂದು ರೈತ ಶಂಕರೆಪ್ಪನಿಗೆ ಅಧಿಕಾರಿ



ಲಂಚದ ಹಣ ಪಡೆಯಲು ಫೋನ್ ಪೇ ನಂಬರ್ ನೀಡಿದನು. ರೈತ 5 ಸಾವಿರ ರೂಪಾಯಿ ಹಣ ಫೋನ್ ಮೂಲಕ ಜಮಾ ಮಾಡಿದನು. ರೈತ ಶಂಕರೆಪ್ಪ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿರುವ ಹಿನ್ನಲೆ, ಯಾದಗಿರಿ ಅಂಬೇಡ್ಕರ್ ನಗರದಲ್ಲಿರುವ ತೋಟಗಾರಿಕೆ ಸಹಾಯಕ ನಿರ್ದೇಶಕ ಕಚೇರಿ ಮೇಲೆ ದಾಳಿ ಮಾಡಿ ಪರಿಶೀಲನೆ ಮಾಡಿದ್ದಾರೆ. ಯಾದಗಿರಿ ಲೋಕಾಯುಕ್ತ ಎಸ್ಪಿ ಬಿ.ಕೆ.ಉಮೇಶ್, ಡಿವೈಎಸ್ಪಿ ಜೆ.ಎಚ್.ಇನಾಂದಾರ್ ಅವರ ಮಾರ್ಗದರ್ಶನದಲ್ಲಿ ದಾಳಿ ಮಾಡಲಾಗಿದೆ. ಲೋಕಾಯುಕ್ತ ಪಿಐಗಳಾದ ಸಿದ್ದರಾಯ, ಸಂಗಮೇಶ ಅವರ ನೇತೃತ್ವದಲ್ಲಿ ದಾಳಿ ಮಾಡಿ ಮಹತ್ವದ ಮಾಹಿತಿ ಪಡೆಯುತ್ತಿದ್ದಾರೆ. ಅಧಿಕಾರಿ ಶಿವದತ್ತನನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಈ ವೇಳೆ ಲೋಕಾಯುಕ್ತ ಸಿಬ್ಬಂದಿಗಳಾದ ಸತೀಶ್, ಅಮರನಾಥ, ರಾಮುನಾಂಯಕ, ಮಲ್ಲಮ್ಮ, ನವೀನ್, ಗಂಗಾಧರ, ಸುಮತಿ, ಮಲ್ಲಪ್ಪ, ಖಾಸೀಂ, ಮಲ್ಲಿನಾಥ, ಮಲ್ಲಿಕಾರ್ಜುನ ಮಡಿವಾಳ ಇದ್ದರು.

## ಮನೆ ಬಾಗಿಲು ಕೊಂಡಿ ಮುರಿದು ಚಿನ್ನ, ಬೆಳ್ಳಿ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.29:ಮನೆಯ ಮುಖ್ಯದ್ವಾರದ ಬಾಗಿಲು ಕೊಂಡಿ ಲಾಕ್ ಮುರಿದು 73,800 ರೂ. ಮೌಲ್ಯದ ಚಿನ್ನ, ಬೆಳ್ಳಿ ಆಭರಣ ಮತ್ತು ಮೊಬೈಲ್ ದೋಚಿಕೊಂಡು ಹೋಗಿರುವ ಘಟನೆ ಕೋಟನೂರ (ಡಿ) ಗ್ರಾಮದ ಶರಣಬಸವೇಶ್ವರ ಕಾಲೋನಿಯಲ್ಲಿ ನಡೆದಿದೆ.

ವಿಶ್ವನಾಥರೆಡ್ಡಿ ಪಾಟೀಲ ಎಂಬುವವರ ಮನೆ ಬೀಗ ಮುರಿದು 16 ಸಾವಿರ ರೂ.ಮೌಲ್ಯದ 20 ತೊಲೆಯ ಬೆಳ್ಳಿಯ ಆರತಿ ಸೆಟ್, 16 ಸಾವಿರ ರೂ. ಮೌಲ್ಯದ 10 ತೊಲೆಯ 2 ಬಳ್ಳಿ ಸಮೆ, 8 ಸಾವಿರ ರೂ.ಮೌಲ್ಯದ 10 ತೊಲೆ ತೂಕವಿರುವ 5 ಬೆಳ್ಳಿಯ ಕುಂಕುಮ ಭರಣಿ, 9,600 ರೂ. ಮೌಲ್ಯದ 12 ತೊಲೆಯ ಬೆಳ್ಳಿ ತಟ್ಟೆ, 18 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ ಕಿವಿಯೋಲೆ, 5

(2ನೇ ಪುಟ ನೋಡಿ)

## ಸರ್ಕಾರ ಇನ್ನಾದರೂ, ಓಲೈಕೆ ರಾಜಕಾರಣ ಬಿಟ್ಟು ಜನರ ಹಿತ ಕಾಪಾಡಲಿ: ಅರವಿಂದ್ ಬೆಲ್ಲದ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಮೇ.29:ಹುಬ್ಬಳ್ಳಿ ಗಲಭೆ ಪ್ರಕರಣ ಸೇರಿ 43 ಪ್ರಕರಣಗಳನ್ನು ರದ್ದುಗೊಳಿಸಿದ್ದ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ. ಇದರಿಂದ ಸರ್ಕಾರಕ್ಕೆ ತೀವ್ರ ಮುಖಭಂಗವಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷ ಉಪನಾಯಕ ಅರವಿಂದ್ ಬೆಲ್ಲದ್ ಟೀಕಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆ ಮೇಲೆ ನಡೆಸಿದ ದಾಳಿ ಸೇರಿ 43 ಪ್ರಕರಣಗಳನ್ನು ರದ್ದುಗೊಳಿಸುವ ಕುರಿತು ಕೆಲ ತಿಂಗಳ ಹಿಂದೆ ಸರ್ಕಾರ ನಿರ್ಧರಿಸಿತ್ತು. ಇದನ್ನು ಪ್ರಶ್ನಿಸಿ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ, ಸರ್ಕಾರದ ನಡೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ



ಪ್ರಕರಣ ವಾಪಸ್ ಪಡೆದಿದ್ದನ್ನು ರದ್ದು ಮಾಡುವಂತೆ ಆದೇಶಿಸಿದೆ.

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಬೆಲ್ಲದ್, ಅತ್ಯಂತ ಹೀನ ಕೃತ್ಯಗಳಲ್ಲಿ ಭಾಗಿಯಾದವರಿಗೆ ಕಠಿಣ ಶಿಕ್ಷೆ ನೀಡುವ ಬದಲು ಅವರ ರಕ್ಷಣೆ ಸರ್ಕಾರ ನಿಂತಿರುವುದು ನಾಚಿಗೇಡಿನ ಸಂಗತಿ ಎಂದು ಕಿಡಿಕಾರಿದ್ದಾರೆ. ಇಂತಹ ಪ್ರಕರಣ ವಾಪಸ್ ಪಡೆಯುವುದೇ ಸರಿಯಲ್ಲ. ಆದರೂ ರಾಜಕೀಯ ಒತ್ತಡ ಹಾಗೂ ಮುಸ್ಲಿಂ ಓಲೈಕೆ ರಾಜಕಾರಣ-ಕ್ಕೆ ಕೇಸ್ ವಾಪಸ್ ಪಡೆದಿದೆ. ರಾಜ್ಯದ ಹಿತದೃಷ್ಟಿಯಿಂದ ಕೆಲಸ ಮಾಡಬೇಕೆ ಹೊರತು, ಮುಸ್ಲಿಂ ಓಲೈಕೆ ರಾಜಕಾರಣ ಮಾಡಬಾರದು. ಇನ್ನಾದರೂ ಸರ್ಕಾರ ಡಿಜೆ ಹಳ್ಳಿ, ಕೆಜೆ ಹಳ್ಳಿ ಗಲಭೆ ಪ್ರಕರಣದಲ್ಲಿ ಭಾಗಿಯಾದವರ ಮೇಲೆ ಕ್ರಮಹಿಸಲಿ ಎಂದು ಆಗ್ರಹಿಸಿದ್ದಾರೆ.

## ಛಲವಾದಿ ನಾರಾಯಣಸ್ವಾಮಿ, ರವಿಕುಮಾರ್ ವಿರುದ್ಧ ರಾಜ್ಯಪಾಲರಿಗೆ ಕಾಂಗ್ರೆಸ್ ದೂರು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.29:ಆಡಳಿತಾರೂಢ ಕಾಂಗ್ರೆಸ್ ನ ಎಂಎಲ್‌ಸಿಗಳ ನಿಯೋಗ ಗುರುವಾರ ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತು ವಿರೋಧ ಪಕ್ಷದ ಮುಖ್ಯ ಸಚೇತಕ ಎನ್ ರವಿಕುಮಾರ್ ಅವರ ವಿರುದ್ಧ ದೂರು ನೀಡಿದ್ದು, ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ. ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರ



ವಿರುದ್ಧ ರವಿಕುಮಾರ್ ನೀಡಿದ ಹೇಳಿಕೆಗೆ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಫೌಜಿಯಾ ಅವರು ಐಎಎಸ್ ಅಧಿಕಾರಿಯೋ ಅಥವಾ "ಪಾಕಿಸ್ತಾನದಿಂದ ಬಂದವರೋ" ಎಂದು ರವಿಕುಮಾರ್ ಹೇಳಿದ್ದು, ಇದು ವ್ಯಾಪಕ ಖಂಡನೆಗೆ ಕಾರಣವಾಗಿದೆ.

ಇನ್ನು ಇತ್ತೀಚೆಗೆ ಛಲವಾದಿ ನಾರಾಯಣಸ್ವಾಮಿ ಅವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ನಾಯಿಗೆ ಹೋಲಿಸಿದ್ದರು.

ವಿಧಾನ ಪರಿಷತ್‌ನ ಆಡಳಿತ ಪಕ್ಷದ ನಾಯಕರಾದ ಎನ್.ಎಸ್.ಭೋಸರಾಜು ಹಾಗೂ ವಿಧಾನ ಪರಿಷತ್ತಿನ ಮುಖ್ಯ ಸಚೇತಕರಾದ ಸಲೀಂ ಅಹ್ಮದ್ ಅವರ ನೇತೃತ್ವದ ನಿಯೋಗ ಇಂದು ರಾಜ್ಯಪಾಲರನ್ನು

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಅತ್ಯುತ್ತಮ ಶಿಕ್ಷಣ ನಮ್ಮ ಗುರಿ

ಮಕ್ಕಳು ಸಹ ಶಾಲೆಯಿಂದ ಹೊರಗುಳಿಯದಂತೆ ಶಿಕ್ಷಕರು ಎಚ್ಚರವಹಿಸಬೇಕು. ರಾಜ್ಯದಲ್ಲಿ ಒಟ್ಟು 841 ವಸತಿ ಶಾಲೆಗಳನ್ನು ತೆರೆಯಲಾಗಿದೆ. ಪ್ರತೀ ಹೋಬಳಿಯಲ್ಲಿಯೂ ವಸತಿ ಶಾಲೆ ಪ್ರಾರಂಭಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ 625ಕ್ಕೆ 625 ಅಂಕ ಪಡೆದ 40 ವಿದ್ಯಾರ್ಥಿಗಳನ್ನು ಹಾಗೂ ಶೇ.100 ರಷ್ಟು ಫಲಿತಾಂಶ ಪಡೆದ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರನ್ನು ಹಾಗೂ ಪಿಯುಸಿಯಲ್ಲಿ ಹೆಚ್ಚಿನ ಅಂಕಗಳಿಸಿದ 06 ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ವಿದ್ಯಾ ವಿಕಾಸ ಯೋಜನೆಯಡಿ ಸಾಂಕೇತಿಕವಾಗಿ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ, ಸಮವಸ್ತ್ರ ವಿತರಿಸಿದರು. ಸರ್ಕಾರಿ ಶಾಲೆಗಳ ಗುಣಮಟ್ಟದ ಶಿಕ್ಷಣಕ್ಕಾಗಿ ಕಾರ್ಪೋರೇಟರ್ ಸಂಸ್ಥೆಗಳಲ್ಲಿ ಒಡಂಬಡಿಕೆ ಮಾಡಿಕೊಳ್ಳಲಾಯಿತು ಎಂದು ತಿಳಿಸಿದರು.

ಶಿಕ್ಷಿತರಾದಲ್ಲಿ ಎಲ್ಲಾ ರಾಜನಾಗಿ ರೂಪುಗೊಳ್ಳಬಹದು – ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಾತನಾಡಿ, ಚೆನ್ನಾಗಿ ಓದಿದರೆ ಎಲ್ಲಾ ರಂಗದಲ್ಲೂ ರಾಜನಾಗಿ ರೂಪುಗೊಳ್ಳಬಹುದು. ಇಲ್ಲವಾದರೆ ಸೇವಕನಾಗಿ ಇರಬೇಕಾಗುತ್ತದೆ. ಇವೆರಡರ ಆಯ್ಕೆ ನಿಮ್ಮದು. ಎಲ್ಲಿ ಶ್ರಮ ಇದೆಯೋ ಅಲ್ಲಿ ಫಲವಿದೆ. ಎಲ್ಲಿ ಮನಸ್ಸಿದೆಯೋ ಅಲ್ಲಿ ಮಾರ್ಗವಿದೆ ಎಂದು ಸರ್ಕಾರಿ ಶಾಲಾ ಮಕ್ಕಳಿಗೆ ಕಿವಿಮಾತು ಹೇಳಿದರು.ಇಷ್ಟು ದಿನ ಮಕ್ಕಳು ರಜೆಯಲ್ಲಿ ನಲಿದಾಡಿದ್ದೀರಿ. ಈಗ ನಲಿಯುವುದರ ಜತೆಗೆ ಕಲಿಯಿರಿ ಎಂದು ಶಾಲೆಗಳಿಗೆ ನಿಮ್ಮನ್ನು ಸ್ವಾಗತಿಸುತ್ತಿದ್ದೇವೆ. ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳ ಪೊ?ಷಕರಿಗೆ ನಾನು ಅಭಿನಂದನೆ ಸಲ್ಲಿಸುತ್ತೇನೆ. ಕಳೆದ ವರ್ಷ ಬಾಗಲಕೋಟೆ ಮೊರಾರ್ಜಿ ದೇಸಾಯಿ ಶಾಲೆಯ ವಿದ್ಯಾರ್ಥಿನಿ ಅಂಕಿತಾ ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದರು. ಈ ವರ್ಷ ಬೆಳಗಾವಿಯ ಬೈಲಹೊಂಗಲದ ದೇವಲಾಪುರ ಸರ್ಕಾರಿ ಶಾಲೆಯ ವಿದ್ಯಾರ್ಥಿನಿ ರೂಪಾ ಪಾಟೀಲ್ ಅವರು ಅಗ್ರಸ್ಥಾನ ಪಡೆದಿದ್ದಾರೆ. 10ನೇ ತರಗತಿ ಪರೀಕ್ಷೆಯಲ್ಲಿ 625 ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳ ಪೋಷಕರು ಹಾಗೂ ಶಿಕ್ಷಕರಿಗೆ ಸರ್ಕಾರ ಅಭಿನಂದಿಸುತ್ತಿದೆ ಎಂದರು.

ಬೀಜ ಬಿತ್ತಿದರೆ ಉತ್ತಮ ಬೆಳೆ ಬೆಳೆಯುತ್ತದೆ. ಜ್ಞಾನವನ್ನು ಬಿತ್ತಿದರೆ ಉತ್ತಮ ಪ್ರಜೆಗಳಾಗುತ್ತಾರೆ. ನೀವೆಲ್ಲರೂ ದೇಶದ ಆಸ್ತಿ ಎಂದು ನಮ್ಮ ಸರ್ಕಾರ ಹೆಚ್ಚಿನ ಸಹಕಾರ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ. ಸರ್ಕಾರಿ ಶಾಲೆ ಮಕ್ಕಳಿಗೆ ಖಾಸಗಿ ಶಾಲೆಗಳಿಗಿಂತ ಉತ್ತಮ ಗುಣಮಟ್ಟದ ಶಿಕ್ಷಣ ಸಿಗಬೇಕು ಎಂದು ಶಿಕ್ಷಕರು ಪ್ರಯತ್ನಿಸುತ್ತಿದ್ದಾರೆ. ಶಿಕ್ಷಣದ ಬೇರು ಕಹಿಯಾಗಿದ್ದರೂ ಫಲ ಸಿಕ್ಕಾಗ ಬಹಳ ಸಿಹಿಯಾಗಿರುತ್ತದೆ. ಬೇಸಿಗೆ ರಜೆ ಮುಗಿಸಿರುವ ನೀವು ಈಗ ಶಾಲೆಗೆ ಬಂದು ಕಲಿತು ಉತ್ತಮ ಪ್ರಜೆಯಾಗಬೇಕು ಎಂದು ಹೇಳಿದರು.

**ಉದ್ಯೋಗ ಪಡೆಯುವುದಷ್ಟೇ ಕನಸಾಗಬಾರದು :**

ನೀವು ಜೀವನದಲ್ಲಿ ಯಶಸ್ಸು ಸಾಧಿಸಲು ಕನಸು ಕಾಣಬೇಕು, ಕನಸು ಈಡೇರಿಸಿಕೊಳ್ಳಲು ಬಯಸಬೇಕು. ಕನಸಿಗಾಗಿ ಬದ್ಧತೆ ಹೊಂದಿರಬೇಕು, ಅದಕ್ಕಾಗಿ ಶಿಸ್ತು ಹೊಂದಿರಬೇಕು. ನಿಮ್ಮ ಕನಸು ಗಗನದೆತ್ತರಕ್ಕೆ ಇರಬೇಕು. ಉದ್ಯೋಗ ಪಡೆಯುವುದಷ್ಟೇ ನಿಮ್ಮ ಕನಸಾಗಬಾರದು. ಬೇರೆಯವರಿಗೆ ಉದ್ಯೋಗ ಸೃಷ್ಟಿಸುವ ಮಟ್ಟಕ್ಕೆ ನೀವು ಬೆಳೆಯುವುದು ನಿಮ್ಮ ಕನಸಾಗಬೇಕು. ಈ ದೇಶದಲ್ಲಿ ಅತಿ ಹೆಚ್ಚು ಇಂಜಿನಿಯರ್‌ಗಳು,

ವೈದ್ಯರು, ಮಾನವ ಸಂಪನ್ಮೂಲ ತಯಾರಾಗುತ್ತಿರುವುದು ಕರ್ನಾಟಕ ರಾಜ್ಯದಲ್ಲಿ ವಿಶ್ವದ ಎಲ್ಲಾ ದೇಶಗಳಿಂದ ಬೆಂಗಳೂರಿಗೆ ಬಂದು ವ್ಯಾಸಂಗ ಮಾಡುತ್ತಿದ್ದಾರೆ. ಐಟಿ ಬಿಟಿ, ಸಂಶೋಧನೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಬೆಂಗಳೂರು ಯಶಸ್ಸು ಸಾಧಿಸಿದೆ. ಕೃಷ್ಣರಾಜ ಒಡೆಯರ್ ಅವರ ಕಾಲದಿಂದ ವಿವಿಧ ಸರ್ಕಾರಗಳು ಇಲ್ಲಿ ಶೈಕ್ಷಣಿಕವಾಗಿ ಅಡಿಪಾಯ ಹಾಕಿದ ಪರಿಣಾಮ ನಮ್ಮ ರಾಜ್ಯ ಹಾಗೂ ಬೆಂಗಳೂರು ಈ ಸಾಧನೆ ಮಾಡಿದೆ ಎಂದು ತಿಳಿಸಿದರು.

ದೇಶದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರೂ ಅವರು ಮಕ್ಕಳನ್ನು ದೇಶದ ನಿಧಿ ಎಂದು ಪರಿಗಣಿಸಿದ್ದರು, ದಾಯಾದಿ ದಕ್ಕಿಸದ, ನೀರಿನಲ್ಲಿ ನೆನೆಯದ, ಅಗ್ನಿಯಲ್ಲಿ ಸುಡದ ಗುಪ್ತ ನಿಧಿ ಎಂದರೆ ಅದು ವಿದ್ಯೆ. ಈ ವಿದ್ಯೆಯನ್ನು ನೀವು ಸರಿಯಾದ ರೀತಿ ಧಕ್ಕಿಸಿಕೊಳ್ಳಬೇಕು. ಆಮೂಲಕ ನೀವು ದೇಶದ ಆಸ್ತಿಯಾಗಬೇಕು. ನಾನು ವಿದ್ಯಾರ್ಥಿಯಾಗಿದ್ದಾಗಲೇ ರಾಜಕೀಯ ಪ್ರವೇಶಿಸಿದೆ. ಹೀಗಾಗಿ ಶಿಕ್ಷಣದ ಬಗ್ಗೆ ಹೆಚ್ಚು ಗಮನಹರಿಸಲು ಸಾಧ್ಯವಾಗಲಿಲ್ಲ. ನಾನು ವಿಧಾನಸೌಧಕ್ಕೆ ಹೋದಾಗ ಅಲ್ಲಿದ್ದ ಹಿರಿಯ ನಾಯಕರು ಭಾಷಣ ಕೇಳಿದ ನಂತರ ನನಗೆ ವಿದ್ಯೆ ಕೊರತೆ ಇದೆ ಎಂದು ಅರಿವಾಯಿತು. ಹೀಗಾಗಿ ನಾನು 47ನೇ ವಯಸ್ಸಿಗೆ ಮೈಸೂರು ಮುಕ್ತ ವಿವಿಯಲ್ಲಿ ಪದವಿ ಪಡೆದೆ. ನಾನು ಸಚಿವ ಸಂಪುಟ ಸದಸ್ಯನಾದಾಗ ಸಿಕ್ಕ ಸಂತೋಷಕ್ಕಿಂತ ಪದವಿ ಪಡೆದಾಗ ಹೆಚ್ಚು ಸಂತೋಷವಾಯಿತು" ಎಂದರು.ಸರ್ಕಾರಿ ಶಾಲೆಗಳನ್ನು ಉನ್ನತ ದರ್ಜೆಗೆ ಏರಿಸಲು 2 ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ನಿರ್ಮಿಸಲಾಗುತ್ತಿದೆ.

ಇದರಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಒಳಗೊಂಡು ಶಿಕ್ಷಕರ ಕೊರತೆ ಇರುವ ಕಡೆ ಅವರಿಂದ ಶಿಕ್ಷಕರನ್ನು ಪೂರೈಸಲಾಗುವುದು. ಅನೇಕ ಸಂಸ್ಥೆಗಳು ಈಗಾಗಲೇ ಪಂಚಾಯ್ತಿ ಮಟ್ಟದಲ್ಲಿ ಈ ಶಾಲೆ ನಿರ್ಮಾಣಕ್ಕೆ ಮುಂದಾಗಿವೆ. ರಾಮಲಿಂಗಾರೆಡ್ಡಿ ಅವರು ಬಿಟಿಎಂ ಕ್ಷೇತ್ರದಲ್ಲಿ ಎಲ್ಲಾ ಸರ್ಕಾರಿ ಶಾಲೆಗಳನ್ನು ಮಾದರಿ ಶಿಕ್ಷಣ ಸಂಸ್ಥೆಗಳಾಗಿ ಪರಿವರ್ತಿಸಿದ್ದಾರೆ. ಅವರ ಕ್ಷೇತ್ರದಲ್ಲಿ ಈ ಕಾರ್ಯಕ್ರಮ ನಡೆಯುತ್ತಿದೆ. ಆಮೂಲಕ ಹೊಸ ಇತಿಹಾಸ ಸೃಷ್ಟಿಸಿದ್ದಾರೆ ಎಂದು ತಿಳಿಸಿದರು.

**ಸ್ವಾತಂತ್ರ್ಯ ಬಂದ ಮೇಲೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು – ಸಚಿವ ರಾಮಲಿಂಗಾರೆಡ್ಡಿ**

ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಮಾತನಾಡಿ, ಈ ವರ್ಷ ಶೈಕ್ಷಣಿಕ ವರ್ಷ ಪ್ರಾರಂಭವಾಗುತ್ತಿದೆ. ಸ್ವಾತಂತ್ರ ಪೂರ್ವದಲ್ಲಿ ವಿದ್ಯಾವಂತರ ಸಂಖ್ಯೆ ಕಡಿಮೆ ಇತ್ತು. ಆದರೆ ಸ್ವಾತಂತ್ರ್ಯ ಬಂದ ಮೇಲೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಇಂದಿರಾಗಾಂಧಿ, ಜವಾಹರ ಲಾಲ್ ನೆಹರು ಅವರು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡದ್ದರು. ರಾಜೀವ್ ಗಾಂಧಿ ಅವರು ಬ್ಲಾಕ್ ಬೋರ್ಡ್ ಕಾರ್ಯಕ್ರಮದಡಿ ಪ್ರತಿ ತರಗತಿಗೆ ಒಬ್ಬ ಶಿಕ್ಷಕರು ಇರಬೇಕು ಎಂದು ಜಾರಿ ಮಾಡಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಶಿಕ್ಷಣಕ್ಕೆ ಪ್ರತಿ ವರ್ಷ ಸಹಸ್ರಾರು ಕೋಟಿ ಹಣ ಖರ್ಚು ಮಾಡುತ್ತಿದ್ದು, ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು. ಶಾಲೆ ಬಿಟ್ಟು ಹೋದವರನ್ನು ಮರಳಿ ಶಾಲೆಗೆ ಸೇರಿಸಲಾಗುತ್ತದೆ. ಎಲ್ಲಾ ಮಕ್ಕಳು ಚಿಕ್ಕಂದಿನಿಂದಲೇ ಉನ್ನತ ಮಟ್ಟದ ಶಿಕ್ಷಣ ಪಡೆಯಬೇಕು ಎಂದರು.

**ಗುಣಮಟ್ಟದ ಶಿಕ್ಷಣಕ್ಕೆ ಸರ್ಕಾರದಿಂದ ಹೆಚ್ಚಿನ ಒತ್ತು – ಸಚಿವ ಮಧು ಬಂಗಾರಪ್ಪ**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿ, ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳು ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಿದ್ದಾರೆ. ಮುಖ್ಯಮಂತ್ರಿಗಳಿಗೆ ಮಕ್ಕಳು ಶಾಲೆಗೆ ಓಡೋಡಿ ಬಂದು ಪ್ರವೇಶ ಪಡೆಯಬೇಕು ಎನ್ನುವ ಉದ್ದೇಶದಿಂದ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಒತ್ತ ನೀಡಿದ್ದಾರೆ. 10 ತಿಂಗಳಲ್ಲಿ 13 ಸಾವಿರ ಶಿಕ್ಷಕರನ್ನು ನೇಮಕಾತಿ ಮಾಡಿದ್ದಾರೆ.

ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ಒಳ ಮೀಸಲಾತಿ ವರದಿ ಬಂದ ನಂತರ ಎರಡು ತಿಂಗಳಲ್ಲಿ ಸುಮಾರು 17 ಸಾವಿರ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು.

ಶಿಕ್ಷಣಕ್ಕೆ ಕೊರತೆಯಾಗಬಾರದು ಎಂದು ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲಾಗಿದೆ. ಮಕ್ಕಳಿಗೆ ಪೌಷ್ಠಿಕತೆಯ ಶಕ್ತಿ ತುಂಬಲು 10ನೇ ತರಗತಿಯವರೆಗೆ 2 ಮೊಟ್ಟ ನೀಡಲಾಗುವುದು. ಮೊಟ್ಟೆ ತಿನ್ನದವರಿಗೆ ಬಾಳೆಹಣ್ಣು ಮತ್ತು ಚಿಕ್ಕಿ ನೀಡಲಾಗುವುದು ಎಂದರು.ದೇಶದಲ್ಲೇ ಪ್ರಥಮ ಬಾರಿಗೆ ಎಸ್.ಎಸ್.ಎಲ್.ಸಿ

ಮತ್ತು ಪಿಯುಸಿಯಲ್ಲಿ 3 ಪರೀಕ್ಷೆ ಮಾಡಲಾಗುತ್ತಿದೆ. ಪಿಯುಸಿ ಪರೀಕ್ಷೆಯಲ್ಲಿ ಎರಡನೇ ಬಾರಿಗೆ ಶೇಕಡ 85ರಷ್ಟು ವಿದ್ಯಾರ್ಥಿಗಳು ಪರೀಕ್ಷೆ ಬರೆದು, 70 ಸಾವಿರ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ 2ನೇ ಪರೀಕ್ಷೆ ನಡೆಯುತ್ತಿದೆ ಎಂದರು.ಕಾರ್ಯಕ್ರಮದಲ್ಲಿ, ವಿಧಾನ ಪರಿಷತ್ ಸದಸ್ಯರಾದ ರಾಮೋಜಿಗೌಡ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕಾರ್ಯದರ್ಶಿ ವಿ. ರಶ್ಮಿ ಮಹೇಶ್, ಆಯುಕ್ತರಾದ ಡಾ. ಕೆ.ವಿ ತ್ರಿಲೋಕಚಂದ್ರ, ಅಜೀಮ್‌ಜಿ ಪೌಂಡೇಷನ್ ಪ್ರತಿನಿಧಿಗಳು ಸೇರಿದಂತೆ ಶಾಲಾ ಶಿಕ್ಷಣ ಮತ್ತು ಪ್ರೌಢಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಸೇರಿದಂತೆ ವಿವಿಧ ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

# 43 ಕ್ರಿಮಿನಲ್ ಕೇಸ್ ಹಿಂದಕ್ಕೆ ಪಡೆದ ಆದೇಶ ರದ್ದು

ಕರ್ನಾಟಕ ಹೈಕೋರ್ಟ್‌ನಲ್ಲಿ ಕೊನೆಯ ಬಾರಿ ತೀರ್ಪು ಪ್ರಕಟಿಸಿದರು. ಈ ವೇಳೆ, ನಿಮ್ಮೆಲ್ಲರಿಗೂ ತುಂಬಾ ಧನ್ಯವಾದಗಳು. ಇದು ನನ್ನ ಕೊನೆಯ ಬಾರಿ ಈ ಪೀಠದಲ್ಲಿ ಕುಳಿತಿದ್ದೇನೆ. ಎಲ್ಲಾ ವಕೀಲರಿಗೆ, ಎಲ್ಲಾ ಸಿಬ್ಬಂದಿಗೆ ಧನ್ಯವಾದ ಹೇಳುತ್ತೇನೆ. ಇದು ನನ್ನ ಕೊನೆಯ ಆದೇಶ ಎಂದು ತಿಳಿಸಿದರು.

ಪಿಐಎಲ್ ವಿಚಾರಣೆಯ ಸಂದರ್ಭದಲ್ಲೇ ಕೋರ್ಟ್ ಸಚಿವ ಸಂಪುಟದ ಕ್ರಮ ನಿಯಮಬಾಹಿರವಾಗಿದ್ದರೆ ಒಪ್ಪುವುದಿಲ್ಲ, ಪ್ರಕರಣಗಳನ್ನು ಹಿಂಪಡೆಯಲು ಅನುಮತಿ ನೀಡುವುದಿಲ್ಲ ಎಂದು ಹೇಳಿತ್ತು.

ಅರ್ಜಿದಾರರ ಪರ ವಕೀಲರು ಪ್ರಭಾವಿ ವ್ಯಕ್ತಿಗಳೂ ಸೇರಿದಂತೆ ಕೆಲವು ರಾಜಕಾರಣಿಗಳ ವಿರುದ್ಧದ ಕ್ರಿಮಿನಲ್ ಪ್ರಕರಣಗಳನ್ನು ಅಪರಾಧ ದಂಡ ಸಂಹಿತೆ ಸೆಕ್ಷನ್ 321ಕ್ಕೆ ವಿರುದ್ಧವಾಗಿ ಸರಕಾರ ಹಿಂಪಡೆದಿದೆ ಎಂದು ಹೇಳಿರುವುದು ಮೇಲ್ನೋಟಕ್ಕೆ ಸಮರ್ಥನೀಯವಾಗಿದೆ ಎಂದು ಅಭಿಪ್ರಾಯಪಟ್ಟಿತ್ತು.

ಏಪ್ರಿಲ್ 16, 2022 ರಂದು ಯುವಕನೊಬ್ಬ ವಿವಾದಾತ್ಮಕ ಪೋಸ್ಟ್ ಒಂದನ್ನು ಹಾಕಿದ್ದ. ಈ ವಿಚಾರಕ್ಕೆ ಸಂಬಂಧಿಸಿ ಗಲಭೆ ನಡೆದು ಉದ್ರಿಕ್ತರು ಹಳೆ ಹುಬ್ಬಳ್ಳಿ ಠಾಣೆ ಎದುರು ಪೊಲೀಸರು ಹಾಗೂ ವಾಹನಗಳ ಮೇಲೆ ಕಲ್ಲು ತೂರಾಟ ನಡೆಸಿದ್ದರು. ಈ ಸಂಬಂಧ 11 ಎಫ್‌ಐಆರ್ ದಾಖಲಾಗಿ 155 ಮಂದಿ ಮೇಲೆ ಕೇಸ್ ದಾಖಲಾಗಿತ್ತು. ಈ ಘಟನೆಯಲ್ಲಿ 10ಕ್ಕೂ ಹೆಚ್ಚು ಪೊಲೀಸ್ ವಾಹನಗಳಿಗೆ ಹಾನಿಯಾಗಿದ್ದರೆ ಇಬ್ಬರು ಪೊಲೀಸ್ ಸಿಬ್ಬಂದಿ ಗಂಭೀರ ಗಾಯಗೊಂಡಿದ್ದರು.

ಸೆಪ್ಟೆಂಬರ್ 2024 ಎಲ್ಲಾ ಜಿಲ್ಲೆಗಳ ಎಸ್ಪಿ, ಕಮೀಷನರ್ ಗಳಿಗೆ ಪತ್ರ ಬರೆದಿದ್ದ ಡಿಜಿ–ಐಜಿ ನಿಮ್ಮ ಜಿಲ್ಲೆಗಳಲ್ಲಿ ಕೇಸ್ ವಾಪಸ್ ಪಡೆಯುವ ಪ್ರಕರಣಗಳ ಬಗ್ಗೆ ಮಾಹಿತಿ ನೀಡುವಂತೆ ಕೋರಿದ್ದರು. ಇದರ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಕ್ಯಾಬಿನೆಟ್ ಸಭೆಯಲ್ಲಿ ಹುಬ್ಬಳ್ಳಿ ಗಲಭೆಯಲ್ಲಿ ದಾಖಲಾಗಿದ್ದವರ ಮೇಲಿನ ಪ್ರಕರಣವನ್ನು ವಾಪಸ್ ಪಡೆಯುವ ನಿರ್ಧಾರ ಕೈಗೊಳ್ಳಲಾಗಿತ್ತು. ಮುಸ್ಲಿಮರನ್ನು ಓಲೈಕೆ ಮಾಡಲು ಈ ಕೇಸ್ ಹಿಂಪಡೆಯಲಾಗಿದೆ ಎಂದು ಹೇಳಿ ಬಿಜೆಪಿ ಭಾರೀ ಪ್ರತಿಭಟನೆ ನಡೆಸಿತ್ತು.

# ಕೊಂಡಿ ಮುರಿದು ಚಿನ್ನ, ಬೆಳ್ಳಿ ಕಳವು

ಸಾವಿರ ರೂ.ಮೌಲ್ಯದ ಐ ಫೋನ್, 1200 ರೂ.ಮೌಲ್ಯದ ಜರ್ಮನ್ ಸಿಲ್ವರ್ ಗ್ಲಾಸ್ ಸೆಟ್, ಕೀಯಾ ಕಾರಿನ ಚಾವಿ ಮತ್ತು ಎಕ್ಸಿಸ್ ಬ್ಯಾಂಕಿನ ಲಾಕರ್ ಚಾವಿ ಕಳವು ಮಾಡಿಕೊಂಡು ಹೋಗಿದ್ದಾರೆ.

ಇವರು 15 ದಿನಗಳ ಹಿಂದೆಯಷ್ಟೇ ಹೊಸ ಮನಿ ಖರೀದಿಸಿ 10 ದಿನಗಳ ಹಿಂದೆಯಷ್ಟೇ ಅಲ್ಲಿಗೆ ಹೋಗಿದ್ದರು ಮತ್ತು ಮನೆಗೆ ಬೀಗ ಹಾಕಿಕೊಂಡು ಶ್ರೀಶೈಲ್‌ಗೆ ಹೋಗಿದ್ದಾಗ ಕಳ್ಳರು ಮನೆ ಬಾಗಿಲು ಕೊಂಡಿ ಲಾಕ್ ಮುರಿದು ಮನೆ ಕಳ್ಳತನ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ರವಿಕುಮಾರ್ ವಿರುದ್ಧ ರಾಜ್ಯಪಾಲರಿಗೆ ಕಾಂಗ್ರೆಸ್ ದೂರು

ಭೇಟಿ ಮಾಡಿ, ಈ ಇಬ್ಬರು ಬಿಜೆಪಿ ಎಂಎಲ್ ಸಿಗಳ ವಿರುದ್ಧ ದೂರು ನೀಡಿದೆ.ರಾಜ್ಯಪಾಲರ ಭೇಟಿಯ ನಂತರ, ಸುದ್ದಿಗಾರರೊಂದಿಗೆ ಮಾತನಾಡಿದ ಬೋಸರಾಜು, "ಅವರ(ನಾರಾಯಣಸ್ವಾಮಿ ಮತ್ತು ರವಿಕುಮಾರ್) ನಡವಳಿಕೆ ತಪ್ಪು ಮತ್ತು ಅವರು ಹೊಂದಿರುವ ಹುದ್ದೆಗಳಿಗೆ ಸೂಕ್ತವಲ್ಲ. ಇಬ್ಬರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳುವಂತೆ ನಾವು ರಾಜ್ಯಪಾಲರನ್ನು ಒತ್ತಾಯಿಸಿದ್ದೇವೆ. ಪ್ರಜಾಪ್ರಭುತ್ವದಲ್ಲಿ ಯಾರೂ ಅಂತಹ ರೀತಿಯ ಹೇಳಿಕೆ ನೀಡಬಾರದು ಎಂದು ರಾಜ್ಯಪಾಲರು ಕೂಡ ಹೇಳಿದ್ದಾರೆ" ಎಂದರು.ಶೀಘ್ರದಲ್ಲೇ ವಿಧಾನ ಪರಿಷತ್ತಿನ ಅಧ್ಯಕ್ಷರಿಗೆ ಇದೇ ರೀತಿಯ ದೂರು ನೀಡುವುದಾಗಿ ಹೇಳಿದ ಅವರು, "ಅವರು ತಮ್ಮ ಸ್ಥಾನಗಳಲ್ಲಿ ಮುಂದುವರಿಯಬಾರದು... ಅವರು(ರವಿಕುಮಾರ್) ಮಹಿಳಾ ಐಎಎಸ್ ಅಧಿಕಾರಿಯ ವಿರುದ್ಧ ಮಾತನಾಡಿದ್ದಾರೆ. ಯಾವುದೇ ಬಿಜೆಪಿ ನಾಯಕರು ತಮ್ಮ ಪಕ್ಷದ ಸಹೋದ್ಯೋಗಿಯ ಹೇಳಿಕೆಯ ಬಗ್ಗೆ ಪ್ರತಿಕ್ರಿಯಿಸುತ್ತಿಲ್ಲ" ಎಂದರು.ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಎನ್ನುವ ಬಿಜೆಪಿ ಸದಸ್ಯರು ಸಮಾಜವನ್ನು ಹೊಡೆಯುವ ಕೆಲಸ ಮಾಡುತ್ತಿದ್ದಾರೆ. ಸಂವಿಧಾನ ವಿರೋಧಿ ಹೇಳಿಕೆಗಳನ್ನು ನೀಡುವುದನ್ನು ಹವ್ಯಾಸವನ್ನಾಗಿಸಿಕೊಂಡಿದ್ದಾರೆ. ದಲಿತ ಸಮುದಾಯವನ್ನು ಹೀಗೆಳೆಯುವಂತಹ ಹೇಳಿಕೆ ನೀಡಿರುವ ಛಲವಾದಿ ನಾರಾಯಣ ಸ್ವಾಮಿ ಅವರನ್ನು ಉಚ್ಚಾಟನೆ ಮಾಡಬೇಕು. ಹಾಗೆಯೇ, ಅಧಿಕಾರಿಯ ಬಗ್ಗೆ ಹೇಳಿಕೆ ನೀಡಿರುವ ರವಿಕುಮಾರ್ ಅವರ ವಿರುದ್ಧ ಕಾನೂನಾತ್ಮಕವಾಗಿ ಹಾಗೂ ಸಂವಿಧಾನಾತ್ಮಕವಾದ ಕ್ರಮಗಳನ್ನು ಕೈಗೊಳ್ಳುವಂತೆ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದೇವೆ ಎಂದರು.

## ಅಹಲ್ಯಬಾಯಿ ಹೋಳ್ಕರ್ ರಿಗೆ ಮರಣೋತ್ತರ
# 'ಭಾರತ ರತ್ನ' ನೀಡಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.29: 17ನೇ ಶತಮಾನದಲ್ಲಿ 12 ಜ್ಯೋತಿರ್ ಲಿಂಗಗಳನ್ನು ಸ್ಥಾಪಿಸಿದ ಪುಣ್ಯ ಶ್ಲೋಕ ಮಾತಾಶ್ರೀ ಅಹಲ್ಯಾಬಾಯಿ ದೇವಿ ಹೋಳ್ಕರ್ ರವರು ಭಾರತ ದೇಶದ್ಯಂತ10,432ದೇವಾಲಯಗಳನ್ನು ಸ್ಥಾಪಿಸಿದ ದಿಟ್ಟವೀರ ಮಹಾರಾಣಿಯ ಧರ್ಮ ರಕ್ಷಣೆಯ ಕಾರ್ಯವನ್ನು ಜಗತ್ತು ಕೊಂಡಾಡುತ್ತಿದೆ. ರಾಜಮಾತ್ ಅಹಲ್ಯಾಬಾಯಿ ದೇವಿ ಹೋಳ್ಕರ್ ರಾಷ್ಟ್ರೀಯ ಏಕತೆಯನ್ನು ಸಾಧಿಸಿ ಅಖಂಡ ಭಾರತ ನಿರ್ಮಾಣ ಪ್ರಯತ್ನ ಮಾಡಿದ ಮಹಾತಾಯಿ. ಮಹಿಳೆ ಅಶ್ವದಳವನ್ನು ಕಟ್ಟಿ ಮಹಿಳಾ ಸಾಧನೆಗೆ ವ್ಯಾಖ್ಯಾನ ಬರೆದವರು, ಇವರ ಆಡಳಿತವನ್ನು ಸುವರ್ಣ ಯುಗ ಎಂದು ಕರೆಯುವರು,ರಾಜಯೋಗಿನಿ ಜನಕಲ್ಯಾಣಕ್ಕಾಗಿ ಅನಾಥಾಲಯ, ಔಷಧ ಕುಟೀರ, ಯಾತ್ರಿಕ ನಿವಾಸಗಳ ಸ್ಥಾಪಿಸಿ ಅವುಗಳಿಗೆ ಆರ್ಥಿಕ ಭದ್ರತೆಯನ್ನು ಕಲ್ಪಿಸಿ ವಿಶೇಷವಾಗಿ ಪ್ರಾಣಿ ಪಕ್ಷಿಗಳಿಗೆ ನೀರು, ಆಹಾರ ಕಾಳಿನ ವ್ಯವಸ್ಥೆ ಕಲ್ಪಿಸಿದ ಮಹಾತಾಯಿ ರಾಜ್ ಮಾತ ಕೊಡುಗೆ ಅವಿಸ್ಮರಣೀಯವಾದದು.

# ಪೌರ ನೌಕರರ ಬೇಡಿಕೆಗಳು ಶೀಘ್ರದಲ್ಲೇ ಈಡೇರಿಸಲು ಆಗ್ರಹ:ಶಿವಕುಮಾರ್ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮೇ.29: ಪೌರ ನೌಕರರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ರಾಜ್ಯಾಧ್ಯಕ್ಷರ ಆದೇಶದ ಮೇರೆಗೆ ಅನಿರ್ದಿಷ್ಟಾವಧಿ ಮುಷ್ಕರ ಬೆಂಬಲಿಸಿ ಪಟ್ಟಣದ ಪುರಸಭೆ ಮುಂಭಾಗದಲ್ಲಿ ನೌಕರರು ಕಾರ್ಯಾಲಯದ ಕೆಲಸಗಳು ಸ್ಥಗಿತಗೊಳಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ, ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೈಯದ್ ಖಾನ, ಈ ಹಿಂದೆ ಸರ್ಕಾರಕ್ಕೆ 45 ದಿವಸಗಳ ಗಡುವು ನೀಡಿದ್ದರೂ ಕೂಡ ಸರ್ಕಾರ ನಮ್ಮ ಬೇಡಿಕೆಗಳು ಈಡೇರಿಸುವಲ್ಲಿ ವಿಫಲವಾಗಿದ್ದರಿಂದ ಕೇಂದ್ರ ಕಚೇರಿಯ ಆದೇಶದಂತೆ ನಾವು ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಂಡಿದ್ದೇವೆ. ಇದರಿಂದ ನೈರ್ಮಲ್ಯ ವಿಭಾಗದ ಕೆಲಸ ಮತ್ತು ಕಾರ್ಯಾಲಯದ ಕೆಲಸಗಳು ಕೂಡ ನಡೆಯುತ್ತಿಲ್ಲ. ಹಾಗಾಗಿ ಸರ್ಕಾರ ಕೂಡಲೇ ಈ ಹೋರಾಟಕ್ಕೆ ಸ್ಪಂದಿಸಿ ನಮ್ಮ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿದರು. ಜಿಲ್ಲಾ ಕಾರ್ಯದರ್ಶಿ ಶಿವಕುಮಾರ್ ಸ್ವಾಮಿ ಮಾತನಾಡಿ, ನೀರು ಸರಬರಾಜು ನೌಕರರು ಹಾಗೂ ಕಾರ್ಮಿಕರನ್ನು ನೇರ ನೇಮಕಾತಿ ಅಡಿಯಲ್ಲಿ ಖಾಯಂ ನೌಕರರನ್ನಾಗಿ ಮಾಡುವ ಉದ್ದೇಶದಿಂದ ರಾಜ್ಯ ವ್ಯಾಪ್ತಿ ಶಾಂತಿಯುತ ಹೋರಾಟವನ್ನು ಹಮ್ಮಿಕೊಂಡಿದ್ದೇವೆ. ಹೋರಾಟಕ್ಕೆ ಸರ್ಕಾರ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ನೌಕರರ ಸಂಘದ ನಾಯಕರ ಜೊತೆ ಚರ್ಚಿಸಿ ಮುಂದಿನ ದಿನಗಳಲ್ಲಿ ನೀರು ಪೂರೈಕೆ ಸ್ಥಗಿತ ಮಾಡಿ ತೀವ್ರವಾದ ಹೋರಾಟವನ್ನು ಹಮ್ಮಿಕೊಳ್ಳುತ್ತೇವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ತಾಲೂಕು ಅಧ್ಯಕ್ಷ ನೀಲಕಂಠ, ಉಪಾಧ್ಯಕ್ಷ ಧನರಾಜ ನೇಳಕೂಡಕ್ಕರ್, ಕಾರ್ಯದರ್ಶಿ ಪೂಜಾ ಪಾನಶೆಟ್ಟಿ, ಸಂತೋಷ ಬಿರಾದಾರ್, ಸೇರಿದಂತೆ ಪೌರ ನೌಕರರು, ಕಾರ್ಮಿಕರು ಉಪಸ್ಥಿತರಿದ್ದರು.

# ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯ ತಾಲೂಕ ಮಟ್ಟದ ಪೂರ್ವಭಾವಿ ಸಭೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮೇ.29:2024–25ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಮತ್ತು 15 ನೇ ಹಣಕಾಸು ಆಯೋಗದ ಅನುದಾನ, 2020–21ನೇ ಸಾಲಿನ 2024–25ನೇ ಸಾಲಿನ ವರೆಗೆ ರಾಜ್ಯ ಹಣಕಾಸು ಆಯೋಗದ ಅನುದಾನ ಹಾಗೂ 2022–23ನೇ ಸಾಲಿನಿಂದ 2024–25ನೇ ಸಾಲಿನ ವರೆಗೆ ಸಮಗ್ರ ಶಿಕ್ಷಣ ಯೋಜನೆಯ ಕುರಿತು ಸಾಮಾಜಿಕ ಪರಿಶೋಧನೆ ಚಿಟಗುಪ್ಪ ತಾಲ್ಲೂಕಿನಾದ್ಯಂತ ಜೂನ್ 2ರಿಂದ ಪ್ರಾರಂಭವಾಗಲಿದೆ. ನಿಗದಿತ ವೇಳಾ ಪಟ್ಟಿಯಲ್ಲಿ ತಿಳಿಸಿರುವಂತೆ ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಪೂರ್ವಭಾವಿ ಸಭೆ, ಕಡತ ಪರಿಶೀಲನೆ, ಕಾಮಗಾರಿಗಳ ಭೌತಿಕ ಪರಿಶೀಲನೆ ಮತ್ತು ಕೆಲಸ ನಿರ್ವಹಣೆ ಮಾಡಿರುವ ಕೂಲಿ ಕಾರ್ಮಿಕರ ಮನೆ ಭೇಟಿ ಕೈಗೊಳ್ಳಲಾಗುವುದು ಮತ್ತು ಐಇಸಿ ಕಾರ್ಯಕ್ರಮಗಳು ಕೈಗೊಳ್ಳಲಾಗುವುದು. ಈ ಪ್ರಕ್ರಿಯೆಯಲ್ಲಿ ಕಂಡು ಬಂದಿರುವ ಅಂಶಗಳನ್ನು ಸಾಮಾಜಿಕ ಪರಿಶೋಧನೆ ಗ್ರಾಮ ಸಭೆಯಲ್ಲಿ ಮಂಡಿಸಿ ತಿರ್ಮಾನಕೈಗೊಳ್ಳಲಾಗುವುದು.ಈ ಪ್ರಕ್ರಿಯೆಯಲ್ಲಿ ಅವಶ್ಯಕತೆ ಇರುವ ದಾಖಲಾತಿಗಳ ಮಾಹಿತಿಯನ್ನು ಇಲಾಖಾವಾರು ಈಗಾಗಲೇ ಅನುಷ್ಠಾನ ಅಧಿಕಾರಿಗಳಿಗೆ ನೀಡಲಾಗಿದೆ. ಅದರಂತೆ ದಾಖಲಾತಿಗಳನ್ನು ನೀಡಿ ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಭಾಗಿಯಾಗಿ ಯಶಸ್ವಿಗೊಳಿಸಲು ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ದೇವದಾಸ್ ತಿಳಿದರು. ನಂತರ ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬ ಮಾಡದೆ ಸೂಚಿತ ವೇಳಾ ಪಟ್ಟಿಯಂತೆ ಪೂರ್ಣಗೊಳಿಸಲು ಸಂತೋಷ್ ಸಹಾಯಕ ನಿರ್ದೇಶಕರು ಪಂ.ರಾ ತಾಲ್ಲೂಕು ಪಂಚಾಯತ ಇವರು ತಿಳಿಸಿದರು. ರಾಹುಲ್ ಕೈವಾರೆ ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕರು ಸಾಮಾಜಿಕ ಪರಿಶೋಧನೆ ಇವರು ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಯೋಜನೆಗಳ ಗುರಿ ಉದ್ದೇಶಗಳ ಬಗ್ಗೆ ಯೋಜನೆ ಅನುಷ್ಠಾನಕ್ಕೆ ಅವಶ್ಯಕತೆ ಇರುವ ದಾಖಲಾತಿಗಳ ಬಗ್ಗೆ ಮತ್ತು ಕಾಮಗಾರಿಗಳ ಭೌತಿಕ ಪರಿಶೀಲನೆ ಅಂಶಗಳ ಬಗ್ಗೆ ಹಾಗೂ ಕೂಲಿ ಕಾರ್ಮಿಕರ ಮತ್ತು ಗ್ರಾಮಸ್ಥರು ಪಡೆಯಬೇಕಾದ ಹಕ್ಕುಬಾಧ್ಯತೆ ಮತ್ತು ಸಾಮಾಜಿಕ ಪರಿಶೋಧನೆ ಗ್ರಾಮ, ಶಾಲಾ ಸಭೆಗಳ ಆಯೋಜನೆ ಬಗ್ಗೆ ಮಾಹಿತಿ ನೀಡಿದರು. ಈ ಸಮಯದಲ್ಲಿ ವಲಯ ಸಾಮಾಜಿಕ ಅರಣ್ಯಾಧಿಕಾರಿಗಳು, ಸಹಾಯಕ ನಿರ್ದೇಶಕರು ತೋಟಗಾರಿಕೆ ಇಲಾಖೆ, ಸಹಾಯಕ ನಿರ್ದೇಶಕರು ಕೃಷಿ ಇಲಾಖೆ, ಸಹಾಯಕ ನಿರ್ದೇಶಕರು ರೇಷ್ಮೆ ಇಲಾಖೆ, ಸಹಾಯಕ ನಿರ್ದೇಶಕರು ಪಶುಪಾಲನಾ ಮತ್ತು ಪಶು ಸಂಗೋಪನೆ ಇಲಾಖೆ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಚೇರಿ ಸಿಬ್ಬಂದಿಗಳು ಮತ್ತು ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತ ಅಧ್ಯಕ್ಷರು,

ಅಭಿವೃದ್ಧಿ ಅಧಿಕಾರಿಗಳು, ಸಂಯೋಜಕರು, ತಾಂತ್ರಿಕ ಸಹಾಯಕರು, ಕಾಯಕ ಮಿತ್ರ, ಹಾಗೂ ಶಾಲಾ ಮುಖ್ಯ ಗುರುಗಳು ಉಪಸ್ಥಿತರಿದ್ದರು.

# ಬಿತ್ತನೆ ಬೀಜ ಸಕಾಲಕ್ಕೆ ಪೂರೈಸಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.29:ಮುಂಗಾರು ಹಂಗಾಮು ಆರಂಭವಾಗಲಿದ್ದು, ರೈತರು ಬಿತ್ತನೆಗೆ ಎಲ್ಲ ರೀತಿಯ ತಯಾರಿಗಳನ್ನು ಮಾಡಿಕೊಳ್ಳುತ್ತಿದ್ದಾರೆ. ಎಲ್ಲ ರೈತರಿಗೆ ಸಕಾಲಕ್ಕೆ ಬಿತ್ತನೆ ಬೀಜಗಳನ್ನು ಪೂರೈಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನ ದಾಬಕಾ, ಕಮಲನಗರ ಹಾಗೂ ಠಾಣಾಕುಶನೂರಗಳಲ್ಲಿ ಗುರುವಾರ 2025–26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ರಾಜ್ಯದಲ್ಲಿಯೇ ಅತಿ ಹೆಚ್ಚು ಸೋಯಾಬೀನ್ ಬಿತ್ತನೆ ಮಾಡಲಾಗುತ್ತದೆ. ಇಲ್ಲಿ ಸಹಜವಾಗಿ ಸೋಯಾಬೀನ್‌ಗ ಹೆಚ್ಚಿನ ಬೇಡಿಕೆಯಿರುತ್ತದೆ. ಹಾಗಾಗಿ ಸೋಯಾಬೀನ್ ಹಾಗೂ ಮತ್ತಿತ್ತರೆ ಬಿತ್ತನೆ ಬೀಜಗಳಿಗೆ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಎಲ್ಲ ಗ್ರಾಮಗಳಲ್ಲಿ ಡೊಂಗುರ ಸಾರಿ ಬೀಜ ವಿತರಿಸುವ ದಿನಾಂಕಗಳ ಬಗ್ಗೆ ಮುಂಚಿತವಾಗಿ ತಿಳಿಸಬೇಕು. ಎಲ್ಲಿಯೂ ನಿಗದಿತ ದರಕ್ಕಿಂತ ಹಣ ಪಡೆಯುವಂತಿಲ್ಲ. ಮತ್ತು ಅನಾವಶ್ಯಕ ರಸಗೊಬ್ಬರಗಳನ್ನು ನೀಡಿ ರೈತರಿಗೆ ತೊಂದರೆ ಕೊಡಬಾರದೆಂದು ಸೂಚಿಸಿದರು.

ರೈತರಿಗೆ ವಿತರಿಸುತ್ತಿರುವ ಬಿತ್ತನೆ ಬೀಜ ಗುಣಮಟ್ಟದಿಂದ ಕೂಡಿರಬೇಕು.

ಈ ಬಗ್ಗೆ ಅಧಿಕಾರಿಗಳು ವ್ಮುಂಚಿತವಾಗಿಂಯೇ ಖಚಿತಪಡಿಸಿಕೊಳ್ಳಬೇಕು. ಔರಾದ(ಬಿ) ಮತ್ತು ಕಮಲಗರ ತಾಲ್ಲೂಕುಗಳಿಗೆ ಬೇಕಾಗುವಷ್ಟು ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ದಾಸ್ತಾನು ಮಾಡಿಕೊಂಡಿರಬೇಕು. ಕಳಪೆ ಬೀಜ ವಿತರಣೆಯಂತಹ ಲೋಪಗಳು ಕಂಡುಬಂದಲ್ಲಿ ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲವೆಂದು ಎಚ್ಚರಿಸಿದರು.

ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರದ ದರಗಳನ್ನು ಸರಿಯಾಗಿ ಕಾಣುವ ರೀತಿಯಲ್ಲಿ ಪ್ರದರ್ಶಿಸಬೇಕು. ನಿಗದಿತ ದಿನಾಂಕದಂದು ಬಿತ್ತನೆ ಬೀಜ ಖರೀದಿಸಲು ಸಾಧ್ಯವಾಗದ ರೈತರಿಗೂ ಕೂಡ ಬೀಜ ಕಲ್ಪಿಸುವ ವ್ಯವಸ್ಥೆ ಮಾಡಬೇಕು. ಪ್ರತಿ ರೈತರಿಗೆ ರಿಯಾಯಿತಿ ದರದ ಬಿತ್ತನೆ ಬೀಜಗಳು ತಲುಪಿಸಬೇಕೆಂದು ಹೇಳಿದರು.

ಕೃಷಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಸಾಕಷ್ಟಿದೆ. ಇರುವ ಸಿಬ್ಬಂದಿಗಳನ್ನು ಬಳಸಿಕೊಂಡು ನಿಗದಿತ ಅವಧಿಯೊಳಗಾಗಿ ಬಿತ್ತನೆ ಬೀಜ ಪೂರೈಸುವ ಕೆಲಸವಾಗಬೇಕು. ಸಿಬ್ಬಂದಿಗಳ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿವೆ. ರೈತರೊಂದಿಗೆ ಸರಿಯಾಗಿ ವ್ಯವಹರಿಸುವುದಿಲ್ಲ. ಅವಾಚ್ಯ ಪದಗಳನ್ನು ಬಳಕೆ ಮಾಡುತ್ತಾರೆ ಎಂದು ರೈತರು ತಿಳಿಸುತ್ತಿದ್ದಾರೆ. ಇಂಥವುಗಳು ಎಲ್ಲಿಯೂ ಮರುಕಳಿಸಬಾರದು.

ರೈತರು ಕೂಡ ಇಲಾಖೆಯ ಕೆಲಸಗಳಿಗೆ ಅಗತ್ಯ ಸಹಕಾರ ನೀಡಬೇಕು ಎಂದು ಶಾಸಕರು ಕೋರಿದರು.ಸಹಾಯಕ ಕೃಷಿ ನಿರ್ದೇಶಕರಾದ ಧೂಳಪ್ಪ ಪ್ರಾಸ್ತಾವಿಕ ಮಾತನಾಡಿ, ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳಿಗೆ ಅಗತ್ಯವಿರುವಷ್ಟು ಬಿತ್ತನೆ ಬೀಜವನ್ನು ತರಿಸಿಕೊಳ್ಳಲಾಗಿದೆ. ಇನ್ನಷ್ಟು ಬೇಡಿಕೆ ಬಂದಲ್ಲಿ ಹೆಚ್ಚುವರಿ ಬೀಜಗಳನ್ನು ತರಿಸಿಕೊಳ್ಳಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ರೈತರು ನಿರಾತಂಕವಾಗಿ ಕೃಷಿ ಚಟುವಟಿಕೆಗಳನ್ನು ಆರಂಭಿಸಬಹುದು. ಕ್ಷೇತ್ರದ ಬಹುತೇಕ ರೈತರು ಸೋಯಾಬೀನ್‌ಗೆ ಬೇಡಿಕೆ ಸಲ್ಲಿಸುತ್ತಿದ್ದಾರೆ. ಬಹುಬೆಳೆ ಪದ್ಧತಿ ಅಳವಡಿಸಿಕೊಂಡರೆ ರೈತರು ಲಾಭ ಗಳಿಸಬಹುದು. ಈ ದಿಶೆಯಲ್ಲಿ ರೈತರು ಆಲೋಚಿಸಬೇಕು ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಶಿವರಾಜ ಅಲ್ಮಾಜೆ, ಶಿವಾನಂದ ವಡ್ಡೆ, ಸತೀಷ ಪಾಟೀಲ, ಬಸವರಾಜ ಪಾಟೀಲ, ರಂಗರಾವ ಜಾಧವ, ಮಾಧವರಾವ ಚಾಂಗೂಣೆ, ಯೋಗೇಶ ಪಾಟೀಲ, ಅನೀಲ ಬಿರಾದಾರ, ಕೇರಬಾ ಪವಾರ, ನಾಗೇಶ ಪತ್ರೆ, ಮಹೇಶ ಸಜ್ಜನ್, ಪ್ರವೀಣ ಕಾರಬಾರಿ, ಸುಶೀಲಾ ಮಹೇಶ ಸಜ್ಜನ್, ಕಾಶಿನಾಥ ಜೀರ್ಗೆ, ಪ್ರಭುರಾವ ಜೀರ್ಗೆ, ಗಿರೀಶ ವಡೆಯರ್, ಧನರಾಜ ಜೀರ್ಗೆ, ಚಂದ್ರಪ್ಪ ಜೀರ್ಗೆ, ಬಂಟಿ ರಾಂಪೂರೆ, ಸಂಜು ಮುರ್ಕೆ, ಉದಯ ಸೋಲಾಪೂರೆ, ಬಾಲಾಜಿ ವಾಗಮಾರೆ ಸೇರಿದಂತೆ ರೈತರ ಇದ್ದರು.

# ಲಂಡನ್‌ನಲ್ಲೂ ಪುಸ್ತಕಗಳಿಗೆ ಕನ್ನಡದಲ್ಲೇ ಸಹಿ ಮಾಡಿದೆ: ಬಾನುಮುಷ್ತಾಕ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ನಾನು ಇಲ್ಲಿಂದ ಹೊರಟಾಗ ಆ ಪ್ರಶಸ್ತಿಯ ನಿರೀಕ್ಷೆ ಇರಲಿಲ್ಲ. ಆದರೆ, ಲಂಡನ್‌ನಲ್ಲಿ ದಿನ ಕಳೆದಂತೆ ಕನ್ನಡತಿಯಾಗಿ ಬೂಕರ್ ಪ್ರಶಸ್ತಿ ಪಡೆಯಲೇಬೇಕು ಎನ್ನುವ ಹಂಬಲ ಹುಟ್ಟಿಕೊಂಡಿತ್ತು. ಕನ್ನಡ ಮನಸ್ಸುಗಳ ಹಾರೈಕೆಯಿಂದ ಇದೆಲ್ಲವೂ ಸಾಧ್ಯವಾಗಿದೆ ಎಂದು ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಬಾನು ಮುಷ್ತಾಕ್ ತಿಳಿಸಿದರು.

ನಗರದ ಗಾಂಧಿ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಬಹುರೂಪಿ ಪ್ರಕಾಶನ ಮತ್ತು ಪತ್ರಕರ್ತೆಯರ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಭಿನಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಇಂಗ್ಲೆಂಡ್‌ನಲ್ಲಿ ಪ್ರಶಸ್ತಿ ಸ್ವೀಕರಿಸಿದ ಬಳಿಕ ಭಾರತಕ್ಕೆ ಕಾಲಿಡುತ್ತಲೇ ನಡೆದ ಮೊದಲ ಕಾರ್ಯಕ್ರಮದಲ್ಲಿ ಅವರ ಮಾತಾಗಿದೆ. ಕಳೆದ ಬ್ರವರಿಯಲ್ಲಿ ಬೂಕರ್ ಪ್ರಶಸ್ತಿ ಆಯ್ಕೆ ಪ್ರಕ್ರಿಯೆ ಆರಂಭವಾಗಿ ಪ್ರಶಸ್ತಿ ದೊರೆತ ಕ್ಷಣದವರೆಗಿ ರೋಚಕ, ರೋಮಾಂಚಕ ಕ್ಷಣಗಳನ್ನು ತೆರೆದಿಟ್ಟರು.

ಇಲ್ಲಿಯವರೆಗೂ ನಾವು ಪಾಶ್ಚಾತ್ಯ ಕತೆ, ಕಾದಂಬರಿಗಳನ್ನು ಓದಿದ್ದೇವೆ. ಅವರ ಜೀವನಕ್ರಮಗಳನ್ನು ಅಭ್ಯಾಸ ಮಾಡಿದ್ದೇವೆ. ಆದರೆ, ಈಗ ನಾವು ನಮ್ಮ ಕತೆ, ಕಾದಂಬರಿಗಳನ್ನು ಮತ್ತು ಜೀವನ ಕ್ರಮಗಳನ್ನು ಪಾಶ್ಚಾತ್ಯರಿಗೆ ತಿಳಿಸುವ, ನಮ್ಮ ಪಾತ್ರ, ಸಂದರ್ಭಗಳನ್ನು ಪರಿಚಯ ಮಾಡಿಸುವ ಅಗತ್ಯವಿದೆ. ಇದನ್ನು ಮುಕ್ತಮನಸ್ಸಿನಿಂದ ಸ್ವೀಕರಿಸಲು ಸಹ ಅವರು ಸಿದ್ಧರಿದ್ದಾರೆ. ನಮ್ಮಲ್ಲಿರುವ ಸತ್ವವನ್ನು ಅವರಿಗೆ ಪರಿಚಯ ಮಾಡಿಸಬೇಕಿದೆ ಎಂದರು.

ನನಗೆ ಪ್ರಶಸ್ತಿ ದೊರೆತ ಬಳಿಕ ಹಲವು ವೇದಿಕೆ ಚರ್ಚೆಗಳು, 10ಕ್ಕೂ ಹೆಚ್ಚು ಮಾಧ್ಯಮ ಸಂದರ್ಶನಗಳು, ಪುಸ್ತಕಮಳಿಗೆಗಳಲ್ಲಿ ಭಾಷಣಗಳು ಹೀಗೆ ಹಲವು ಕಾರ್ಯಕ್ರಮಗಳಲ್ಲಿ ನಾನು ಮತ್ತು ದೀಪಾ ಭಾಸ್ತಿ ಭಾಗವಹಿಸಿದ್ದೇವು. ಅಲ್ಲಿ ಕಲಿಸುವ ಮೂಲಭೂತ ಪಾಠವೇನೆಂದರೆ ಕತೆಗಳಲ್ಲಿ ಪಾತ್ರಗಳು ಜಡ್ಜ್‌ಗಳಾಗಬಾರದು. ಯಾರ ಪರವಾಗಿಯೂ ಬದ್ಧತೆಯಿಂದ ನಿಲ್ಲಬಾರದು ಎಂಬುದು ಅವರ ನಿಲುವಾಗಿದೆ. ಅದು ನಮಗೂ ಅವರಿಗೂ ತದ್ವಿರುದ್ಧವಾಗಿದೆ ಎನಿಸಿತು. ನಾವು ಬದ್ಧತೆಯಿಂದ ಒಂದು ಕಡೆ ನಿಲ್ಲುತ್ತೇವೆ. ಶೋಷಿತರು, ಇಲ್ಲದವರ ಪರವಾಗಿ ಶತಾಯಗತಾಯ ನಿಂತಿರುತ್ತೇವೆ. ಅವರು ನಿಲ್ಲಬಾರದೆಂದು ಹೇಳುತ್ತಾರೆ.

ಕನ್ನಡ ಲೇಖಕರಿಗೆ ಬದ್ಧತೆ ಎನ್ನುವುದು ಮೂಲಭೂತ ಗುಣವಾಗಿದೆ. ಅದನ್ನು ಹೇಗೆ ಅಳವಡಿಸಿಕೊಂಡಿದ್ದೇನೆ ಮತ್ತು ಅದರ ಅಗತ್ಯತೆ ಏನು ಎಂಬುದನ್ನು ಅವರಿಗೆ ತಿಳಿಸಿದೆ. ಅದಾದ ನಂತರ ಅವರು ಹೇಳಿದರು. ಇಲ್ಲಿಯವರೆಗೂ ನಾವು ಬದ್ಧತೆ ಮತ್ತು ಜಡ್ಜ್‌ಮೆಂಟ್ ನೀಡುವವರಾಗಿರಬಾರದು ಎಂಬ ನಿಲುವಾಗಿತ್ತು. ಬೂಕರ್ ಪ್ರಶಸ್ತಿಯಿಂದ ಇದೊಂದು ಚರ್ಚಾಸ್ಪದ ವಿಷಯವಾಗಿದೆ. ಇದನ್ನು ಮುಕ್ತವಾಗಿ ಸ್ವೀಕರಲಿಸಲಿದ್ದೇವೆ ಎಂದು ತಿಳಿಸಿದರು.

**ಬಂಡಾಯ ಸಾಹಿತ್ಯ ತುಂಬಿದೆ**

ನನಗೆ ಏಕೆ ಕನ್ನಡ ಬಹಳ ಪ್ರಸ್ತುತ ಎನಿಸಲಿದೆ ಎಂದರೆ , ಕನ್ನಡ ಆಲೋಚನೆ, ಜೀನವ ಕ್ರಮ, ಕೊಡು-ಕೊಳ್ಳುವಿಕೆ, ವ್ಯಾವಹಾರಿಕ ಭಾಷೆಯಾಗಿ, ರಾಜಕಾರಣವಾಗಿ ಮುಖ್ಯ ಎನಿಸಿತು. ಪ್ರಶಸ್ತಿ ಪಡೆದ ಬಳಿಕ ನಡೆದ ವೇದಿಕೆ ಕಾರ್ಯಕ್ರಮಗಳಲ್ಲಿ ನಾನು ಅವರಿಗೆ ಪಾಠ ಮಾಡಲು ಶುರು ಮಾಡಿದೆ. ನಮ್ಮ ಸಾಮಾಜಿಕ ಚಳವಳಿ, ರೈತ ಚಳವಳಿ, ದಲಿತ, ಭಾಷಾ ಚಳವಳಿ, ಬಂಡಾಯ ಸಾಹಿತ್ಯದ ಬಗ್ಗೆ ತಿಳಿಸಿದೆ. ಇಂದು ಅವರ ಬಾಯಲ್ಲಿ ಬಂಡಾಯ ಸಾಹಿತ್ಯವೇ ತುಂಬಿದೆ.

ಕನ್ನಡ ಸಾಹಿತ್ಯ, ಚರಿತ್ರೆ, ದಲಿತ ಸಾಹಿತ್ಯ, ಸೀವಾದಿ ಸಾಹಿತ್ಯ ಮತ್ತು ಮುಸ್ಲಿಂ ಸಂವೇದನೆಯ ಸಾಹಿತ್ಯಗಳಾಗಿ ಮೂರು ಕವಲು ಒಡೆದದ್ದನ್ನು ತಿಳಿಸಿದೆ. ಇದರ ಬಗ್ಗೆ ಪಾಠ ಮಾಡಿ ಬಂದೆ. ನನಗೆ ಹಿಡಿತ ಸಿಕ್ಕ ಮೇಲೆ ಅವರನ್ನು ಆವರಿಸಿಬಿಟ್ಟೆ.

35 ಭಾಷೆಗೆ ಅನುವಾದ 'ಎದೆಯ ಹಣತೆ' ಕೃತಿಯು ಭಾರತಿದ 12 ಭಾಷೆ ಸೇರಿ ಜಗತ್ತಿನ 35 ಭಾಷೆಗಳಿಗೆ ಅನುವಾದವಾಗಲಿದೆ. ಆಡಿಯೋ ಹಕ್ಕು ಮತ್ತು ಚಲನಚಿತ್ರದ ಹಕ್ಕುಗಳನ್ನು ಕೂಡ ಪಡೆದಿದ್ದಾರೆ ಎಂದು ತಿಳಿಸಿದರು.

**ಪ್ರವಾಸ ನಿಗದಿ**

ಬೂಕರ್ ಪ್ರಶಸ್ತಿ ಬಂದ ನಂತರ ದೇಶ ವಿದೇಶ ಸುತ್ತಾಟದ ಲಿಸ್ಟೇ ಇದೆ. ಜೂ.13ಕ್ಕೆ ಲಂಡನ್‌ಗೆ ಹೋಗುತ್ತಿದ್ದೇನೆ. ಆಗಸ್ಟ್‌ನಲ್ಲಿ ಸ್ವಿವಲ್ ಇದೆ. ಸಿಲೋನ್, ಆಸ್ಟ್ರೇಲಿಯಾ, ಬಾಲಿ, ನ್ಯೂಯಾರ್ಕ್ ಸೇರಿ ಹಲವು ಕಡೆ ಈಗಾಗಲೇ ಕಾರ್ಯಕ್ರಮಗಳು ನಿಗದಿಯಾಗಿವೆ. 2026ರ ಆಗಸ್ಟ್‌ವರೆಗೂ ಲ್ ಬ್ಯುಸಿ ಶೆಡ್ಯೂಲ್ಡ್ ಇದೆ. ನನ್ನ ಪುಸ್ತಕದ ಬಗ್ಗೆ ಮಾತನಾಡುವುದರಿಂದ ನನ್ನ ಕೆಲಸಕ್ಕೆ ಉತ್ತೇಜನ ಸಿಗಲಿದೆ.

**ಅಲ್ಲಿನ ಪುಸ್ತಕ ಸಂಸ್ಕೃತಿ ವಿಶಿಷ್ಟ**

ಲಂಡನ್ ಸಾಂಸ್ಕೃತಿಕ ನಗರವಾಗಿದೆ. ಮುಕ್ತವಾಗಿ ಹಲವು ಜನರು ವಾಸವಿದ್ದಾರೆ.

ಅಲ್ಲಿನ ಪುಸ್ತಕ ಸಂಸ್ಕೃತಿ ವಿಶಿಷ್ಟವಾಗಿದೆ. ಒಂದೊಂದು ಪುಸ್ತಕ ಮಳಿಗೆಯೂ ತುಂಬಾ ವಿಶಾಲವಾಗಿರುತ್ತದೆ. 4ರಿಂದ 5 ಅಂತಸ್ತುಗಳಿರುತ್ತವೆ. ಕಾಫಿ ಬೂತ್‌ಗಳಿರುತ್ತವೆ. ಅಲ್ಲಿ ಪುಸ್ತಕ ಓದಿ ಬರಬಹುದು. ಓದುಗರು ಪುಸ್ತಕ ಖರೀದಿಸಿ ಸಹಿ ಮಾಡಿಸಿಕೊಂಡೇ ಹೋಗುತ್ತಾರೆ. ಸಹಿ ಮಾಡದೆ ಪುಸ್ತಕವನ್ನು ಖರೀದಿಸುವುದಿಲ್ಲ.

ಕಾರ್ಯಕ್ರಮದ ಬಗ್ಗೆ ಮೊದಲೇ ಪ್ರಚಾರ ಮಾಡಿರುತ್ತಾರೆ. ಪುಸ್ತಕ ಮಳಿಗೆಗಳಲ್ಲಿ ವಿಶಾಲವಾದ ಸಭಾಂಗಣಗಳಿರುತ್ತವೆ. ಅಲ್ಲಿ ನೂರಾರು ಜನರು ಟಿಕೆಟ್ ಪಡೆದು ಲೇಖಕರ ಮಾತುಗಳನ್ನು ಕೇಳಲು ಬಂದಿದ್ದರು. ಅನೇಕರಿಗೆ ಟಿಕೆಟ್ ಕೂಡ ಸಿಗುವುದಿಲ್ಲ.

ಕಾರ್ಯಕ್ರಮದ ನಂತರ ಜನರು ದಿಢೀರ್ ಸರತಿ ಸಾಲಿನಲ್ಲಿ ನಿಲ್ಲುತ್ತಾರೆ. ಹಾರ್ಟ್ ಲ್ಯಾಂಪ್ ಪುಸ್ತಕ ಕೊಂಡು 200ರಿಂದ 300 ಜನ ಪುಸ್ತಕ ಖರೀದಿಸಿ ಆಟೋಗ್ ಪಡೆದರು. ಇದು ನಿಜಕ್ಕೂ ಖುಷಿಯಾಯ್ತು.

ಬೂಕರ್ ಪ್ರಶಸ್ತಿ ಬಳಿಕ ನನ್ನ ಮತ್ತು ದೀಪಾ ಭಾಸ್ತಿ ಅವರನ್ನು ಹಲವು ಬುಕ್ ಸ್ಟೋರ್‌ಗಳಿಗೆ ಕರೆದುಕೊಂಡು ಹೋಗಿದ್ದರು. ಪುಸ್ತಕ ಖರೀದಿ ಮಾಡಿರುವವರೆಲ್ಲರಿಗೂ ಕನ್ನಡದಲ್ಲಿಯೇ ಸಹಿ ಮಾಡಿದ್ದೇನೆ ಎಂದು ಸಂತಸದ ಕ್ಷಣಗಳನ್ನು ಹಂಚಿಕೊಂಡರು.

ಇಂಡಿಯಾದಲ್ಲಿ ಗುದ್ದಾಟವಿದೆ, ಇಂಗ್ಲೆಂಡ್‌ಗೆ ಬಂದುಬಿಡಿ ಅಂದ್ರು, ಹೀಗೆ ಮಾತುಕೆಯಲ್ಲಿರುವ ವೇಳೆ ಅಲ್ಲಿನ ಮಹಿಳೆಯೊಬ್ಬರು ವಿಶ್ವಾಸದಿಂದ 'ನಿಮ್ಮ ದೇಶದಲ್ಲಿ (ಭಾರತ) ಮುಸ್ಲಿಮರಿಗೆ ತುಂಬಾ ಸಮಸ್ಯೆಯಿದೆ. ಒಂದು ವೇಳೆ ಇಲ್ಲಿಗೆ (ಇಂಗ್ಲೆಂಡ್) ಬಂದುಬಿಡಿ ಅಂದ್ರು. ಅದಕ್ಕೆ ನಾನು ಬೇಡ ನಾನು ಅಲ್ಲಿಯೇ ಗುದ್ದಾಡಿ-ಕೊಂಡು ಬದುಕುತ್ತೇವೆ.

ಅಲ್ಲಿಯೇ ಚೆನ್ನಾಗಿದ್ದೇವೆ. ಈ ವಿಚಾರವನ್ನೆಲ್ಲಾ ಯಾರು ಹೇಳಿದ್ರು ಎಂದು ವಿಶ್ವಾಸದಿಂದಲೇ ಹೇಳಿದೆ ಎಂದು ನಕ್ಕರು.

**6 ಕೋಟಿ ರೂ. ವ್ಯವಹಾರ**

ಅಂದಾಜು ಲೆಕ್ಕಚಾರದ ಪ್ರಕಾರ ಸುಮಾರು 6 ಕೋಟಿ ರೂ. ಮೊತ್ತದಷ್ಟು ಬೂಕರ್ ಪ್ರಶಸ್ತಿ ಪಡೆದ 'ಹಾರ್ಟ್‌ಲ್ಯಾಂಪ್' ಕೃತಿ ಮಾರಾಟವಾಗಿದೆ ಎಂದು ಅಲ್ಲಿನ ಪ್ರಕಾಶಕರು ಮಾಹಿತಿ ಹಂಚಿಕೊಂಡಿದ್ದಾರೆ ಎಂದರು.

ಬೂಕರ್ ಭಾಷಣಕ್ಕೆ ಮೆಚ್ಚುಗೆ ಪ್ರಶಸ್ತಿ ಪಡೆದು ನಾನು ಮಾಡಿದ ಭಾಷಣ ಬೂಕರ್ ಪ್ರಶಸ್ತಿ ಜ್ಯೂರಿ ಅಧ್ಯಕ್ಷ ಮ್ಯಾಕ್ಸ್ ಪೋರ್ಟ್ ಅವರ ಭಾಷಣಕ್ಕೆ ಸಮನಾಗಿತ್ತು. ಭಾಷಣದ ಬಗ್ಗೆ ಅಲ್ಲಿ ಬಂದ ವಿದ್ವಾಂಸರು, ಸಾಹಿತಿಗಳು ಮೆಚ್ಚುಗೆ ವ್ಯಕ್ತಪಡಿಸಿದರು ಎಂದರು.

ಈ ಅದ್ಭುತ ಅನುಭವ, ನನ್ನ ವೈಯಕ್ತಿಕವಾದದ್ದು. ಆದರೂ, ಅದು ಆಮುದಾಯಿಕ ಪರಿಣಾಮ ಬೀರಿದೆ ಎಂದು ಈಗ ಅರ್ಥವಾಗಿದೆ. ಜಾತಿ, ಧರ್ಮ, ಭಾಷೆ ಆಧಾರಿತವಾಗಿ ಯಾವುದೇ ದ್ವೇಷ, ಭೇದ ಕಾಣದೆ, ಕನ್ನಡಕ್ಕೆ ಈ ರೀತಿ ಅಪಾರ ಗೌರವ ಸಿಗುತ್ತಿರುವುದು ನನಗೆ ತುಂಬಾ ಸಂತೋಷವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ವೇದಿಕೆ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ವಿಜಯವಾಣಿ ಸಂಪಾದಕ ಕೆ.ಎನ್.ಚನ್ನೇಗೌಡ, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ, ಬಹುರೂಪಿ ಪ್ರಕಾಶನದ ಮುಖ್ಯಸ್ಥ ಜಿ.ಎನ್. ಮೋಹನ್, ಪತ್ರಕರ್ತೆಯರ ಸಂಘದ ಅಧ್ಯಕ್ಷೆ ಪದ್ಮ ಶಿವಮೊಗ್ಗ ಮತ್ತು ಗಾಂಧಿ ಭವನದ ಪರವಾಗಿ ದಿನೇಶ್ ಉಪಸ್ಥಿತರಿದ್ದರು.

# 6ನೇ ತರಗತಿ ಪ್ರವೇಶಾತಿಗೆ ಜೂನ್ 03, 04ರಂದು ಕೌನ್ಸೆಲಿಂಗ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.29- ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮಾದರಿ ವಸತಿ ಶಾಲೆಗಳಲ್ಲಿ 6ನೇ ತರಗತಿಯ ಪ್ರವೇಶಾತಿಗೆ ಸಂಬಂಧಿಸಿದಂತೆ ಜೂನ್ 3 ಹಾಗೂ 4ರಂದು ಕೌನ್ಸಲಿಂಗ್ ಹಮ್ಮಿಕೊಳ್ಳಲಾಗಿದ್ದು, ಅರ್ಹ ಅಭ್ಯರ್ಥಿಗಳು ಭಾಗವಹಿಸುವಂತೆ ಕೋರಲಾಗಿದೆ.

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು, ಗಿಲ್ಲೇಸೂಗೂರು, ಮಾನವಿ, ಸಿಂಧನೂರು, ಲಿಂಗಸೂಗೂರು ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಯರಮರಸ್ ಕ್ಯಾಂಪ್ ವಸತಿ ಶಾಲೆ ಮತ್ತು ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ ರಾಯಚೂರು ಇಲ್ಲಿಗೆ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು (ಮುಸ್ಲಿಂ ಶೇ.77, ಕ್ರಿಶ್ಚಿಯನ್ ಶೇ.14, ಜೈನ್ ಶೇ.7, ಸಿಖ್ ಶೇ.2, ಬೌದ್ಧ ಶೇ.2) ಹಾಗೂ ಶೇ.25ರಷ್ಟು ಸ್ಥಾನಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರಿಗೆ ಮೀಸಲಿರಿಸಿ ಏ.27ರಂದು ಪ್ರವೇಶ ಪರೀಕ್ಷೆ ನಡೆಸಿದ್ದು, ಮೇ.27ರಂದು ಪ್ರವೇಶ ಪರೀಕ್ಷೆಯ ಫಲಿತಾಂಶ ಮತ್ತು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ.

ಜೂನ್ 03ರಂದು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ನಗರದ ಚಂದ್ರಬಂಡಾ ರಸ್ತೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಹಾಗೂ ಜೂನ್ 04ರಂದು ಇತರೆ ವರ್ಗಗಳ ವಿದ್ಯಾರ್ಥಿಗಳಿಗೆ ಕೌನ್ಸೆಲಿಂಗ್ ಏರ್ಪಡಿಸಲಾಗಿದ್ದು, ವಿದ್ಯಾರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರ. ವಿದ್ಯಾರ್ಥಿಯ 5ನೇ ತರಗತಿಯ ಅಂಕಪಟ್ಟಿ. ಜಾತಿ ಮತ್ತು ಆದಾಯ ಪ್ರಮಾಣ ಪತ್ರ. ವಿದ್ಯಾರ್ಥಿಯ ಆಧಾರ್ ಕಾರ್ಡ್, ವಿಶೇಷ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರದೊಂದಿಗೆ ಭಾಗವಹಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಯಚೂರಲ್ಲಿ ಕೋವಿಡ್ ಪ್ರಕರಣಗಳು ಇಲ್ಲ: ಜಿಲ್ಲಾಧಿಕಾರಿಳು ಸ್ಪಷ್ಟನೆ

# ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ವರದಿ: ಮುಂಜಾಗ್ರತೆ ವಹಿಸಲು ಸಾರ್ವಜನಿಕರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.29: ರಾಜ್ಯದಲ್ಲಿ ದಿನೇದಿನೆ ಕೋವಿಡ್-19ರ ಪ್ರಕರಣಗಳು ಹೆಚ್ಚು ವರದಿಯಾಗುತ್ತಿರುವ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ಆದೇಶದ ಪ್ರಕಾರ ಜಿಲ್ಲೆಯಲ್ಲಿ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದ್ದು, ಸಾರ್ವಜನಿಕರು ಭಯಪಡದೆ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.



ಕೋವಿಡ್-19ರ ಪರೀಕ್ಷೆಗಾಗಿ ರ‍್ಯಾಟ್ ಟೆಸ್ಟ್ ವೈದ್ಯರ ಸಲಹೆ ಮೇರೆಗೆ ರಿಮ್ಸ್ ಮತ್ತು ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ವ್ಯವಸ್ಥೆ ಮಾಡಲಾಗಿದೆ. ಆರ್.ಟಿ.ಪಿ.ಸಿ.ಆರ್ ಪರೀಕ್ಷೆಗೆ ವಿಮ್ಸ್ ಬಳ್ಳಾರಿ ಪ್ರಯೋಗಾಲಯ ನಿಗದಿ ಪಡಿಸಿರುವುದರಿಂದ ಎಲ್ಲಾ ಮಾದರಿಗಳನ್ನು ಅಲ್ಲಿಯೇ ಪರೀಕ್ಷೆಗೆ ಒಳಪಡಿಸಲಾಗುವುದು.

ಜಿಲ್ಲೆಯ ರಿಮ್ಸ್ ಆಸ್ಪತ್ರೆಯಲ್ಲಿ 20 ಹಾಸಿಗೆಗಳ ವಾರ್ಡ್ ಮತ್ತು 5 ಐ.ಸಿ.ಯು. ಹಾಸಿಗೆಗಳು ಸೇರಿದಂತೆ ಪ್ರತಿ ತಾಲೂಕು ಆಸ್ಪತ್ರೆಗಳಲ್ಲಿ 5 ಹಾಸಿಗೆಗಳ ವಾರ್ಡ್ನ್ನು ಕಾಯ್ದಿರಿಸಲಾಗಿದೆ. ಇಲ್ಲಿಯವರೆಗೂ ಜಿಲ್ಲೆಯಲ್ಲಿ ಯಾವುದೇ ಪ್ರಕರಣಗಳು ಕಂಡು ಬಂದಿಲ್ಲ. ಸಾರ್ವಜನಿಕರು ಭಯಪಡುವ ಅವಶ್ಯಕತೆ ಇರುವುದಿಲ್ಲ. ಮುಂಜಾಗ್ರತಾ ಕ್ರಮಗಳನ್ನು ವಹಿಸುವುದು ಅವಶ್ಯಕವಾಗಿರುತ್ತದೆ.

ಎಲ್ಲಸಾರಿ ಪ್ರಕರಣಗಳಿಗೆ ಕಡ್ಡಾಯವಾಗಿ ಕೋವಿಡ್-19ರ ಪರೀಕ್ಷೆ ಮಾಡಿಸುವುದು., ವಯೋವೃದ್ಧರಲ್ಲಿ, ಮಕ್ಕಳಲ್ಲಿ, ಗರ್ಭಿಣಿಯರಲ್ಲಿ ರೋಗ ಲಕ್ಷಣಗಳು ಕಂಡು ಬಂದಲ್ಲಿ ಪರೀಕ್ಷೆ ಮಾಡಿಸುವುದು, ಶೀತ, ನೆಗಡಿ, ಜ್ವರ ಇರುವ ಮಕ್ಕಳನ್ನು ಪೋಷಕರು ಶಾಲೆಗೆ ಕಳುಹಿಸದಿರುವುದು ಉತ್ತಮ., ಆಗಾಗ್ಗೆ ಸಾಬೂನಿನಿಂದ ಅಥವಾ ಸೆನಿಟ್ಯಾಜರ್‌ನಿಂದ ಕೈ ತೊಳೆಯಬೇಕು., ಕೆಮ್ಮುವಾಗ ಅಥವಾ ಶೀನುವಾಗ ಕರವಸ್ತ್ರ ಉಪಯೋಗಿಸುವುದು., ಯಾವುದೇ ತರಹದ ಕೆಮ್ಮು, ನೆಗಡಿ, ಗಂಟಲು ನೋವು, ಜ್ವರ ಕಂಡು ಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬೇಕು. ಖಚಿತ ಪ್ರಕರಣಗಳಲ್ಲಿ ಅಲ್ಪಪ್ರಮಾಣದ ಲಕ್ಷಣಗಳು ಇರುವ ರೋಗಿಗಳಿಗೆ ಹೋಮ್ ಐಸೋಲೇಷನ್ ಮಾಡಲಾಗುವುದು. ತೀವ್ರತರದ ರೋಗ ಲಕ್ಷಣಗಳು ಇರುವವರಿಗೆ ರಾಯಚೂರು ರಿಮ್ಸ್ ಮತ್ತು ಆಯಾ ತಾಲೂಕು ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅದ್ದೂರಿಯಾಗಿ ಶಾಲಾ ಪ್ರಾರಂಭೋತ್ಸವ.



ಮಲ್ಲಮ್ಮ ನುಡಿ ವಾರ್ತೆ

ನಾಗಬೇನಾಳ ತಾಂಡಾ : ಇಂದು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ನಾಗಬೇನಾಳ ತಾಂಡಾದಲ್ಲಿ ಅದ್ದೂರಿಯಾಗಿ ಶಾಲಾ ಪ್ರಾರಂಭೋತ್ಸವ ಮಾಡಲಾಯಿತು.

ಮಕ್ಕಳಿಗೆ ಬೇಸಿಗೆ ರಜೆಗಳ ನಂತರ ಇಂದು ಶಾಲೆಗೆ ಬರುವ ಮುದ್ದು ಮಕ್ಕಳನ್ನು ಹೂಗುಚ್ಛ ಕೊಟ್ಟು ಬರಮಾಡಿಕೊಳ್ಳಲಾಯಿತು.

ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ನಾಗಬೇನಾಳ ತಾಂಡಾದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಲಿತು ದೇಶ ಸೇವೆ ಮಾಡುತ್ತಿರುವ ಸೈನಿಕರಾದ ವೆಂಕಟೇಶ ಸೇವಪ್ಪ ನಾಯಕ್ , ಹಾಗೂ ರಾಜು. ಕೀರಪ್ಪ. ಚವಾಣ್. ಇವರಿಗೆ ಗೌರವ ಸನ್ಮಾನ ಮಾಡಲಾಯಿತು.

ಇದೇ ಸಂದರ್ಭದಲ್ಲಿ ನಮ್ಮ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ಪದ್ಮಾವತಿ ರವಿ ಲಮಾಣಿ, ನವೀನ ನಾಯಕ್ 2024 ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತೀರ್ಣ ಅಂಕ ಪಡೆದಿದ್ದಕ್ಕಾಗಿ ಸನ್ಮಾನಿಸಲಾಯಿತು. ಜೊತೆಗೆ ವೈಷ್ಣವಿ ಮಹಾದೇವಪ್ಪ ನಾಯಕ, (ಮುರಾರ್ಜಿದೇಸಾಯಿ, ನವೋದಯ, ಕಿತ್ತೂರು, ಸೈನಿಕ ಶಾಲೆ, ಆರ್ ಎಂ ಎಸ್ ಎ )ಎಲ್ಲಾ ಪರೀಕ್ಷೆಗಳಲ್ಲಿ ಆಯ್ಕೆಗೊಂಡು ಕೊನೆಗೆ ನವೋದಯ ಶಾಲೆಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಸನ್ಮಾನಿಸಲಾಯಿತು.

ಶಾಲೆಯ ಆದರ್ಶ ವಿದ್ಯಾರ್ಥಿ ರೋಷನ್ ಕುಮಾರ್ ಕೋಳೂರು ಇವನಿಗೂ ಸನ್ಮಾನಿಸಲಾಯಿ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಸ್ ಡಿ ಎಂ ಸಿ ಅಧ್ಯಕ್ಷರಾದ ಶಿವಾನಂದ ಕೃಷ್ಣಪ್ಪ ನಾಯಕ್ ಮತ್ತು ಗ್ರಾಮ ಪಂಚಾಯತಿಯ ಸದಸ್ಯರಾದ ರಘು ಪವಾರ್ ಇವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ಮುಖ್ಯಗುರುಗಳು ಶಿವಲೀಲಾ ಗಂಗನಗೌಡರ ಶಿಕ್ಷಕರು ಪಾಲಕರು ಶಿಕ್ಷಣ ಪ್ರೇಮಿಗಳಾದ ಮಹಾದೇವಪ್ಪ ನಾಯಕ ಶಿಕ್ಷಕರು ಗೋವಿಂದ ನಾಯಕ್ ವೆಂಕಟೇಶ್ ನಾಯಕ್ ಜಗದೇವ ನಾಯಕ್ ಇತರರು ಭಾಗಿಯಾಗಿ ಕಾರ್ಯಕ್ರಮ ಯಶಸ್ವಿಗೊಳಿಸಿದರು ಪ್ರಿಯಾ ಯರನಾಳ ಗುರುಮಾತೆಯರು ಸ್ವಾಗತಿಸಿದರು. ವೀರೇಶ್ ನವಲಿ ಶಿಕ್ಷಕರು ನಿರೂಪಿಸಿದರು. ಅಕ್ಕಮಹಾದೇವಿ ಉಪನಾಳ ಗುರುಮಾತೆಯರು ವಂದಿಸಿದರು. ಇದೇ ಸಂದರ್ಭದಲ್ಲಿ ಮಕ್ಕಳಿಗೆ ಬಿಸಿಲೂಟ ಬಾಳೆಹಣ್ಣು ವಿತರಿಸಲಾಯಿತು.

# ಕಳಪೆ ಕಾಮಗಾರಿ; ಕಾನೂನು ಕ್ರಮಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ : ತಾಲೂಕಿನ ಮೊಳಕೆರ ಗ್ರಾಮದ ಸರ್ಕಾರಿ ಶಾಲೆಯ ನೂತನ ಕಟ್ಟಡ ಕಾಮಗಾರಿ ಸಂಪೂರ್ಣ ಕಳಪೆ ಮಟ್ಟದಿಂದ ಕೂಡಿದೆ ಎಂದು ಆರೋಪಿಸಿ ಪಟ್ಟಣದ ಕ್ಷೇತ್ರ ಶಿಕ್ಷಣ ಅಧಿಕಾರಿಗಳ ಕಚೇರಿಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಕ್ಷೇತ್ರ ಶಿಕ್ಷಣ ಅಧಿಕಾರಿಗೆ ಬರೆದ ಮನವಿ ಪತ್ರ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯ ವ್ಯವಸ್ಥಾಪಕೀಗೆ ನೀಡಲಾಯಿತು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಅಧ್ಯಕ್ಷ ಲಕ್ಷ್ಮಿಪುತ್ರ ಮಾಳಿಗೆ ಮಾತನಾಡಿ, 2024-25ನೇ ಸಾಲಿನ ಶಾಸಕರ ಅನುದಾನದ ಅಡಿಯಲ್ಲಿ ಮೊಳಕೇರಾ ಗ್ರಾಮದಲ್ಲಿ ಸರ್ಕಾರಿ ಶಾಲೆಯ ನೂತನ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ. ಈ ಕಾಮಗಾರಿಯೂ ಸಂಪೂರ್ಣ ಕಳಪೆ ಮಟ್ಟದಿಂದ ಕೂಡಿದೆ. ಹೀಗಾಗಿ ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಉಪಾಧ್ಯಕ್ಷ ಶಿವಕುಮಾರ ಸಿಂಧೆ, ಶಿವರಾಜ ಡಾಂಗೆ, ರವಿ ಜನ್ನಾ, ರಮೇಶ ಆರ್ಯ, ಸಾಯಿ ಕಿರಣ, ಸಂತೋಷ ಕೋಳಾರ, ತುಳಸಿರಾಮ ಬೇಂದ್ರೆ, ಅನಿಶ ಬಿರಾದಾರ, ವಿಜಯ ಬಿರಾದಾರ್, ಸತೀಷ ಪಾಂಡೆ, ಮಲ್ಲಿಕಾರ್ಜುನ್ ಇಟಗೇನೋರ್ ಇದ್ದರು.

# ದೇಶದ ಅಭಿವೃದ್ಧಿಗೆ ನೆಹರು ಕೊಡುಗೆ ಅಪಾರ: ಶಾಸಕ ತುನ್ನೂರು

ಯಾದಗಿರಿ : ದೇಶದ ಅಭಿವೃದ್ಧಿಗೆ ಪ್ರಥಮ ಪ್ರಧಾನಿ ಪಂಡಿತ ಜವಾಹರ್ ಲಾಲ್ ನೆಹರು ಅವರ ಕೊಡುಗೆ ಅಪಾರವಿದೆ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ನೆಹರು ಅವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವಾತಂತ್ರ್ಯದ ನಂತರ ದೇಶ ಮುನ್ನಿಡಿಸುವುದು ಸವಾಲಿನ ಕೆಲಸವಾಗಿತ್ತು. ಜನರ ರಕ್ಷಣೆ, ಆರೋಗ್ಯ, ನೀರಾವರಿ, ಶಿಕ್ಷಣ ಹೀಗೆ ಸಾರ್ವಜನಿಕ ಕೆಲಸಗಳನ್ನು ಶಿಸ್ತುಬದ್ಧವಾಗಿ ಎಲ್ಲರೊಂದಿಗೆ ಸೇರಿ ಮಾಡಿದ ಕೀರ್ತಿ ನೆಹರು ಅವರಿಗೆ ಸಲ್ಲುತ್ತದೆ.

ದೇಶಕ್ಕಾಗಿ ತನು,ಮನ ಮತ್ತು ಧನವನ್ನು ನೀಡಿದ ಅಪ್ರತಿಮ ವ್ಯಕ್ತಿ ಮತ್ತು ಕುಟುಂಬ ನೆಹರು ಕುಟುಂಬ ಎಂದು ಶಾಸಕರು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಘಟಕ,ತಾಲೂಕು ಘಟಕ, ಬ್ಲಾಕ್ ಘಟಕಗಳ ಪದಾಧಿಕಾರಿಗಳು ಸೇರಿದಂತೆಯೇ ಅನೇಕ ಕಾರ್ಯಕರ್ತರು ಇದ್ದರು.

# ಐಇಸಿ ಚಟುವಟಿಕೆಗೆ ಅರ್ಜಿ ಆಹ್ವಾನ

ರಾಯಚೂರು ಮೇ 28-ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ 35 ವಾರ್ಡಗಳಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ನಡಿ 3 ವರ್ಷಗಳ ಅವಧಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ಡೇ-ನಲ್ಮ್ ಯೋಜನೆಯಡಿ ನೋಂದಾಯಿತ ಎಸ್‌ಹೆಚ್‌ಜಿ ಅರ್ಹ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಎಸ್‌ಹೆಚ್‌ಜಿ ಅರ್ಹ ಸದಸ್ಯರು ಸ್ವ-ಸಹಾಯ ಗುಂಪಿನ ಸದಸ್ಯರು ಆಗಿರಬೇಕು. (ಗುಂಪಿನ ಪಾಸ್ ಬುಕ್,) ಆಧಾರ ಕಾರ್ಡ್, ಗುರುತಿನ ಚೀಟಿ, ರೇಷನ್ ಕಾರ್ಡ್, 10ನೇ ತರಗತಿಯಲ್ಲಿ ಪಾಸ್ ಆಗಿರಬೇಕು, ಡೇ-ನಲ್ಮ್ ಎಂ.ಐ.ಎಸ್ ಎಸ್‌ಹೆಚ್‌ಜಿ ನೋಂದಾಣಿಯಾದವರು ಅರ್ಜಿ ನಮೂನೆಯನ್ನು ಕಚೇರಿಯ ಆರೋಗ್ಯ ಶಾಖೆ ಅಥವಾ ಡೇ-ನಲ್ಮ್ ಶಾಖೆಯಿಂದ ಪಡೆದು-ಕೊಂಡು ಜೂನ್ 29ರ ಸಂಜೆ 5 ಗಂಟೆಯೊಳಗಾಗಿ ಮಹಾನಗರ ಪಾಲಿಕೆ ಜೋನಲ್ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ನಾಲ್ಕನೇ ವರ್ಷದ ಸಾಮಾನ್ಯ ಸಭೆಯ ನೋಟಿಸ್

ದಿನಾಂಕ 12-06-2025 ರ ಗುರುವಾರ ರಂದು ಅಮರೇಶ್ವರ ಸೌಹಾರ್ದ ಕ್ರೆಡಿಟ್ ಕೋ-ಆಪರೇಟಿವ್ ಲಿ. ಔರಾದ [ಬಾ] ಇದರ ನಾಲ್ಕನೇ ವರ್ಷದ ಸಾಮಾನ್ಯ ಸಭೆಯನ್ನು ಸಹಕಾರಿಯ ಅಧ್ಯಕ್ಷರಾದ ಶ್ರೀ ಮಾರುತಿ ವಾಡಿಕರ ಇವರ ಅಧ್ಯಕ್ಷತೆಯಲ್ಲಿ ಸಹಕಾರಿಯ ಕಛೇರಿಯಲ್ಲಿ ಸಮಯ ಮಧ್ಯಾಹ್ನ 1.30 ಗಂಟೆಗೆ ಕರೆಯಲಾಗಿದೆ. ಕೆಳಕಂಡ ವಿಷಯಗಳ ಕುರಿತು ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲು ತಾವು ತಪ್ಪದೇ ಸಭೆಗೆ ಹಾಜರಾಗಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ವಿನಂತಿ.

**-: ಸಭೆಯಲ್ಲಿ ಚರ್ಚಿಸುವ ವಿಷಯಗಳು:-**

1] ಸಹಕಾರಿಯ ಸದಸ್ಯರಿಗೆ ಸ್ವಾಗತ
2] ಸಭೆಯ ನೋಟಿಸ್ ಓದಿ ದಾಖಲಿಸುವುದು
3] 2024-25ನೇ ಸಾಲಿನ ವರದಿಯನ್ನು ಮಂಡಿಸಿ ಅನುಮೊದನೆ ಪಡೆಯುವುದು.
4] ಹಿಂದಿನ ಸಭೆಯ ನಡಾವಳಿ ಮತ್ತು ನಿರ್ಣಯ ಓದಿ ಅನುಮೊದಿಸುವುದು.
5] 2024-25 ನೇ ಸಾಲಿನ ಲೆಕ್ಕ ಪರಿಶೋಧನೆ ವರದಿಯನ್ನು ಅಂಗೀಕರಿಸುವುದು.
6] 2024-25ನೇ ಸಾಲಿನ ಲಾಭ ವಿಂಗಡಣೆ ಮಾಡುವ ಕುರಿತು.
7] 2025-26 ನೇ ಸಾಲಿನ ಕ್ರೀಯಾ ಯೋಜನೆಯನ್ನು ಅನುಮೋದಿಸುವುದು
8] 2025-26ನೇ ಸಾಲಿನ ಅಂದಾಜು ಆಯ ವ್ಯಯವನ್ನು ಮಂಜೂರು ಮಾಡುವುದು.
9] 2025-26ನೇ ಸಾಲಿಗೆ ಲೆಕ್ಕ ಪರಿಶೋಧಕರ ನೇಮಕಾತಿ.
10] ಸಹಕಾರಿಯ ವತಿಯಿಂದ ಸದಸ್ಯರ ಅನುಕೂಲಕ್ಕಾಗಿ ಶಾಖೆಗಳನ್ನು ಆರಂಭಿಸುವ ಕುರಿತು.
11] ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.

ಸ್ಥಳ: ಔರದ್ (ಬಾ)
ದಿನಾಂಕ:27-05-2025

ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
ಮುಖ್ಯ ಕಾರ್ಯನಿರ್ವಾಹಕರು
ಔರದ್ (ಬಾ)

# ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ಕಲ್ಯಾಣ ಕರ್ನಾಟಕದ ಇತಿಹಾಸ ವಿಷಯದ ಮೇಲೆ ಒಂದು ದಿನದ ವಿಚಾರ ಸಂಕಿರಣ

ಮಲ್ಲಮ್ಮ ನುಡಿ ವಾರ್ತೆಬಿದರ:ಮೇ:29:ಹೈದರಾಬಾದ 'ಕರ್ನಾಟಕ ಶಿಕ್ಷಣ ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ , ವಿಜ್ಞಾನ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ದಿನಾಂಕ 31 ಮೇ 2025 ರಂದು ಬೆಳಗ್ಗೆ 10 ಗಂಟೆಗೆ ಇತಿಹಾಸ ವಿಭಾಗದಿಂದ ಕಲ್ಯಾಣ ಕರ್ನಾಟಕದ ಇತಿಹಾಸ ವಿಷಯದ ಮೇಲೆ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗಿದೆ. ಈ ವಿಚಾರ ಸಂಕಿರಣವು 3 ವಿವಿಧ ಗೋಷ್ಠಿಗಳನ್ನು ಹೊಂದಿದ್ದು ಪ್ರತಿಯೊಂದು ಗೋಷ್ಠಿಯಲ್ಲಿ ಕಲ್ಯಾಣ ಕರ್ನಾಟಕದ ಇತಿಹಾಸವನ್ನು ಹಾಗೂ ಗತವೈಭವವನ್ನು ಸಾರುವ ವಿಷಯಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಅಲ್ಲದೆ ಸಂಪನ್ಮೂಲ ವ್ಯಕ್ತಿಗಳಾಗಿ ದೇಶದ ವಿವಿಧ ಭಾಗಗಳಿಂದ ಇತಿಹಾಸ ತಜ್ಞರು ಈ ಸಂಕಿರಣದಲ್ಲಿ ಭಾಗವಹಿಸುತ್ತಿದ್ದಾರೆ. ಆದ್ದರಿಂದ ದೇಶದ, ಕರ್ನಾಟಕ ರಾಜ್ಯದ ಹಾಗೂ ಬೀದರ ಜಿಲ್ಲೆಯ ಇತಿಹಾಸ ಆಸಕ್ತರು, ಇತಿಹಾಸ ಸಂಶೋಧಕರು, ಪ್ರಾಧ್ಯಾಪಕರು, ಸಾಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಈ ರಾಷ್ಟ್ರೀಯ

ವಿಚಾರ ಸಂಕಿರಣದಲ್ಲಿ ಭಾಗವಹಿಸುವುದರ ಮೂಲಕ ಹೆಚ್ಚಿನ ಲಾಭವನ್ನು ಪಡೆಯಬೇಕೆಂದು ಮಹಾವಿದ್ಯಾಲಯದ ಪ್ರಾಚಾರ್ಯರ ಡಾ. ಪಿ. ವಿಠಲ ರೆಡ್ಡಿ ಅವರು ಪತ್ರಿಕೆಗೆ ಮಾಹಿತಿಯನ್ನು ನೀಡಿದರು. ಇದೆ ಸಂದರ್ಭದಲ್ಲಿ ಉಪ ಪ್ರಾಚಾರ್ಯರಾದ ಶ್ರೀ ಅನೀಲಕುಮಾರ ಆಣದೂರೆ ಹಾಗೂ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯ ಉಪಸ್ಥಿತರಿದ್ದರು.

# ಉಭಯ ಪೂಜ್ಯರ ಸೇವೆ ಅನುಪಮ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.29: ಹಿರೇಮಠದ ಹಿರಿಯ ಪೂಜ್ಯರಾದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮತ್ತು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾಡುವ ಸಾಮಾಜಿಕ, ಧಾರ್ಮಿಕ ,ಆಧ್ಯಾತ್ಮೀಕ ಮತ್ತು ಶೈಕ್ಷಣಿಕ ಸೇವೆ ಅನುಪಮವಾಗಿದೆ ಎಂದು ಪಟ್ಟಣದ ಬಾಲಾಜಿ ನಗರದ ಸಮಾಜ ಸೇವಕ ಶಿವಪುತ್ರಪ್ಪ ಕಲ್ಯಾಣೆ ಅಭಿಪ್ರಾಯಪಟ್ಟರು.

ಪಟ್ಟಣದ ಹಿರೇಮಠದಲ್ಲಿ ವಚನ ಜಾತ್ರೆ 2025 ,ಡಾ.ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಸಮಾರಂಭಕ್ಕೆ ಸಹಕರಿಸಿದ ಪಟ್ಟಣದ ಬಾಲಾಜಿ ನಗರದ ಬಸವಭಕ್ತರಿಗಾಗಿ ಏರ್ಪಡಿಸಿದ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಪ್ರತಿ ವರ್ಷ ವಚನ ಜಾತ್ರೆ, ಡಾ.ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಮತ್ತು ಜಯಂತ್ಯುತ್ಸವ ಸಮಾರಂಭದ ನಿಮಿತ್ಯ ನಾಡಿನ ವಿವಿಧ ಮಠಾಧೀಶರನ್ನ, ಚಿಂತಕರನ್ನ ,ಸಾಹಿತಿಗಳನ್ನ, ರಾಜಕೀಯ ಗಣ್ಯಮಾನ್ಯರನ್ನ ಮತ್ತು ಕಲಾವಿದರನ್ನ ಕರೆಸಿ ಎಲ್ಲ ರಂಗದ ಜ್ಞಾನ ನೀಡಿ ಈ ಭಾಗದ ಗ್ರಾಮೀಣ ,ಪಟ್ಟಣದ ಜನರಲ್ಲಿ ಜಾಗೃತಿವುನ್ನುಂಟು ಮಾಡುವ ಕಾರ್ಯ ಎಲ್ಲರಿಂದ ಮೆಚ್ಚುಗೆ ಪಡೆದಿದೆ. ಇಂಥಹ ಜನಪರ, ಜೀವಪರ ಕಾರ್ಯ ಚಟುವಟಿಕೆಗಳಿಗೆ ಭಕ್ತರು ತಮ್ಮ ಕೈಲಾದ ಸೇವೆ ಸಲ್ಲಿಸಿ, ಸಹಕಾರ, ಪ್ರೋತ್ಸಾಹ ನೀಡುವುದು ಅಗತ್ಯವಾಗಿದೆ ಎಂದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಪ್ರತಿ ವರ್ಷ ಶ್ರೀಮಠದಿಂದ ನಡೆಯುವ ಎಲ್ಲ ಕಾರ್ಯಗಳಿಗೆ ಸಕಲ ಸದ್ಭಕ್ತರು ನಿಸ್ವಾರ್ಥ ಭಾವನೆಯಿಂದ ಸಹಕಾರ ನೀಡುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ. ಅವರ ಸೇವೆ ಹೀಗೆ ಮುಂದುವರೆಯಲಿ ಎಂದು ಹೇಳಿದರು. ಪೀಠಾದಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಸಮಾಜೋದ್ಧಾರಕ ಕಾರ್ಯಗಳಿಗೆ ಪ್ರೋತ್ಸಾಹಿಸುವವರಿಗೆ ವಿಶ್ವಗುರು ಬಸವಣ್ಣನವರ ಕೃಪೆ ಸದಾಯಿರುತ್ತದೆ ಎಂದರು.

ಸನ್ಮಾನ:ಬಾಲಾಜಿ ನಗರದ ಬಸವ ಭಕ್ತರಾದ ಶಿವಪುತ್ರಪ್ಪ ಕಲ್ಯಾಣೆ, ನಾಗರಾಜ ಮಡ್ಡೆರ, ಕಾಶಿನಾಥ ಭೂರೆ, ಬಸವರಾಜ ರಂಜೆರೆ, ಪ್ರಭು ಡಿಗ್ಗೆ ಅವರಿಗೆ ಉಭಯ ಪೂಜ್ಯರು ಡಾ.ಚನ್ನಬಸವ ಪಟ್ಟದ್ದೇವರ ಭಾವಚಿತ್ರ ನೀಡಿ ಗೌರವಿಸಿದರು.

# ಪೌರಕಾರ್ಮಿಕರ ಮುಷ್ಕರ ಮೂರನೇ ದಿನಕ್ಕೆ :ನೀರಿನ ಸೇವೆ ನಿಲ್ಲಿಸುವ ಎಚ್ಚರಿಕೆ





'ಪಟ್ಟಣದ ಸೌಂದರ್ಯೀಕರಣಕ್ಕಾಗಿ ಪೌರಕಾರ್ಮಿಕರು ಬಿಸಿಲು, ಮಳೆ, ಛಳಿ ,ಗಾಳಿ ಎನ್ನದೆ ಅಲ್ಪ ಸಂಬಳದಲ್ಲಿ ಕಾರ್ಯನಿರ್ವಹಿಸುತ್ತಾರೆ. ದುಡಿಯುವ ಕಾರ್ಮಿಕರಿಗೆ ಸಕಾಲದಲ್ಲಿ ಸಂಬಳ ಸಿಗದಿದ್ದರೆ ಅವರ ಉಪಜೀವನ ನಡೆಸಲು ದುಸ್ತರವಾಗುತ್ತದೆ. ಅಲ್ಲದೆ ಪೌರಕಾರ್ಮಿಕರು ನ್ಯಾಯಸಮ್ಮತ ಬೇಡಿಕೆಗಾಗಿ ನಡೆಸುವ ಮುಷ್ಕರ ಯೋಗ್ಯವಾಗಿದೆ. ಕಾರಣ ಸರ್ಕಾರ ಅಗತ್ಯ ಬೇಡಿಕೆಗಳು ಈಡೇರಿಸಿ , ಮುಷ್ಕರ ಹಿಂತೆಗೆದುಕೊಳ್ಳುವಂತೆ ಮನವೋಲಿಸಬೇಕು.

'– ಸೋಮನಾಥಪ್ಪ ಅಷ್ಟೂರೆ ಅಧ್ಯಕ್ಷರು, ಸರಾಫ್ ಬಜಾರ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.29:ಪಟ್ಟಣದ ಪುರಸಭೆಯ ಮುಂಭಾಗದಲ್ಲಿ ಪೌರಕಾರ್ಮಿಕರು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ನಡೆದ ಅನಿರ್ದಿಷ್ಟಾವಧಿ ಮುಷ್ಕರ ಮೂರನೇ ದಿನಕ್ಕೆ ಕಾಲಿಟ್ಟಿದೆ. ಕಾರ್ಮಿಕರ ಮುಷ್ಕರದಿಂದ ಕಸ ವಿಲೇವಾರಿ, ಚರಂಡಿ ಸ್ವಚ್ಛಗೊಳಿಸುವಿಕೆ ಸೇರಿದಂತೆ ಎಲ್ಲ ಕೆಲಸ ಸ್ಥಗಿತಗೊಂಡಿರುವುದರಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕಸ ಎಲ್ಲ ಕಡೆ ಹರಿದಾಡುತ್ತಿದೆ. ಮೇಲಿಂದ ಮೇಲೆ ಮಳೆ ಬೀಳುತ್ತಿರುವುದರಿಂದ ಕೆಲವು ಕಡೆ ಕಸ ಸಂಗ್ರಹಣೆಯಿಂದ ಗಬ್ಬು ವಾಸನೆ ಬರುವುದಲ್ಲದೇ ಪರಿಸರ ಮಾಲಿನ್ಯಕ್ಕೂ ಕಾರಣವಾಗಿ ವಿವಿಧ ಮಾರಕ ಕಾಯಿಲೆ ಹರಡುವ ಸಾಧ್ಯತೆಯಿದೆ.

ಮುಷ್ಕರ ಕರಿತು ಮಾತನಾಡಿದ ರಾಜ್ಯ ಪೌರಕಾರ್ಮಿಕ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ಅವಿನಾಶ ಗಾಯಕವಾಡ, ಪೌರಕಾರ್ಮಿಕರು ಆರಂಭದಿಂದಲೂ ಪಟ್ಟಣ ಸ್ವಚ್ಛಗೊಳಿಸಿ, ಪಟ್ಟಣದ ಸೌಂದರ್ಯ ಕಾಪಾಡುತ್ತಾರೆ. ಪೌರಕಾರ್ಮಿಕರು ಈ ಹಿಂದೆ ಮುಷ್ಕರ ನಡೆಸಿದರೂ ಸರ್ಕಾರ ನಮ್ಮ ಬೇಡಿಕೆಗಳು ಈಡೇರಿಸಿಲ್ಲ. ಹೀಗಾಗಿ ರಾಜ್ಯಾದ್ಯಂತ ಕೆಲಸ ಸ್ಥಗಿತಗೊಳಿಸಿ ಮುಷ್ಕರ ನಡೆಸಲಾಗುತ್ತಿದೆ. ನಮ್ಮ ನ್ಯಾಯಸಮ್ಮತ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ನೀರು ಪೂರೈಕೆ ಸೇವೆ ಸಹ ಸ್ಥಗಿತಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಪ್ರದೀಪ ಢಗೆ, ಸಂತೋಷ, ವಿಶ್ವನಾಥ, ಬಾಲಾಜಿ ಕಂದಾಯ, ಸುಶೀಲ ಕುಮಾರ, ವಿಜಯಕುಮಾರ ಬನಸೊಡೆ, ಉದಯಕುಮಾರ, ನಾಗರಾಜ, ಸಿದ್ಧು, ನಾರಾಂಙಣ ,ಪ್ರಕಾಶ , ವಿದ್ಯಾವತಿ, ಶ್ರೀದೇವಿ, ಸಂತೋಷ ಪಾಂಚಾಳ, ಧನಾಜಿ ಸೂರ್ಯವಂಶಿ, ದಸ್ತಗಿರ, ಜಯಶ್ರೀ, ಶಕುಂತಲಾ, ಚಂದ್ರಕಲಾ, ಮಂಗಲಾಬಾಯಿ, ಉತ್ತಮಬಾಯಿ ಸೇರಿದಂತೆ ಅನೇಕರಿದ್ದರು.

## ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೀದರ:ಮೇ.29:ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಜನವಾಡ ರಸ್ತೆ ಬೀದರ ಇಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಬಿ.ಎ., ಬಿ.ಕಾಂ. ಹಾಗೂ ಬಿ.ಎಸ್ಸಿ. ಪ್ರಥಮ ವರ್ಷಕ್ಕೆ ಪ್ರವೇಶಗಳು ಪ್ರಾರಂಭಗೊಂಡಿವೆ. ಆಸಕ್ತ ಪಿಯುಸಿ ಪಾಸಾದ ಮಹಿಳಾ ವಿದ್ಯಾರ್ಥಿನಿಯರು ದಿನಾಂಕ: 08–06–2025 ರವರೆಗೆ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸರಕಾರಿ ಪ್ರಥಮ ದರ್ಜೆ ಮಹಿಳಾ

ಕಾಲೇಜಿನ ಪ್ರಾಂಶುಪಾಲರ ಮೊಬೈಲ್ ಸಂಖ್ಯೆ:9448405591 ಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ

ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರೀಯ ಲೋಕ ಆದಾಲತ್‌ನ ಪೂರ್ವಭಾವಿ ಸಭೆ ಜೂ.3ರಿಂದ

ಬೀದರ:ಮೇ.29:ಗೌರವಾನ್ವಿತ ಕರ್ನಾಟ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಅವರ ನಿರ್ದೇಶನದಂತೆ ದಿನಾಂಕ: 12–07–2025 ರಂದು ರಾಷ್ಟ್ರೀಯ ಲೋಕ ಆದಾಲತನ್ನು ರಾಷ್ಟ್ರಾದ್ಯಾಂತ ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ. ಪ್ರಯುಕ್ತ ರಾಷ್ಟ್ರೀಯ ಲೋಕ ಆದಾಲತನಲ್ಲಿ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸಹಕರಿಸುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರನ ಸಭಾಂಗಣದಲ್ಲಿ ವಿವಿಧ ಇಲಾಖೆಯ ಮುಖ್ಯಸ್ಥರೊಂದಿಗೆ ದಿನಾಂಕ: 03–06–2025, 04–06–2025, 06–06–2025, 09–06–2025, 10–06–2025, 11–06–2025, 13–06–2025 ಹಾಗೂ 16–06–2025 ರ ದಿನಾಂಕಗಳಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ಇವರ ಘನ ಅಧ್ಯಕ್ಷತೆಯಲ್ಲಿ ರಾಷ್ಟ್ರೀಯ ಲೋಕ ಅದಾಲತನ ಪೂರ್ವಭಾವಿ ಸಭೆಯನ್ನು ಕರೆಯಲಾಗಿರುತ್ತದೆ.

ಆದ್ದರಿಂದ ಸದರಿ ದಿನಾಂಕಗಳಂದು ನಿಗಧಿತ ಸಮಯಕ್ಕೆ ಸಂಬಂಧಿಸಿದ ಇಲಾಖೆಯ ಮುಖ್ಯಸ್ಥರು ಸಭೆಗೆ ತಪ್ಪದೇ ಭಾಗವಹಿಸಿ ಸಲಹೆ ಸೂಚನೆ ನೀಡಿ ಸಹಕರಿಸಲು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನುನು ಸೇವೆಗಳ ಪ್ರಾಧಿಕಾರ ಬೀದರ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.1 ರಿಂದ ಬೀದರ ಉಪನೋಂದಣಿ ಕಛೇರಿ ರಜಾ ದಿನಗಳಲ್ಲಿ ಕರ್ಯನಿರ್ವಹಿಸಲಿವೆ

ಬೀದರ:ಮೇ.29:ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು ಬೆಂಗಳೂರು ಆದೇಶದನ್ವಯ ಸಾರ್ವಜನಿಕ ಉಪಯೋಗಕ್ಕಾಗಿ ಬೀದರ ಜಿಲ್ಲೆಯ ಒಂದು ಉಪನೋಂದಣಾದಿಕಾರಿ ಕಛೇರಿಯು 2ನೇ ಮತ್ತು 4ನೇ ಶನಿವಾರ ಮತ್ತು ಎಲ್ಲಾ ಭಾನುವಾರಗಳಲ್ಲೂ ಕಾರ್ಯನಿರ್ವಹಿಸಲು ರಾಜ್ಯ ಸರ್ಕಾರ ಆದೇಶದನ್ವಯ ಜೂನ್.1 ರಿಂದ ಬೀದರ ಹಿರಿಯ ಉಪನೋಂದಣಾಧಿಕಾರಿ ಕಛೇರಿಯು ನೋಂದಣಿ ಕಾರ್ಯನಿರ್ವಹಿಸಲಿದೆ ಮತ್ತು ಎಂದು ಬೀದರ ಉಪನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆಯಿಂದ ಹಸಿಶುಂಠಿ ನೋಂದಣಿ ಪ್ರಾರಂಭ

ಬೀದರ : ಮೇ.29: ಕೇಂದ್ರ ಸರ್ಕಾರದ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಹಸಿಶುಂಠಿ ಖರೀದಿಸಲು ಬೀದರ ಜಿಲ್ಲಾ ಟಾಫೋರ್ಸ್ ಸಮಿತಿಯು ಜಿಲ್ಲೆಯಲ್ಲಿ ಈಗಾಗಲೇ ಐದು ಖರೀದಿ ಕೇಂದ್ರಗಳನ್ನು ತೆರೆದಿದ್ದು, ಮೇ.31 ರಿಂದ ರೈತರ ನೋಂದಣಿ ಕಾರ್ಯ ಪ್ರಾರಂಭವಾಗಲಿದೆ ಎಂದು ಬೀದರ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2024–25ನೇ ಸಾಲಿನ ಕೃಂದ್ರ ಸರ್ಕಾರದ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಈಂಕಿ ಗುಣಮಟ್ಟದ ಹಸಿಶುಂಠಿಯನ್ನು ರೈತರಿಂದ ಖರೀದಿಸಲಿದ್ದು, ಪ್ರತಿ ಕ್ವಿಂಟಾ???ಗೆ 2445–00 ಗಳಂತೆ ದರ ನಿಗಧಿಪಡಿಸಲಾಗಿದೆ. ಖರೀದಿ ಪ್ರಕ್ರಿಯೆಯಲ್ಲಿ ರೈತರು ಪ್ರತಿ ಎಕರೆಗೆ ಗರಿಷ್ಠ 30 ಕ್ವಿಂಟಾನಂತೆ ಹಾಗೂ ಪ್ರತಿ ರೈತರಿಗೆ ಗರಿಷ್ಠ 60 ಕ್ವಿಂಟಾನಂತೆ ಈಂಕಿ ಗುಣಮಟ್ಟದ ಹಸಿಶುಂಠಿ ಉತ್ಪನ್ನವನ್ನು ಮಾರಾಟ ಮಾಡಬಹುದಾಗಿದೆ.

ಬೀದರ ತಾಲ್ಲೂಕಿನ PACS ಮನ್ನಳ್ಳಿ, ಭಾಲ್ಕಿ ತಾಲ್ಲೂಕಿನ ಕಂಅಖ ಭಾತಂಬ್ರಾ, ಬಸವಕಲ್ಯಾಣ ತಾಲ್ಲೂಕಿನ ಕಂಅಖ ಮುಡಬಿ, ಹುಮನಾಬಾದ ತಾಲ್ಲೂಕಿನ ಕಂಅಖ ದುಬಲಗುಂಡಿ, ಹಾಗೂ ಔರಾದ(ಬಾ) ತಾಲ್ಲೂಕಿನ ಕಂಅಖ ಜೋಜನಾಗಳನ್ನು ಹಸಿಶುಂಠಿ ಖರೀದಿ ಕೇಂದ್ರಗಳೆಂದು ನಿಗಧಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತಿ ಬೆಂಗಳೂರು ರವರ ಬೀದರ ಜಿಲ್ಲಾ ಶಾಖಾ ವ್ಯವಸ್ಥಾಪಕರು, ಸಹಾಯಕ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ಬೀದರ ಹಾಗೂ ಉಪ ನಿರ್ದೇಶಕರು,

ತೋಟಗಾರಿಕೆ ಇಲಾಖೆ ಬೀದರ ಇವರನ್ನು ಸಂಪರ್ಕಿಸಲು ಅವರು ತಿಳಿಸಿದ್ದಾರೆ.

# ಆತ್ಮವಿಶ್ವಾಸದಿಂದ ಮುಟ್ಟಿನ ದಿನಗಳು ನಿರ್ವಹಣೆ ಮಾಡಬೇಕು:ಅನೀತಾ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.29:ಸರ್ಕಾರದ ಆದೇಶದಂತೆ ಪ್ರತಿ ವರ್ಷದಂತೆ ಈ ವರ್ಷವು "ಮುಟ್ಟಿನ ನೈರ್ಮಲ್ಯ ದಿನ" ವನ್ನು ಆಚರಿಸಲಾಗುತ್ತಿದೆ. ಋತುಚಕ್ರದ ಅವಧಿ, ಮುಟ್ಟಿನ ಸಮಯದಲ್ಲಿ ಬಳಸುವ ಸ್ಯಾನಿಟೆರಿ ಪ್ಯಾಡ್ ಹಾಗೂ ಮೆನುಸ್ಟ್ರುವಲ್ ಕಪ್ ಹಾಗೂ ವೈಯಕ್ತಿಕ ಸ್ವಚ್ಛತೆ ಮತ್ತು ಪೌಷ್ಠಿಕ ಆಹಾರದ ಕುರಿತು ಬೀದರ ಉಪ ಜಿಲ್ಲಾ ಆರೋಗ್ಯಶಿಕ್ಷಣಾಧಿಕಾರಿಗಳಾದ ಅನೀತಾ ಮಾಹಿತಿ ನೀಡಿದರು.

ಅವರು ಬುಧವಾರ ಡಾ॥ ಬಿ.ಆರ್ ಅಂಬೇಡ್ಕರ ವಸತಿ ನಿಲಯ ಮೈಲೂರು ಬೀದರದಲ್ಲಿ ಹಮ್ಮಿಕೊಂಡಿದ್ದ "ಮುಟ್ಟಿನ ಸ್ನೇಹಿ ಪ್ರಪಂಚಕ್ಕಾಗಿ ಎಲ್ಲರೂ ಒಗ್ಗೂಡೋಣ" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ "ಮುಟ್ಟಿನ ನೈರ್ಮಲ್ಯ ದಿನ" ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಮಹಿಳೆಯರು ಋತುಚಕ್ರದ ಬಗ್ಗೆ ಸರಿಯಾದ ಮಾಹಿತಿಯನ್ನು ಪಡೆದು–ಕೊಂಡು ಆತ್ಮ ವಿಶ್ವಾಸದಿಂದ ಮುಟ್ಟಿನ ದಿನಗಳನ್ನು ನಿರ್ವಹಣೆ ಮಾಡಬೇಕು ಎಂದರು. ಬೀದರ ಆರ್.ಕೆ.ಎಸ್.ಕೆ ಸಂಯೋಜ–ಕರಾದ ವನಜಾಕ್ಷಿ ಅವರು ಮಾತನಾಡಿ, ಜೀವ ಸೃಷ್ಠಿಯ ಮೂಲಕ್ರಿಯೆಯೇ ಋತುಚಕ್ರ, ಜೀವಜಗತ್ತನ್ನು ಮುಂದುವರೆಸಲು ಅಗತ್ಯವಾದ ಒಂದು ಕ್ರಿಯೆಯೇ ಋತುಚಕ್ರವಾಗಿದೆ. ಇದು ದೇವರು ಕೊಟ್ಟ ವರವಾಗಿದೆ ಹಾಗೂ ಪ್ರಕೃತಿಯ ನಿಯಮವಾಗಿದೆ ಎಂದರು. ಈ ಸಂದರ್ಭದಲ್ಲಿ ಐಸಿಟಿಸಿ ಸಂಯೋಜಕರಾದ ವಿಜಯಲಕ್ಷ್ಮಿ ??ೀ, ವಸತಿ ನಿಲಯದ ವಾರ್ಡನ ಸೋನಿಕಾ, ವಸತಿ ನಿಲಯದ ಸಿಬ್ಬಂದಿಗಳು ಸೇರಿದಂತೆ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಅಂಚೆ ಇಲಾಖೆಯಿಂದ ಬಹುಮುಖಿ ಸೇವೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮೇ.29: ಅಂಚೆ ಇಲಾಖೆಯಲ್ಲಿ ಅತ್ಯುನ್ನತ ಸಾಧನೆಗೈದ ಸಿಬ್ಬಂದಿಯನ್ನು ಇಲ್ಲಿಯ ಕರ್ನಾಟಕ ಪದವಿ ಕಾಲೇಜು ಸಭಾಂಗಣದಲ್ಲಿ ಗುರುವಾರ ಸತ್ಕರಿಸಲಾಯಿತು.

ಉಳಿತಾಯ ಉತ್ಸವ, ಉಳಿತಾಯೋತ್ಕರ್ಷ, ಚಾರ್ ದಿನ್ ಚಾರ್ ಲಾಖ್, ಸಾಮ್ರಾಟ್, ಇಂಡಿಯನ್ ಪೋಸ್ಟಲ್ ಪೇಮೆಂಟ್ ಬ್ಯಾಂಕ್ ಕಾರ್ಯಗಳಲ್ಲಿ ಸಾಧನೆ ಮಾಡಿದ ಸಿಬ್ಬಂದಿಗೆ ಬೀದರ್ ವಿಭಾಗದ ಅಂಚೆ ಅಧೀಕ್ಷಕ ವಿ.ಎಲ್. ಚಿತಕೋಟೆ ಶಾಲು ಹೊದಿಸಿ ಸನ್ಮಾನಿಸಿ, ಪ್ರೋತ್ಸಾಹಿಸಿದರು.

ಅಂಚೆ ಇಲಾಖೆ ಈಗ ಬಹುಮುಖಿ ಸೇವೆ ನೀಡುತ್ತಿದೆ. ಒಂದೇ ಸೂರಿನಡಿ ಅಂಚೆ ಸೇವೆ ಜತೆಗೆ ಆರ್ಥಿಕ ಸೇವೆ, ಜೀವ ವಿಮೆ, ಆಧಾರ್ ನೋಂದಣಿ, ಪಾ???ಪೋರ್ಟ್ ನೋಂದಣಿ ಮತ್ತಿತರ ಸೇವೆಗಳನ್ನು ಒದಗಿಸುತ್ತಿದೆ ಎಂದು ಅವರು ಹೇಳಿದರು. ಉತ್ತಮ ಕಾರ್ಯದ ಮೂಲಕ ಇಲಾಖೆಯ ಕೀರ್ತಿ ಹೆಚ್ಚಿಸಿದ ಸಿಬ್ಬಂದಿ ಇತರರಿಗೆ ಪ್ರೇರಣೆಯಾಗಬೇಕು ಎಂದು ತಿಳಿಸಿದರು. ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಪ್ರಶಾಂತ ಪಾಟೀಲ ಅವರು ಅಂಚೆ ಇಲಾಖೆಯ ಅಚ್ಚುಕಟ್ಟಾದ ಸೇವೆ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು.

ಇಲಾಖೆಯ ಮಂಗಲಾ ಭಾಗವತ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಚಾರ್ಯ ಮಲ್ಲಿಕಾರ್ಜುನ ಹಂಗರಗಿ, ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ ವ್ಯವಸ್ಥಾಪಕ ವಿಜಯಕುಮಾರ ಫುಲೆ, ಯುಪಿಎ ಅಂಚೆ ಅಧೀಕ್ಷಕ ವಂಶಿ ರಾಮಕೃಷ್ಣ, ನಿರೀಕ್ಷಕ ವೆಂಕಟ ಉಪಸ್ಥಿತರಿದ್ದರು. ಸುಭಾಷ್ ದೊಡ್ಡಿ ಸ್ವಾಗತಿಸಿದರು. ಗೌಸಿಯ ಬಾನು ಮತ್ತು ಗಾಯತ್ರಿ ಲಡ್ಡ ನಿರೂಪಿಸಿದರು. ಕಲ್ಲಪ್ಪ ಕೋಣಿ ವಂದಿಸಿದರು.

## ಕಮಲ್ ಹಾಸನ್ ಚಿತ್ರ ಬಿಡುಗಡೆಗೆ ಅವಕಾಶ ಬೇಡ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮೇ.29: ಕನ್ನಡಕ್ಕೆ ಅವಮಾನ ಮಾಡಿರುವ ನಟ ಕಮಲ್ ಹಾಸನ್ ಅವರ 'ಥಗ್ ಲೈಫ್' ಚಲನಚಿತ್ರ ಬಿಡುಗಡೆಗೆ ರಾಜ್ಯದಲ್ಲಿ ಅವಕಾಶ ಕೊಡಬಾರದು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕನ್ನಡ ಭಾಷೆ ಹುಟ್ಟಿದ್ದು ತಮಿಳಿನಿಂದ ಎಂಬ ತಪ್ಪು, ದುರುದ್ದೇಶಪೂರಿತ ಹೇಳಿಕೆ ಕೊಟ್ಟು ಕಮಲ್ ಹಾಸನ್ ಕನ್ನಡಿಗರ ಭಾವನೆ ಹಾಗೂ ಸ್ವಾಭಿಮಾನಕ್ಕೆ ಧಕ್ಕೆ ಉಂಟು ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಕನ್ನಡ ಭಾಷೆ ಹಾಗೂ ಸಂಸ್ಕೃತಿಗೆ ಸಾವಿರಾರು ವರ್ಷಗಳ ಇತಿಹಾಸ ಇದೆ. ಕನ್ನಡ ತಮಿಳಿನಿಂದ ಉಗಮವಾದ ಭಾಷೆಯಲ್ಲ. ಕನ್ನಡಿಗರ ಖಂಡನೆ, ವಿರೋಧದ ಮಧ್ಯೆಯೂ ಕಮಲ್ ಹಾಸನ್ ತಪ್ಪೊಪ್ಪಿಕೊಂಡು ಕ್ಷಮೆಯಾಚಿಸಿಲ್ಲ. ಇದರೊಂದಿಗೆ ಅವರು ಕನ್ನಡಿಗರ ಆಕ್ರೋಶ ಮತ್ತಷ್ಟು ಹೆಚ್ಚಿಸಿದ್ದಾರೆ ಎಂದು ಹೇಳಿದ್ದಾರೆ. ಜೂನ್ 5 ರಂದು ವೇದಿಕೆ ಚಲನಚಿತ್ರ ಬಿಡುಗಡೆಯನ್ನು ತಡೆಯಲು ನಿರ್ಧರಿಸಿದ್ದು, ಚಿತ್ರದ ವಿತರಕರು ತಮ್ಮ ಹೂಡಿಕೆಯನ್ನು ರಕ್ಷಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ. ಕಮಲ್ ಹಾಸನ್ ಕ್ಷಮೆಯಾಚಿಸುವವರೆಗೆ ವೇದಿಕೆ ಅವರ ವಿರುದ್ಧ ಪ್ರತಿಭಟನೆ ನಡೆಸಲಿದೆ ಎಂದು ಹೇಳಿದ್ದಾರೆ.

## ಮೇ.31 ರಂದು ಖಾನಾಪುರ ಜಂಕ್ಷನ್‌ನಲ್ಲಿ ಶಂಕುಸ್ಥಾಪನೆ ಕಾರ್ಯಕ್ರಮ

ಬೀದರ:ಮೇ.29:ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಮೇ.31 (ಶನಿವಾರ) ಖಾನಾಪುರ ಜಂಕ್ಷನ್ ರೈಲ್ವೆ ನಿಲ್ದಾಣದಲ್ಲಿ ಸರಕು ಸಾಗಣೆ ಶೆಡ್ ನಿರ್ಮಾಣ ಹಾಗೂ ಲೆವೆಲ್ ಕ್ರಾಸಿಂಗ್ ಸಂಖ್ಯೆ 71 ರ ಬದಲಿಗೆ ರಸ್ತೆ ಕೆಳ ಸೇತುವೆ (ಖಗಃ) ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆಂದು ದಕ್ಷಿಣ ಮಧ್ಯ ರೈಲ್ವೆ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಖಾನಾಪುರದಲ್ಲಿ ಸರಕು ಸಾಗಣೆ ಶೆಡ್ ನಿರ್ಮಾಣ ಯೋಜನೆ: ವಿಕಾರಾಬಾದ್ – ಬೀದರ್ – ಪಾರ್ಲಿ ರೈಲು ಮಾರ್ಗದಲ್ಲಿರುವ ಖಾನಾಪುರ ಜಂಕ್ಷನ್ ನಿಲ್ದಾಣವು, ಕಲಬುರಗಿ, ಬೀದರ್ ಮತ್ತು ಭಾಲ್ಕಿ ರೈಲ್ವೆ ನಿಲ್ದಾಣಗಳನ್ನು ಸಂಪರ್ಕಿಸುವ ಪ್ರಮುಖ ಕೇಂದ್ರೀಯ ನಿಲ್ದಾಣವಾಗಿದೆ. ಈ ನಿಲ್ದಾಣವು ಜಂಕ್ಷನಾಗಿ ಇರುವ ಕಾರಣ, ಸರಕು ರೈಲುಗಳ ಚಲನೆಗೆ ಅನುಕೂಲಕರವಾಗಿದೆ. ಇಂತಹ ಪ್ರಾಮುಖ್ಯತೆಯ ಹಿನ್ನೆಲೆಯಲ್ಲಿ, ಖಾನಾಪುರದಲ್ಲಿ 15 ಕೋಟಿ ರೂ. ವೆಚ್ಚದಲ್ಲಿ ಹೊಸ ಸರಕು ಸಾಗಣೆ ಶೆಡ್ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಈ ಕಾಮಗಾರಿ ಜೂನ್ 2026 ರೊಳಗೆ ಪೂರ್ಣಗೊಳಿಸುವ ಗುರಿಯನ್ನು ಹೊಂದಿದೆ.

ಲೆವೆಲ್ ಕ್ರಾಸಿಂಗ್ ಸಂ–ಖ್ಯೆ 71 ಬದಲಿಗೆ ರಸ್ತೆ ಕೆಳ ಸೇತುವೆ (ಖಗಃ) ನಿರ್ಮಾಣ: ಸಿಕಂದರಾಬಾದ್ ವಿಭಾಗದ ವಿಕಾರಾಬಾದ್ – ಪಾರ್ಲಿ ವೈಜನಾಥ್ ಮಾರ್ಗದಲ್ಲಿರುವ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ 71, ಭಾಲ್ಕಿ ನಿಲ್ದಾಣದ ಬಳಿ ಇದ್ದು, ಭಾಲ್ಕಿ ಮತ್ತು ಬೀದರ್ ಪಟ್ಟಣಗಳನ್ನು ಸಂಪರ್ಕಿಸುವ ಪ್ರಮುಖ ರಸ್ತೆ ಮಾರ್ಗದಲ್ಲಿದೆ. ಈ ಮಾರ್ಗದ ವಾಹನ ಸಂಚಾರ ದಟ್ಟವಾಗಿದ್ದು, ಲೆವೆಲ್ ಕ್ರಾಸಿಂಗ್ ಗೇಟ್ ನಿಂದ ಆಗುವ ತಡೆಗಳನ್ನು ನಿವಾರಿಸಲು 10.85 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಕೆಳ ಸೇತುವೆ (ಖಗಃ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಈ ಸೇತುವೆ ನಿರ್ಮಾಣದಿಂದ ಭಾಲ್ಕಿ ಮತ್ತು ಬೀದರ್ ನಡುವಿನ ವಾಹನ ಸಂಚಾರ ಸುಗಮವಾಗಲಿದ್ದು, ರಸ್ತೆ ಹಾಗೂ ರೈಲು ಪ್ರಯಾಣಿಕರ ಸುರಕ್ಷತೆ ಹೆಚ್ಚಳವಾಗುತ್ತದೆ. ಜೊತೆಗೆ, ಪ್ರಯಾಣದ ಸಮಯವೂ ಕಡಿಮೆಯಾಗಲಿದೆ.

ಈ ಕಾರ್ಯಕ್ರಮದಲ್ಲಿ ಗಣ್ಯರು ಮತ್ತು ಹಿರಿಯ ರೈಲ್ವೆ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆಂದು ಅವರು ತಿಳಿಸಿದ್ದಾರೆ.

# ವೈದ್ಯರ ನಿರ್ಲಕ್ಷ್ಯ, ಔಷಧ ರಿಯಾಕ್ಷನ್ ನಿಂದ ಬಾಲಕನ ಜೀವಕ್ಕೆ ಕುತ್ತು: ವೈದ್ಯರ ವಿರುದ್ಧ ಕ್ರಮಕ್ಕೆ ಡಿಎಚ್‌ಓಗೆ ದಸಂಸ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜಿಲ್ಲೆಯ ಶಹಾಪುರ ಪಟ್ಟಣದಲ್ಲಿರುವ ದಿ.ಅಚ್ಚಪ್ಪಗೌಡ ಸುಬೇದಾರ ಸ್ಮಾರಕ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆಯ ವೈದ್ಯರಾದ ಸಿ.ಎ. ಸುಬೇದಾರ ಇವರು, 10 ವರ್ಷದ ಬಾಲಕನಿಗೆ ಗಂಟಲು ನೋವಿಗೆ ಕೊಟ್ಟಿರುವ ಚಿಕಿತ್ಸೆ ರಿಯಾಕ್ಷನ್ ಆಗಿರುವುದರಿಂದ ಸದರಿ ವೈದ್ಯರ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಜಿಲ್ಲಾ ಶಾಖೆ ಆಗ್ರಹಿಸಿದೆ.

ಈಕುರಿತುಜಿಲ್ಲಾಆರೋಗ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದ ದಸಂಸ ಕಾರ್ಯಕರ್ತರು,ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ದೇವದುರ್ಗ ಪಟ್ಟಣದ ಅಬುಮೊಹಲ್ಲಾ ಓಣಿ 10 ವರ್ಷ ವಯಸ್ಸಿನ ಬಾಲಕನಾದ ಮೊಹ್ಮದ್‌ಸಾದ್ ತಂದೆ ಮುಬಾರಕ್‌ಅಹ್ಮದ್ ಈತನನ್ನು ಪೋಷಕರು ತಮ್ಮ ಮಗನ ಗಂಟಲು ನೋವಿಗಾಗಿ ಯಾದಗಿರಿ ಜಿಲ್ಲೆಯ ಶಹಾಪುರ ಪಟ್ಟಣದ ದಿ.ಅಚ್ಚಪ್ಪಗೌಡ ಸುಬೇದಾರ ಸ್ಮಾರಕ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆಯ ವೈದ್ಯರಾದ ಸಿ.ಎ. ಸುಬೇದಾರ ಇವರ ಬಳಿ ದಿನಾಂಕ: 06-05-2025 ರ ಮಧ್ಯಾಹ್ನ 2 ಗಂಟೆಗೆ ಚಿಕಿತ್ಸೆ ಪಡೆದಿರುತ್ತಾನೆ.

ಬಾಲಕನ ಗಂಟಲು ನೋವಿಗೆ ಸಂಬಂಧಿಸಿದಂತೆ ಸರಿಯಾದ ಚಿಕಿತ್ಸೆ ಕೊಡದೇ, ಇವರು ಕೊಟ್ಟಿರುವ ಇಂಜಕ್ಷನ್ ಮತ್ತು ಔಷಧಿಗಳಿಂದ ಬಾಲಕನ ದೇಹದ ಚರ್ಮವೆಲ್ಲ ರಕ್ತದ ಗುಳ್ಳೆಗಳಾಗಿ, ದೇಹವೆಲ್ಲ ನೋವು ಹಾಗೂ ಮಲವಿಸರ್ಜನೆಯ ಮಾಡುವಾಗ ರಕ್ತಸ್ರಾವವಾಗುತ್ತಿದ್ದು, ಕಾರಣ ಅಲ್ಲಿಂದ ದಿನಾಂಕ: 06-05-2025 ರ ಮಧ್ಯಾಹ್ನ 2 ಗಂಟೆಗೆ ಬಾಲಕನಿಗೆ ಚಿಕಿತ್ಸೆ ಪಡೆದು, ದಿನಾಂಕ: 07-05-2025 ರಂದು ಪೋಷಕರು ಬಾಲಕನನ್ನು ತಮ್ಮ ಮನೆಗೆ ಕರೆದುಕೊಂಡು ಬಂದ ದಿನದಂದು ವೈದ್ಯರು ಕೊಟ್ಟಿರುವ ಚಿಕಿತ್ಸೆ ಏರುಪೇರಾಗಿದ್ದು ಕಂಡುಬಂದಿರುತ್ತದೆ. ಇದರಿಂದ ಪುನಃ ದಿನಾಂಕ: 08-05-2025 ರಂದು ಸಿ.ಎ. ಸುಬೇದಾರ ಇವರ ಬಳಿಗೆ ಬಾಲಕನನ್ನು ಕರೆದು-ಕೊಂಡು ಬಂದಿರುತ್ತಾರೆ.

ಆಗ ಡಾ. ಸಿ.ಎ.ಸುಬೇದಾರರವರು ಸ್ಪಂಧನ ಆಸ್ಪತ್ರೆಯ ಚರ್ಮರೋಗ ಮತ್ತು ಕೂದಲು ತಜ್ಞರಾದ ಡಾ. ಶಿವಪ್ರಸಾದ ಗೌಡ ಇವರ ಬಳಿ ಚಿಕಿತ್ಸೆಗೆ ಕಳುಹಿಸಿರುತ್ತಾರೆ. ಡಾ. ಶಿವಪ್ರಸಾದಗೌಡ ಇವರು ಶಹಾಪುರದ ದರ್ಶನಾಪುರ ರಕ್ತ ಪರೀಕ್ಷಾ ಕೇಂದ್ರಕ್ಕೆ ರಕ್ತ ಪರೀಕ್ಷೆಗೆಂದು ಕಳುಹಿಸಿದಾಗ, ರಕ್ತ ಪರೀಕ್ಷೆಯ ವರದಿ ನೀಡುವಾಗ ಬಾಲಕನ ಹೆಸರು ಮತ್ತು ವಯಸ್ಸನ್ನು ತಪ್ಪಾಗಿ ನಮೂದು ಮಾಡಿ ವರದಿ ನೀಡಿರುತ್ತಾರೆ. ಡಾ. ಶಿವಪ್ರಸಾದ ಗೌಡರವರು 3 ದಿನಗಳು ನಿರಂತರ ಚಿಕಿತ್ಸೆ ನೀಡಿದರೂ ಯಾವುದೇ ರೀತಿಯಲ್ಲಿ ಗುಣಮುಖವಾಗದೇ ಇರುವುದರಿಂದ ಬಾಲಕನನ್ನು ದಿನಾಂಕ:11-05-2025 ರಂದು



ರಾಯಚೂರಿನ ನ್ಯೂ ಅಮೃತ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ.

ಕಾರಣ ಗಂಟಲು ನೋವಿಗಾಗಿ ಚಿಕಿತ್ಸೆ ಕೊಟ್ಟಿರುವ ವೈದ್ಯರಾದ ಸಿ.ಎ. ಸುಬೇದಾರ ಇವರ ನಿರ್ಲಕ್ಷತನ ಮತ್ತು ಇವರು ಕೊಟ್ಟಿರುವ ಇಂಜಕ್ಷನ್ ಮತ್ತು ಔಷಧಿಗಳ ರಿಯಾಕ್ಷನ್‌ನಿಂದ ಬಾಲಕನಿಗೆ ದೇಹದ ಚರ್ಮವೆಲ್ಲ ರಕ್ತದ ಗುಳ್ಳೆಗಳಾಗಿ, ದೇಹವೆಲ್ಲ ನೋವು ಹಾಗೂ ಮಲವಿಸರ್ಜನೆಯ ಸಂದರ್ಭದಲ್ಲಿ ರಕ್ತಸ್ರಾವವಾಗಲು ನೇರ ಕಾರಣವಾಗಿರುತ್ತಾನೆ. ಇದಲ್ಲದೆ ಆಗಿರುವ ತಪ್ಪು ತಮ್ಮ ಮೇಲೆ ಬರಬಹುದೆನ್ನುವ ಉದ್ದೇಶದಿಂದ ರಕ್ತ ಪರೀಕ್ಷೆಯ ವರದಿಯಲ್ಲಿ ಬಾಲಕನ ಹೆಸರು ಮತ್ತು ವಯಸ್ಸು ತಪ್ಪಾಗಿ ನಮೂದಿಸಲು ಇವರೇ ಕಾರಣರಾಗಿರುತ್ತಾರೆ. ಮತ್ತು ಈ ಕೆಲ ದಿನಗಳ ಹಿಂದೆ ಇದೇ ಶಹಾಪೂರ ತಾಲೂಕಿನ ಹುಲಕಲ್(ಕೆ)ಗ್ರಾಮದ ಯುವತಿಯು ಅನಾರೋಗ್ಯದಿಂದ ಬಳಲಿ ಇದೇ ಸುಭೇಧಾರ ಆಸ್ಪತ್ರೆಗೆ ಚಿಕಿತ್ಸೆಗೆಂದು ಪ್ರವೇಶ ಪಡೆದುಕೊಂಡಿರುತ್ತಾರೆ ಆಗಲೂ ಇವರ ನಿರ್ಲಕ್ಷತನದಿಂದ ಯುವತಿಯು ಸಾವೀಗೀಡಾಗಿರುವ ಸುದ್ದಿಯು ಕಂಡುಬಂದಿರುತ್ತದೆ. ಈ ಯುವತಿಯ ಕುಟುಂಬಕ್ಕೆ ರೂ. 5ಲಕ್ಷ ಹಣವನ್ನು ನೀಡಿ ಈ ಕೇಸನ್ನು ಮುಚ್ಚಿಹಾಕಿರುತ್ತಾರೆ. ಆದರೆ ಮತ್ತೆ ಒಂದಾದ ಮೇಲೆ ಒಂದರಂತೆ ಬಡವರ ಜೀವನದ ಮೇಲೆ ಆಟ ಆಡಿ ಮುಗ್ದ ರೋಗಿಗಳ ಪ್ರಾಣ ಕಂಟಕವಾಗಿರುತ್ತಾರೆ ಈ ಸುಭೇದಾರ. ಈ ರೀತಿಯಾಗಿ ನಡೆದ ಬಗ್ಗೆ ಸಾರ್ವಜನಿಕರು ನಮ್ಮ ಸಂಘಟನೆಯ ಕಛೇರಿಗೆ ಬಂದು ತಮ್ಮ ಅಳಲನ್ನು ತೆ-ೂಡಿಕೊಂಡಿರುತ್ತಾರೆ,

ಆದುದರಿಂದ ಕಾಯಿಲೆಗೆ ಸಂಬಂಧಿಸಿದಂತೆ ಸರಿಯಾದ ಚಿಕಿತ್ಸೆನೀಡುವಲ್ಲಿ ಆಸ್ಪತ್ರೆಗೆ ಚಿಕಿತೆ-ಗೆಂದು ಬರುವ ಅಮಾಯಾಕರಿಗೆ ಯಾವುದೋ ಚಿಕಿತ್ಸೆ ನೀಡಿ ಅವರ ಜೀವದ ಬಗ್ಗೆ ನಿರ್ಲಕ್ಷ ವಹಿಸಿ, ನಕಲಿ ವೈದ್ಯಕೀಯ ವೃತ್ತಿ ಮಾಡುತ್ತಿರುವ ಇಂತಹ ವೈದ್ಯರಿಗೆ ಸೂಕ್ತ ಕಾನೂನು ಕ್ರಮ ವಹಿಸುಲು ಈ ಮೂಲಕ ತಮಗೆ ಆಗ್ರಹಿಸುತ್ತಾ ಸದರಿ ಬಾಲಕನಿಗೆ ಡಾ.ಸಿ.ಎ.ಸುಬೇದಾರ ನೀಡಿರುವ ಚಿಕಿತ್ಸೆಯಿಂದ ಆಗಿರುವ ರಿಯಾಕ್ಷನ್‌ಗೆ ಚಿಕಿತ್ಸೆ ಪಡೆಯಲು ನ್ಯೂ ಅಮೃತ ಆಸ್ಪತ್ರೆಯ ವೆಚ್ಚ ಭರಿಸುವಂತೆ ಹಾಗೂ ತಾವು ವೈದ್ಯರು ಮಾಡಿರುವ ತಪ್ಪಿಗೆ ರೂ. 5 ಲಕ್ಷ ಧಂಡಕೊಡಲು ಕ್ರಮ ವಹಿಸಿ, ಸದರಿ ವೈದ್ಯನ ಪರವಾನಿಗೆ ರದ್ದುಪಡಿಸಲು ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಜಿಲ್ಲಾ ಸಮಿತಿ ಯಾದಗಿರಿ ಆದ ನಾವುಗಳು ಈ ಮೂಲಕ ತಮ್ಮಲ್ಲಿ ಆಗ್ರಹಿಸುತ್ತಿದೇವೆ.

ಒಂದು ವೇಳೆ ತಾವುಗಳು ಈ ಬಾಲಕನ ಆರೋಗ್ಯದ ಮೇಲೆ ಏರುಪೇರಾಗಲು ಕಾರಣ-ರಾದ ಸಂಬಂಧಪಟ್ಟ ವೈದ್ಯನ ಮೇಲೆ ಕ್ರಮಕೈಗೊಳ್ಳುವಲ್ಲಿ ನಿರ್ಲಕ್ಷ ವಹಿಸಿದಲ್ಲಿ ಮುಂದಿನ ದಿನಗಳಲ್ಲಿ ತಮ್ಮ ಯಾದಗಿರಿ ಜಿಲ್ಲಾ ಆಸ್ಪತ್ರೆಯ ಮುಂದೆ ಉಗ್ರ ಹೋರಾಟ ಮಾಡಲಾಗುವುದೆಂದು ಎಚ್ಚರಿಸಿದರು.

ದಸಂಸ ಜಿಲ್ಲಾ ಸಂಚಾಲಕ ಮೋಹನರಾಜ್ ಗೌಡ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಹಾಪೂರ ತಾ. ಸಂಚಾಲಕ ಹನುಮಂತಗಬ್ಬೂರ,ಭೀಮರಾಯ ಬಡಿಗೇರ, ಕ್ರಾಂತಿಕುಮಾರ ರಾಯಚೂರಕರ್,ಆಂಜಿನೇಯ ಟೊಣ್ಣೂರ, ಅರುಣಕುಮಾರ ನಾಟೇಕರ್,ಹನುಮಂತ ಶೆಟಿಗೇರಿ, ಮಬಾರಕರ್ ದೇವದುರ್ಗ,ಭೀಮು ಹುಲಿಮನಿ, ಮಲ್ಲಿಕಾರ್ಜುನ ಕಟ್ಟಿಮನಿ ಸೇರಿದಂತೆ ಇನ್ನಿತರರು ಇದ್ದರು.

# ಚಿಂಚೋಳಿ: ಮೆಟ್ರಿಕ್ ಪೂರ್ವ/ನಂತರ ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.29-ಪ್ರಸಕ್ತ 2025-26ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಚಿಂಚೋಳಿ ತಾಲೂಕಿನಲ್ಲಿ ನಡೆಯುತ್ತಿರುವ ಈ ಕೆಳಕಂಡ ಸರ್ಕಾರಿ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಸತಿ ನಿಲಯಗಳಿಗೆ/ವಸತಿ ಶಾಲೆಯಲ್ಲಿ (ಆಫ್‌ಲೈನ್) ಮೂಲಕ ಹಾಗೂ ಅನುದಾನಿತ ಮೆಟ್ರಿಕ್ ಪೂರ್ವ ವಸತಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಮದು ಚಿಂಚೋಳಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ 5 ರಿಂದ 10ನೇ ತರಗತಿವರೆಗೆ ಆನ್‌ಲೈನ್ ಮೂಲಕ ಹಾಗೂ ವಸತಿ ಶಾಲೆಯಲ್ಲಿ 1 ರಿಂದ 5 ತರಗತಿಯವರೆಗೆ ಆಫ್‌ಲೈನ್ ಮೂಲಕ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕು. ಚಿಂಚೋಳಿ, ಐನಾಪುರ, ಚಂದನಕೇರಾ, ಸುಲೇಪೇಟ್,ಗಡಿಕೇಶ್ವರ ಮತ್ತು ಕುಂಚಾವರಂಗಳಲ್ಲಿರುವ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಗಳಿಗೆ ಹಾಗೂ ಚಿಂಚೋಳಿ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ, ಚಿಂಚೋಳಿ, ಒಂ-ಟಿಚಿಂತಾ ಹಾಗೂ ಪತ್ಯಾ ತಾಂಡಗಳಲ್ಲಿನ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ ವಸತಿ ನಿಲಯಗಳಿಗೆ ಪ್ರವೇಶ ಪಡೆಯಬಹುದಾಗಿದೆ. ಅನುದಾನಿತ ವಸತಿನಿಲಯಗಳಾದ ಅಮರವಾಣಿ ಮೆಟ್ರಿಕ್ ಪೂರ್ವ ಬಾಲಕರ ಅನುದಾನಿತ ವಸತಿ ನಿಲಯ ಚಂದಾಪೂರ, ಲಮಾಣಿ ಮೆಟ್ರಿಕ್ ಪೂರ್ವ ಬಾಲಕರ ಅನುದಾನಿತ ವಸತಿ ನಿಲಯ ಚಿಂಚೋಳಿ ಹಾಗೂ ಕಾಳಗಿ ತಾಲೂಕಿನ ಮೋಘಾ ರೇವಣಸಿದ್ದೇಶ್ವರ ಮೆಟ್ರಿಕ್ ಪೂರ್ವ ಬಾಲಕರ ಅನುದಾನಿತ ವಸತಿ ನಿಲಯಗಳಿಗೆ ಪ್ರವೇಶ ಪಡೆಯಬಹುದಾಗಿದೆ.

# ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಗಮನಾರ್ಹ ಸಾಧನೆ: ಕುಲಪತಿ ಡಾ.ಎಂ.ಹನುಮಂತಪ್ಪ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಮೇ 29- ವಿಶ್ವವಿದ್ಯಾಲಯವು ಶೈಕ್ಷಣಿಕ, ಸಂಶೋಧನೆ ಹಾಗೂ ವಿಸ್ತರಣಾ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದೆ ಎಂದು ರಾಯಚೂರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ಅವರು ಹೇಳಿದರು.

ರಾಯಚೂರ ಕೃಷಿ ವಿವಿಯಲ್ಲಿ ಮೇ 26ರಂದು ನಡೆದ 14ನೇ ಘಟಿಕೋತ್ಸವದಲ್ಲಿ ಅವರು ಮಾತನಾಡಿದರು.

ರಾಯಚೂರ ವಿಶ್ವವಿದ್ಯಾಲಯವು ಶೈಕ್ಷಣಿಕ, ಸಂಶೋಧನೆ ಹಾಗೂ ವಿಸ್ತರಣಾ ಕ್ಷೇತ್ರಗಳಲ್ಲಿ ಸಲ್ಲಿಸುತ್ತಿರುವ ಅವಿರತ ಸೇವೆಯ ಫಲಪ್ರದವಾಗಿ ಭಾರತೀಯ ಕೃಷಿ ಅನುಸಂಧಾನ ಪರಿಷತ್ ನಮ್ಮ ವಿಶ್ವವಿದ್ಯಾಲಯಕ್ಕೆ 25ನೇ ಶ್ರೇಣಿ ನೀಡಿರುವುದು ನಮಗೆ ಹೆಮ್ಮೆಯ ಹಾಗೂ ಸಂತಸದ ವಿಷಯವಾಗಿದೆ. ಅಲ್ಲದೇ, ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಆಡಳಿತದಲ್ಲಿನ ಗಮನಾರ್ಹ ಸಾಧನೆಗಳಿಗೆ ರಾಷ್ಟ್ರಮಟ್ಟದ ಎನ್‌ಐಆರ್ ಶ್ರೇಯಾಂಕಗನುಗುಣವಾಗಿ 39ನೇ ಅತ್ಯುತ್ತಮ ಕೃಷಿ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಅವರು ತಿಳಿಸಿದರು.

ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ವ್ಯಾಪ್ತಿಯನ್ನೊಳಗೊಂಡಂತೆ ಆರು ಮಹಾವಿದ್ಯಾಲಯಗಳಲ್ಲಿ ವಿಶ್ವವಿದ್ಯಾಲಯದ ಭೋಧನಾ ಚಟುವಟಿಕೆಗಳು ನಡೆಯುತ್ತಿವೆ. ಕೃಷಿಯಲ್ಲಿ ಸ್ನಾತಕ ಪದವಿಯನ್ನು ರಾಯಚೂರು,ಭೀಮರಾಯನಗುಡಿ, ಕಲಬುರಗಿ, ಗಂಗಾವತಿ ಮತ್ತು ಹಗರಿಗಳಲ್ಲಿ ಸ್ಥಾಪಿತವಾದ ಮಹಾವಿದ್ಯಾಲಯಗಳಲ್ಲಿಯೂ, ಕೃಷಿ ತಾಂತ್ರಿಕ ಸ್ನಾತಕ ಪದವಿಯನ್ನು ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯ ಆವರಣದಲ್ಲಿಯೂ ಅಭ್ಯಸಿಸಲಾಗುತ್ತಿದೆ. ರಾಯಚೂರು ಆವರಣದ ವಿವಿಧ ವಿಭಾಗಗಳಲ್ಲಿ 15 ಸ್ನಾತಕೋತ್ತರ ಹಾಗೂ 14 ಪಿ.ಹೆಚ್.ಡಿ ಪದವಿ ಕಾರ್ಯಕ್ರಮಗಳನ್ನು ನಿರ್ವಹಿಸಲಾಗುತ್ತಿದೆ ಎಂದರು.

2022-23ನೇ ಸಾಲಿನಲ್ಲಿ ಸ್ನಾತಕ ಪದವಿಗೆ 216 ವಿದ್ಯಾರ್ಥಿನಿಯರು ಸೇರಿದಂತೆ ಒಟ್ಟು 464 ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ. ಕೃಷಿ ಪದವಿಗೆ 387 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಬಿ.ಟೆಕ್ ಕೃಷಿ ತಾಂತ್ರಿಕ ಪದವಿಗೆ ಒಟ್ಟು 77 ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ. ಅಲ್ಲದೇ, ಸ್ನಾತ-ಕೋತ್ತರ ಪದವಿಗಳಿಗೆ 132 ಕೃಷಿಯಲ್ಲಿ ಸ್ನಾತಕ ಪದವಿಯನ್ನು ರಾಯಚೂರು,ಭೀಮರಾಯನಗುಡಿ, ಕಲಬುರಗಿ, ಗಂಗಾವತಿ ಮತ್ತು ಹಗರಿಗಳಲ್ಲಿ ಸ್ಥಾಪಿತವಾದ ಮಹಾವಿದ್ಯಾಲಯಗಳಲ್ಲಿ ನಡೆಸಲಾಗುತ್ತಿದೆ ಎಂದರು.

ಕೃಷಿ ಮತ್ತು ಕೃಷಿಗೆ ಸಂಬಂಧಿಸಿದ ವಿಷಯಗಳಲ್ಲಿ ಗುಣಮಟ್ಟದ ಶಿಕ್ಷಣ, ಸಮಗ್ರ, ಅಭಿವೃದ್ಧಿಗೆ ಪೂರಕವಾದ ಸಂಶೋಧನೆ ಮತ್ತು ಸಂಶೋಧನೆಯ ಫಲಿತಾಂಶಗಳನ್ನು ರೈತ ಸಮುದಾಯಕ್ಕೆ ಒದಗಿಸಿ, ಅವುಗಳನ್ನು ಅಳವಡಿಸಲು ಯೋಗ್ಯ ವಿಸ್ತರಣಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ನಮ್ಮ ವಿಶ್ವವಿದ್ಯಾಲಯದ ಧ್ಯೇಯೋದ್ದೇಶವಾಗಿದೆ. ವಿಶ್ವವಿದ್ಯಾಲಯವು 22 ನವಂಬರ್ 2008 ರಂದು ಸ್ಥಾಪನೆಗೊಂಡ ನಂತರ ತನ್ನ ಒಂದು ದಶಕಕ್ಕೂ ಹೆಚ್ಚಿನ ವಸಂತಗಳ ಸಾರ್ಥಕ ಸೇವೆಯನ್ನು ರೈತರ ಅಭ್ಯುದಯಕ್ಕಾಗಿ ಮುಡಿಪಾಗಿಟ್ಟಿದೆ ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಾಲಿ ಕುಲ ಸಚಿವರಾದ ಡಾ.ಕೆ.ಆರ್. ದುರುಗೇಶ್, ನಿರ್ಗಮಿತ ಕುಲ ಸಚಿವ ಡಾ.ಗುರುರಾಜ್ ಸುಂಕದ ಹಾಗೂ ವಿವಿಯ ವ್ಯವಸ್ಥಾಪನಾ ಮಂಡಳಿ ಸದಸ್ಯರು ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು, ವಿದ್ಯಾರ್ಥಿಗಳು ಇದ್ದರು.

# 2 ವರ್ಷಗಳಲ್ಲಿ ಕ್ಷೇತ್ರಕ್ಕೆ ಸಮರ್ಪಕ ಅನುದಾನ ಬಂದಿದೆ, ಅಭಿವೃದ್ಧಿ ಪ್ರಗತಿ ತೃಪ್ತಿ ತಂದಿದೆ: ಶಾಸಕ ತುನ್ನೂರು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕ್ಷೇತ್ರದಲ್ಲಿ ಕೆಕೆಆರ್‌ಡಿಬಿ ಸೇರಿದಂತೆ ವಿವಿಧ ಮೂಲಗಳಿಂದ ಸಮರ್ಪಕ ಅನುದಾನ ತಂದಿದ್ದು, ಎರಡು ವರ್ಷಗಳಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ, ಅವಧಿಯ ಅಭಿವೃದ್ಧಿ ತಮಗೆ ತೃಪ್ತಿ ತಂದಿವೆ ಎಂದು ಶಾಸಕ ಚೆನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದರು.



ತಮ್ಮ ಜನಸಂಪರ್ಕ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಲ್ಲಿ ಒಟ್ಟು 25247 ಲಕ್ಷ ರೂ. ಅನುದಾನ ಬಂದಿದ್ದು, ಇದರಲ್ಲಿ 804 ಕಾಮಗಾರಿಗಳು ಕೈಗೆತ್ತಿಕೊಳ್ಳಲಾಗಿದೆ. ಇವುಗಳ ಪೈಕಿ 331 ಕಾಮಗಾರಿಗಳು ಪೂರ್ಣಗೊಂಡಿವೆ. ಇದಕ್ಕಾಗಿ 5468.24 ಲಕ್ಷ ರೂ. ವ್ಯಯಿಸಲಾಗಿದೆ.

ಇನ್ನು 473 ಕಾಮಗಾರಿಗಳು ಪ್ರಗತಿಯಲ್ಲಿದ್ದು, ಇದಕ್ಕಾಗಿ 17779.08 ಲಕ್ಷ ರೂ.ಗಳು ಅನುದಾನ ಲಭ್ಯವಿದೆ ಎಂದು ಹೇಳಿದರು.

ಕೆಆರ್‌ಐಡಿಎಲ್ ಅಡಿ 139 ಕಾಮಗಾರಿಗಳಿಗೆ ಅನುಮೋದನೆಗೊಂಡು ಕೆಲಸ ನಡೆಯುತ್ತಿದೆ. ಇದರಲ್ಲಿ ಈಗಾಗಲೇ 36 ಕಾಮಗಾರಿ ಪೂರ್ಣಗೊಂಡಿವೆ. 2922 ಲಕ್ಷರೂ. ವ್ಯಯಿಸಲಾಗಿದೆ. ಇನ್ನು 103 ಕಾಮಗಾರಿಗಳು ನಡೆಯುತ್ತಿವೆ 2350 ಲಕ್ಷ ರೂ. ಅನುದಾನ ಲಭ್ಯವಿದೆ.

ಪಿಆರ್‌ಇಡಿ ವಿಭಾಗದಲ್ಲಿಯೂ 66 ಕಾಮಗಾರಿಗಳು 179.99 ಲಕ್ಷ ರೂ. ವ್ಯಯಿಸಿ ಪೂರ್ಣಗೊಳಿಸಲಾಗಿದೆ. ಇನ್ನು ಇಷ್ಟೇ ಪ್ರಮಾಣದ ಕಾಮಗಾರಿಗಳು ಪ್ರಗತಿಯಲ್ಲಿವೆ.

ಕೆಕೆಆರ್‌ಡಿಬಿಯಿಂದ ಒಟ್ಟು 429 ಕಾಮಗಾರಿಗಳು ಕೈಗೆತ್ತಿಕೊಳ್ಳಲಾಗಿದೆ ಇವುಗಳ ಪೈಕಿ 250 ಕಾಮಗಾರಿಗಳಿಗೆ 7217.64 ಲಕ್ಷ ರೂ. ವ್ಯಯಿಸಿ ಪೂರ್ಣಗೊಳಿಸಲಾಗಿದೆ. ಇನ್ನು 179 ಕಾಮಗಾರಿಗಳಿಗೆ 3754.31 ಲಕ್ಷ ರೂ. ಅನುದಾನ ಇದ್ದು ಕಾಮಗಾರಿ ಪ್ರಗತಿಯಲ್ಲಿವೆ.

ಪ್ರಸಕ್ತ ಸಾಲಿನಲ್ಲಿ ಪಿಎಂಗ್ರಾಮೀಣ ರಸ್ತೆಯೋಜನೆಯಡಿ 17 ಕಾಮಗಾರಿಗಳು ಕೈಗೆತ್ತಿಕೊಳ್ಳಾಗಿದೆ. ಇವುಗಳ ಪೈಕಿ 40 ಲಕ್ಷ ವೆಚ್ಚದಲ್ಲಿ 1 ಕಾಮಗಾರಿ ಪೂರ್ಣಗೊಂಡಿದೆ. ಇನ್ನು 16 ಕಾಮಗಾರಿಗಳು ನಡೆಯುತ್ತಿದ್ದು ಇದಕ್ಕಾಗಿ 5968 ಲಕ್ಷ ರೂ. ಅನುದಾನ ಲಭ್ಯವಿದೆ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಲೋಕೋಪಯೋಗಿ ಇಲಾಖೆಯಲ್ಲಿ 1750 ಲಕ್ಷರೂ. ಮಂಜೂರಾಗಿದ್ದು ಇವುಗಳ ಪೈಕಿ 1 ಕಾಮಗಾರಿ 300 ಲಕ್ಷ ರೂ. ವೆಚ್ಚದಲ್ಲಿ ಪೂರ್ಣಗೊಂಡಿದ್ದು ಬಾಕಿ 1450 ಲಕ್ಷ ರೂ. ವೆಚ್ಚದ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ ಪಿಆರ್‌ಇಡಿಯಲ್ಲಿ 44 ಕಾಮಗಾರಿಗಳು 133 ಲಕ್ಷ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಎಲ್ಲ ಕಾಮಗಾರಿಗಳು ಪ್ರಗತಿಯಲ್ಲಿವೆ.

ಒಟ್ಟಾರೆ ಅನುದಾನದ ಕೊರತೆ ಇಲ್ಲ ಕೆಕೆಆರ್‌ಡಿಬಿಯಿಂದ ಸಮರ್ಪಕವಾಗಿ ಅನುದಾನ ಲಭ್ಯವಿದ್ದು, ಒಟ್ಟಾರೆ ಎರಡು ವರ್ಷಗಳ ಕೆಲಸ ತೃಪ್ತಿತಂದಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಆಧ್ಯಕ್ಷ ವಿನಾಯಕ ಮಾಲಿ ಪಾಟೀಲ್, ಜಿಲ್ಲಾಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಬಸ್ಸುಗೌಡ ಬಿಳ್ಹಾರ,ಪ್ರಚಾರ ಸಮಿತಿ ಅಧ್ಯಕ್ಷ ಮರೆಪ್ಪ ಬಿಳ್ಹಾರ, ವಕ್ತಾರ ಸಾಮಸನ್ ಮಾಳಿಕೇರಿ,ಸಾಬಣ್ಣ ಕೆಂಗುರಿ, ಸುರೇಶ ಮಡ್ಡಿ, ಸೇರಿದಂತೆ ಅನೇಕರು ಇದ್ದರು.

# ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕ ಸಮಿತಿಯ ಭೀಮರಾಯ ಪೂಜಾರಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ತಾಲೂಕಿನ ಕನ್ಯಕೋಳೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ತಿಪ್ಪನಹಳ್ಳಿ ಗ್ರಾಮದ ಅಭಿವೃದ್ಧಿ ಕಾಣದೆ ಮಳೆ ನೀರಿಗೆ ತತ್ತರಿಸಿ ಹೋದ ಜನತೆಯ ಬಾಳು ಯಾರು ಕೇಳದಂತಾಗಿದೆ ವೈರುದ್ಧರು ಹಾಗೂ ಮಹಿಳೆಯರು ಪುರುಷರು ಮತ್ತು ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಓಡಾಡುವಂತ ಪರಿಸ್ಥಿತಿ ನಿರ್ಮಾಣವಾಗಿದೆ ಇದಕ್ಕೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಆಡಳಿತ ಅಭಿವೃದ್ಧಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ನಿದ್ದೆಗೆ ಜಾರಿ ಇರುವುದು ಜನರ ಆಕ್ರೋಶಕ್ಕೆ ಕಾರಣವಾಗುತ್ತಿದೆ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಎಚ್ಚೆತ್ತು ಕೊಂಡು ತಿಪ್ಪನಹಳ್ಳಿ ಗ್ರಾಮದಿಂದ ಕನ್ಯಕೋಳೂರು ಕೆ ಹೋಗುವ ಮುಖ್ಯ ರಸ್ತೆ ಜಾಲಿ ಕಂಠಿ ಮತ್ತು ತಿಪ್ಪೆಗುಂಡೆಗಳು ತೆರವುಗೊಳಿಸಿ ರಸ್ತೆ ಅಭಿವೃದ್ಧಿ ಮಾಡಿ ಮರ್ಮ ಜನಸಾಮಾನ್ಯರಿಗೆ ಸುಗಮವಾಗಿ ಓಡಾಡಲು ಅನುಕೂಲ ಮಾಡಿಕೊಡಬೇಕಾಗಿ ವಿನಂತಿ ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ಮಾಡಿ ಸರಿ ಮಾಡಬೇಕು ಇಲ್ಲವಾದರೆ ಕನ್ಯಕೋಳೂರು ಗ್ರಾಮ ಪಂಚಾಯಿತಿ ಮುಂದೆ ಹೋರಾಟ ಮಾಡುವುದು ಅನಿವಾರ್ಯ ಎಂದು ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕ ಕಾರ್ಯದರ್ಶಿ ಭೀಮರಾಯ ಪೂಜಾರಿ ಆಕ್ರೋಶವ್ಯಕ್ತಪಡಿಸಿದರು.

# ಬೇರೆ ಗ್ರಾಮಗಳ ಜನರಿಗೆ ಕೆಲಸ, ಅನ್ನ, ಆಶ್ರಯ ನೀಡಿದ ಗ್ರಾಮದಲ್ಲಿ ಸಮಸ್ಯೆಗಳಿಗೆ ಮುಕ್ತಿ ಸಿಗುತ್ತಿಲ್ಲ..!

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಗಿರಿ ಜಿಲ್ಲೆಯ ಹಸಿರು ಬೆಟ್ಟಗಳ ಹತ್ತಿರವಿರುವ ಹತ್ತಿಕುಣಿ ಗ್ರಾಮ ಒಂದು ಸಮಯದಲ್ಲಿ ಸುತ್ತ-ಮುತ್ತಲಿನ ಹಾಗೂ ಬೇರೆ ತಾಲ್ಲೂಕಿನ ಜನರಿಗೆ ಕೆಲಸ, ಅನ್ನ, ಆಶ್ರಯ ನೀಡಿದ ಹೆಗ್ಗಳಿಕೆ ಇತ್ತು, ಆದರೆ ಇಂದು ಅಲ್ಲಿ ವಾಸಿಸುವ ಜನರು ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅದಕ್ಕೆ ಎಂದು ಮುಕ್ತಿ ಸಿಗುತ್ತದೆ ಎಂದು ಅಧಿಕಾರಿಗಳ ವಿರುದ್ಧ ತಮ್ಮ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಹಿಂದೆ 1971ರಲ್ಲಿ ಹತ್ತಿಕುಣಿ ಜಲಾಶಯ ನಿರ್ಮಾಣ ಮಾಡಿದ ದಿನಗಳಲ್ಲಿ ಆ ಭಾಗದ 5-6 ಗ್ರಾಮಗಳ ರೈತರು ಮುಂಗಾರು ಬೆಳೆಯಾಗಿ ಹೆಸರು, ಭತ್ತ ಇನ್ನಿತರ ಬೆಳೆಗಳನ್ನು ಬೆಳೆಯಲು ಆರಂಭಿಸಿದರು, ಮುಂಗಾರು ಬೆಳೆಗಳಾಗಿ ಪ್ರಮುಖವಾಗಿ ಶೇಂಗಾ ಬಂಪರ್ ಬೆಳೆ ಬೆಳೆದರು, ರಾಶಿ ಮಾಡಲು ಯಾದಗಿರಿ ತಾಲ್ಲೂಕು ಅಲ್ಲದೇ ನೆರೆಯ ಶಹಾಪೂರ ತಾಲ್ಲೂಕಿನ ಹಳ್ಳಿಗಳ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿ ಕಾರ್ಮಿಕರು ಗ್ರಾಮಕ್ಕೆ ಸಹಸ್ರಾರು ಸಂಖ್ಯೆಯಲ್ಲಿ ಉದ್ಯೋಗ ಅರಸಿ ಆಗಮಿಸಿ 15-20 ದಿನಗಳ ಕಾಲ ಇಲ್ಲಿಯೆ ತಂಗಿ, ಕೆಲಸ ಮಾಡಿ ಹೋಗುತ್ತಿದ್ದರು. ಆದರೆ ಇಂದು ಕೇಂದ್ರ ಸರ್ಕಾರದ ಮಹತ್ವದ ಯೋಜನೆಗಳಲ್ಲಿ ಒಂದಾದ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಕಾಮಗಾರಿಗಳು ಅಧಿಕಾರಿಗಳ ಇಚ್ಚಾಶಕ್ತಿ ಕೊರತೆಯಿಂದ ಗ್ರಾಮದಲ್ಲಿ ಸರಿಯಾಗಿ ಅನುಷ್ಟಾನಗೊಳ್ಳದ ಪರಿಣಾಮ ಹೆಚ್ಚಿನ ಸಂಖ್ಯೆಯಲ್ಲಿ ಜನರು ಇಂದು ಉದ್ಯೋಗ ಅರಸಿ ಬೃಹತ್ ನಗರಗಳಿಗೆ ಗುಳೆ ಹೋಗಿದ್ದಾರೆ, ರಾಜ್ಯ ಹಾಗೂ ಕೇಂದ್ರ ಸರ್ಕಾರ ಗ್ರಾಮೀಣಾಭಿವೃದ್ಧಿಗಾಗಿ ಪ್ರತಿ



ವರ್ಷ ಹಲವಾರು ಜನಪರ ಯೋಜನೆಗಳ ಮೂಲಕ ಸಾಕಷ್ಟು ಅನುದಾನ ನೀಡುತ್ತದೆ, ಆದರೆ ಪಂಚಾಯತ ಅಭಿವೃದ್ಧಿ ಅಧಿಕಾರಿ ಹಾಗೂ ಆಡಳಿತ ಮಂಡಳಿಯ ನಿರ್ಲಕ್ಷ ದಿಂದ ಹತ್ತಿಕುಣಿ ಗ್ರಾಮದಲ್ಲಿ ಅಭಿವೃದ್ಧಿ ಎಂಬುದು ಮರಿಚಿಕೆಯಾಗಿ ಪರಿಸರ ಸ್ವಚ್ಚತೆಯಿಲ್ಲದೇ ಇಂದು ಗ್ರಾಮ ತಿಪ್ಪೆಕುಣಿಯಾಗಿ ಮಾರ್ಪಟ್ಟಿದೆ. ಗ್ರಾಮದ ಒಳಗೆ ಇರುವ ಪ್ರಮುಖ ರಸ್ತೆಗಳು ಹದಗೆಟ್ಟು ತಗ್ಗು-ಗುಂಡೆಗಳಿಂದ ತುಂಬಿ ಕೆಟ್ಟ ವಾಸನೆ ಬೀರುತ್ತೀವೆ, ಸರಿಯಾದ ರಸ್ತೆಗಳ ಹಾಗೂ ಚರಂಡಿಗಳು ನಿರ್ಮಾಣ ಇಲ್ಲದ ಪರಿಣಾಮ ಜನರು ಉಪಯೋಗಿಸುವ ಮಲೀನ ನೀರೇ ರಸ್ತೆಯ ಮೇಲೆ ಹರಿಯುತ್ತವೆ, ಗ್ರಾಮದ ಪ್ರಮುಖ ಅಗಸಿ ರಸ್ತೆ ಮೇಲೆಯೇ ಸಂಗ್ರಹವಾಗಿ ನಿಂತಿರುವ ಮಲೀನ ನೀರಿನಲ್ಲಿಯೇ ಸಂಚಾರ ಮಾಡಿ ಮಹಿಳೆಯರು ದಿನಾಲೂ ಬೆಳಿಗ್ಗೆ ದೇವಸ್ಥಾನಗಳಿಗೆ ಆಗಮಿಸಿ, ದೇವರ ದರ್ಶನ ಪಡೆದು ಎಲ್ಲರಿಗೂ ಹಿಡೀ ಶಾಪ ಹಾಕುತ್ತಿದ್ದಾರೆ, ಕಳೆದ 2 ವರ್ಷಗಳ ಹಿಂದೆ ಅಂದಾಜು 2 ಕೋಟಿ ಮೌಲ್ಯದ ಕೇಂದ್ರ ಸರ್ಕಾರದ ಮಹತ್ವದ ಯೋಜನೆಯಾದ ಜಲಜೀವನ್ ಮಿಶನ್ (ಜೆಜೆಎಂ) ಮಂಜೂರಾಗಿತ್ತು, ಆದರೆ ಆ ಕಾಮಗಾರಿ ಗ್ರಾಮೀಣ ನೀರು ಸರಬರಾಜು ಇಲಾಖೆ ಹಾಗೂ ಪಂಚಾಯತ ಅಧಿಕಾರಿಗಳ ನಿರ್ಲಕ್ಷ ದಿಂದ ಇನ್ನೂ ಆರಂಭ ಹಂತದಲ್ಲಿಯೇ ಇದೆ, ಗ್ರಾಮದಲ್ಲಿ 10 ಸಾವಿರಕ್ಕೂ ಹೆಚ್ಚು ಜನರು ವಾಸಿಸುತ್ತಿದ್ದಾರೆ, ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಆಹಾಕಾರ ಉಂಟಾಗಿ ಹಳ್ಳದ ಮಲೀನ ನೀರೇ ಸೇವಿಸಿದ್ದರು, ಕಳೆದ 1 ವಾರದಿಂದ ಸುರಿಯುತ್ತಿರುವ ಮಳೆಯಿಂದ ಈಗಾಗಲೇ ತ್ಯಾಜ್ಯ ವಸ್ತುಗಳಿಂದ ತುಂಬಿದ್ದ ಚರಂಡಿಗಳಲ್ಲಿ ಸರಿಯಾಗಿ ನೀರು ಹರಿಯದೇ ರಸ್ತೆಗಳ ಮೇಲೆ ಸಂಗ್ರಹವಾಗಿ ಸಾಂಕ್ರಾಮಿಕ ರೋಗಗಳ ಉತ್ಪಾದನಾ ಕೇಂದ್ರಗಳಾಗಿ ಮಾರ್ಪಟ್ಟಿವೆ, ಇದರಿಂದ ಕೆಟ್ಟ ವಾಸನೆ ತಾಳದೇ ಜನರು ಮೂಗು ಮುಚ್ಚಿಕೊಂಡು ತಿರುಗಾಡುವಂತಹ ಸ್ಥಿತಿ ನಿರ್ಮಾಣವಾಗಿದೆ, ಈಗಾಗಲೇ ರಾಜ್ಯದಲ್ಲಿ ಮಾರಕ ಕರೋನಾ ವೈರಸ್ ದಾಳಿ ದಿನ-ದಿನಕ್ಕೆ ಹೆಚ್ಚಾಗುತ್ತಿದೆ, ಇಂತಹ ಸಮಯದಲ್ಲಿ ಪಂಚಾಯತ ಅಧಿಕಾರಗಳು, ಸಿಬ್ಬಂದಿಗಳು ಕ್ರೀಯಾಶೀಲವಾಗಿ ಗ್ರಾಮದಲ್ಲಿ ಸ್ವಚ್ಚತೆಗೆ ಆದ್ಯತೆ ನೀಡುತ್ತಿಲ್ಲ ಗ್ರಾಮಸ್ಥರ ಆರೋಪವಾಗಿದೆ. ಈ ಹಿಂದೆ 2020-21ರಲ್ಲಿ ಗ್ರಾಮಕ್ಕೆ ಲಗ್ಗೆ ಇಟ್ಟ ಕರೋನಾ ವೈರಸ್ ದಾಳಿಯಿಂದ 200ಕ್ಕೂ ಜನರು ಸೊಂಕು ತಗುಲಿ ಆಸ್ಪತ್ರೆಗಳಲ್ಲಿ ಚಿಕೀತ್ಸೆ ಪಡೆದರು, ಅದರಲ್ಲಿ ಹಲವಾರು ಜನರು ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದರು, ಇದರ ಬಗ್ಗೆ ಪಂಚಾಯತನವರು ಇತರ ಇಲಾಖೆಗಳ ಜೊತೆ-ಗೂಡಿ, ಜಾಗೃತಿ ಮೂಡಿಸುತ್ತಿಲ್ಲ ಎಂದು ಪ್ರಜ್ಞಾವಂತ ಕಳವಳ ವ್ಯಕ್ತಪಡಿಸುತ್ತಿದ್ದಾರೆ. ರಾಜ್ಯ ಸರ್ಕಾರ ಜನರಿಗೆ ಉಚಿತ ವಿದ್ಯುತ್ ಭಾಗ್ಯ ನೀಡಿದೆ, ಆದರೆ ಗ್ರಾಮದಲ್ಲಿರುವ ಕಂಬಗಳಿಗೆ ಪಂಚಾಯತ ವತಿಯಿಂದ ಬಲ್ಬ್‌ಳನ್ನು ಕೂಡ ಹಾಕಿಲ್ಲ, ಇದರಿಂದ ಜನರು ರಾತ್ರಿ ಸಮಯದಲ್ಲಿ ಕತ್ತಲಲ್ಲಿಯೇ ಸಂಚಾರ ಮಾಡುತ್ತಿದ್ದಾರೆ, ಇನ್ನೂ ಸಾರ್ವಜನಿಕ ಶೌಚಾಲಯಗಳ ಕೊರತೆಯಿಂದ ಮಹಿಳೆಯರು ತೊಂದರೆ ಅನುಭವಿಸುತ್ತಿದ್ದಾರೆ, ಪಂಚಾಯತ ಅಧ್ಯಕ್ಷೆ ಅನಕ್ಷರಸ್ಥೆ ಮಹಿಳೆಯಾಗಿರುವುದರಿಂದ ಭ್ರಷ್ಟಾಚಾರದಲ್ಲಿ ತೊಡಗಿರುವ ಪಿಡಿಓ 1 ವಾರದಲ್ಲಿ ಒಮ್ಮೆ ಮಾತ್ರ ಪಂಚಾಯತಗೆ ಬರುತ್ತಾರೆ, ಸಮಸ್ಯೆಗಳ ಕುರಿತು ಪಂಚಾಯತ ಅಭಿವೃದ್ಧಿ ಅಧಿಕಾರಿಗೆ ಕರೆ ಮಾಡಿ ಗಮನ ಸೆಳೆದರೇ, ಮಳೆ ಬಂದಿದೆ, ಯಾರು ಮಾಡುತ್ತಾರೆ ಕೆಲಸ ಎಂದು ಹಾರಿಕೆ ಉತ್ತರ ನೀಡಿದ್ದಾರೆ, ಗ್ರಾಮ ಪಂಚಾಯತ ಆಡಳಿತ ಮಂಡಳಿಯವರು ಹಾಗೂ ಅಧಿಕಾರಿಗಳು ಮದ್ಯೆ ಸಮನ್ವಯತೆ ಹಾಗೂ ಕೆಲಸ ಮಾಡುವ ಇಚ್ಚಾಶಕ್ತಿ ಕೊರತೆಯಿಂದ ಅನುದಾನ ದುರ್ಬಳಕೆಯಾಗಿದೆ ಎಂಬ ಸಂಶಯ ವ್ಯಕ್ತಪಡಿಸಿ, ಸರ್ಕಾರದ ಪ್ರಮುಖ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮಾಡುತ್ತಿಲ್ಲ, ಹಾಗೂ ಗ್ರಾಮದಲ್ಲಿ ಜನರು ಎದುರಿಸುತ್ತಿರುವ ಸಮಸ್ಯೆಗಳಿಗೆ ಮುಕ್ತಿ ಸಿಗುತ್ತಿಲ್ಲ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ.

ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ 'ಕುವೆಂಪು ಸಾಹಿತ್ಯದಲ್ಲಿ ವೈಚಾರಿಕತೆ' ಉಪನ್ಯಾಸ

# ಕುವೆಂಪು ರಚಿಸಿದ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಸರ್ವೋದಯ ತತ್ವ ಅಡಗಿದೆ: ಡಾ.ಸಿ. ಕೊಟ್ರೇಶ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 29–ಕುವೆಂಪು ರಚಿಸಿದ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಸರ್ವೋದಯ ತತ್ವವಿದೆ. ಪ್ರಜಾಪ್ರಭುತ್ವ ಮೌಲ್ಯಗಳನ್ನು ಎತ್ತಿ ಹಿಡಿಯುವದರ ಮೂಲಕ ಸಮನ್ವಯ ಮತ್ತು ಪೂರ್ಣದೃಷ್ಟಿಯ ಹರಿಕಾರರಾಗಿದ್ದಾರೆ. ಅವರ ವೈಚಾರಿಕತೆ ಮತ್ತು ವೈಜ್ಞಾನಿಕ ದೃಷ್ಟಿಕೋನವನ್ನು ಎಲ್ಲರೂ ಅನುಸರಿಸಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಸಿ. ಕೊಟ್ರೇಶ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಬಳ್ಳಾರಿ ಜಿಲ್ಲಾ ಘಟಕ ಹಾಗೂ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಕನ್ನಡ ಅಧ್ಯಯನ ವಿಭಾಗದ ಸಂಯುಕ್ತಾಶ್ರಯದಲ್ಲಿ 'ದಿ.ಕೆ.ವಿ.ತಿರುಪಾಲಪ್ಪ ಸ್ಮಾರಕ ದತ್ತಿ ಕಾರ್ಯಕ್ರಮ'ದಡಿ ಬುಧವಾರ ಏರ್ಪಡಿಸಿದ್ದ 'ಕುವೆಂಪು ಸಾಹಿತ್ಯದಲ್ಲಿ ವೈಚಾರಿಕತೆ' ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ವಿಜ್ಞಾನ ಮತ್ತು ಧರ್ಮವು ಕುವೆಂಪು ಅವರ ಸಾಹಿತ್ಯದ ವೈಚಾರಿಕತೆಯಾಗಿದೆ. ಮನುಜ ಮತ–ವಿಶ್ವ ಪಥ, ಸರ್ವೋದಯ ಪೂರ್ಣ ದೃಷ್ಟಿ ಸಮನ್ವಯತೆಯನ್ನು ಕುವೆಂಪು ಅವರ ಸಾಹಿತ್ಯದ ಮೂಲಕ ಕೊಟ್ಟ ನಿದರ್ಶನಗಳಾಗಿವೆ. ಇವುಗಳನ್ನು ಅರಗಿಸಿಕೊಂಡು ಬೆಳೆದಷ್ಟೂ ಕನ್ನಡ ಸಾಹಿತ್ಯವು ಇನ್ನು ಹೆಚ್ಚು ಶ್ರೀಮಂತವಾಗುತ್ತದೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಡಾ.ನಿಷ್ಠಿರುದ್ರಪ್ಪ ಅವರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಹಲವಾರು ವರ್ಷಗಳ ಇತಿಹಾಸ ಹೊಂದಿದೆ. ಅಖಿಲ ಭಾರತ ಸಮ್ಮೇಳನ ಕನ್ನಡ ಸಾಹಿತ್ಯವನ್ನು ನೆನಪು ಮಾಡಿಕೊಳ್ಳುವ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ಅಯೋಜಿಸಲಾಗುತ್ತಿದೆ ಎಂದರು.

ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಮುನಿರಾಜು ಮಾತನಾಡಿ, ಕುವೆಂಪು ಅವರು ಯಾವುದೇ ಅಧಿಕಾರ ಸ್ಥಾನಮಾನಕ್ಕೆ ಆಸೆ ಪಟ್ಟಿರಲಿಲ್ಲ. ವಿದ್ಯಾರ್ಥಿಗಳು ಅವರಂತೆ ಮನೋಭಾವನೆಯನ್ನು ಬೆಳಸಿಕೊಳ್ಳಬೇಕು. ಹೈದರಾಬಾದ್ ಕರ್ನಾಟಕದಲ್ಲಿ ಪೋಷಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಮಹತ್ವ ನೀಡಬೇಕು. ಮುಂಬರುವ ದಿನಗಳಲ್ಲಿ ದಿ. ಕೆ.ವಿ. ತಿರುಪಾಲಪ್ಪ ಸ್ಮಾರಕ ಕನ್ನಡ ಭವನ ನಿರ್ಮಾಣ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿ.ವಿ ಯ ಅಕಾಡೆಮಿಕ್ ಕೌನ್ಸಿಲ್‌ನ ಮಾಜಿ ಸದಸ್ಯ ವೆಂಕಟೇಶ ಹೆಗಡೆ, ವಿವಿಯ ಸಿಂಡಿಕೇಟ್ ಮಾಜಿ ಸದಸ್ಯ ಜಯಪ್ರಕಾಶ್ ಗೌಡ, ಕಲಾ ನಿಕಾಯದ ಡೀನರಾದ ಪ್ರೊ.ಎನ್ ಶಾಂತಾನಾಯ್ಕ್, ಇಂಗ್ಲೀಷ್ ವಿಭಾಗದ ಮುಖ್ಯಸ್ಥ ಪ್ರೊ. ರಾಬರ್ಟ ಜೋಷ್, ಕನ್ನಡ ವಿಭಾಗದ ಮುಖ್ಯಸ್ಥ ಡಾ.ಜಿ.ಕೆ.ಸಂತೋಷ್ ವೇದಿಕೆ ಮೇಲೆಣಟಜಜಜುಟಜಜ ಉಪಸ್ಥಿತರಿದ್ದರು.

ವಿವಿಯ ಕನ್ನಡ ಅಧ್ಯಯನ ವಿಭಾಗದ ಉಪನ್ಯಾಸಕ ಡಾ.ಕೆ.ಎಸ್ ಶಿವಪ್ರಕಾಶ ನಿರೂಪಿಸಿದರು. ಡಾ.ರಂಗನಾಥ ಎನ್ ವಂದಿಸಿದರು. ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಕಿವುಡು ಮಕ್ಕಳ ವಸತಿಯುತ ಶಾಲಾ ದಾಖಲಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 29–ನಗರದ ಕಂಟೋನ್‌ಮೆಂಟ್‌ನ ಶಾಂತಿಧಾಮ ಆವರಣದ ಸರ್ಕಾರಿ ಕಿವುಡು ಮತ್ತು ಮೂಕ ಮಕ್ಕಳ ಪಾಠಶಾಲೆಯಲ್ಲಿ 2025–26ನೇ ಸಾಲಿಗೆ 1ನೇ ತರಗತಿಯಿಂದ 08 ನೇ ತರಗತಿಯವರೆಗೆ ವಸತಿಯುತ ಶಾಲಾ ದಾಖಲಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಅಧೀಕ್ಷಕ ಹೆಚ್.ಗೋವಿಂದಪ್ಪ ಅವರು ತಿಳಿಸಿದ್ದಾರೆ.

ಈ ಶಾಲೆಯಲ್ಲಿ ಕಿವುಡು ಮತ್ತು ಮೂಕ ಬಾಲಕರಿಗೆ ಉಚಿತವಾಗಿ ವಿಶೇಷಶಿಕ್ಷಣವನ್ನು ನೀಡಲಾಗುತ್ತಿದ್ದು, 6 ವರ್ಷದಿಂದ 14 ವರ್ಷದ ಶ್ರವಣದೋಷ ಮಕ್ಕಳು ದಾಖಲಾತಿ ಪಡೆಯಬಹುದು.

ಶಾಲೆಯಲ್ಲಿ ಮಕ್ಕಳಿಗೆ ಉಚಿತವಾಗಿ ಊಟ ಮತ್ತು ವಸತಿ, ಪಠ್ಯ ಪುಸ್ತಕ, ಸಮವಸ್ತ್ರ ಸೌಲಭ್ಯಗಳೊಂದಿಗೆ ಮಾತಿನ ತರಬೇತಿ, ಶ್ರವಣ ತರಬೇತಿ, ಭಾಷೆ ಕಲಿಕೆ, ಕಂಪ್ಯೂಟರ್ ತರಗತಿ, ಸ್ಮಾರ್ಟ್ ಕ್ಲಾಸ್, ಸೈನ್ಸ್ ಲ್ಯಾಬ್, ವಿಶೇಷ ಶಿಕ್ಷಕರಿಂದ ವಿಷಯ ಭೋದನೆ, ಮಾರ್ಚ್‌ಪಸ್ಟ್, ಸಾಮೂಹಿಕ ನೃತ್ಯ, ಕ್ರೀಡೆ ಹಾಗೂ ಸಹಪಠ್ಯ ಚಟುವಟಿಕೆಗಳನ್ನು ಕಲಿಸಿಕೊಡಲಾಗುತ್ತದೆ.

ಶಾಲೆಗೆ ಶ್ರವಣದೋಷ ಮಕ್ಕಳನ್ನು ದಾಖಲಿಸಲು ಇಚ್ಛಿಸುವ ತಂದೆ, ತಾಯಿ ಮತ್ತು ಪೋಷಕರು ಅಗತ್ಯ ದಾಖಲೆ ಸಲ್ಲಿಸಿ ಪ್ರವೇಶಾತಿ ಪಡೆಯಬಹುದು.

ಬೇಕಾದ ದಾಖಲೆಗಳು:

ಶಾಲೆಪ್ರವೇಶ ಅರ್ಜಿ (ಉಚಿತವಾಗಿ ನೀಡಲಾಗುವುದು), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಜನ್ಮ ದಿನಾಂಕ ಪ್ರಮಾಣ ಪತ್ರ, ತಂದೆ ಮತ್ತು ತಾಯಿಯ ಆಧಾರ್ ಕಾರ್ಡ್ ಪ್ರತಿ, ವಿದ್ಯಾರ್ಥಿಯ ಆಧಾರ್ ಕಾರ್ಡ್, ಅಂಗವಿಕಲ ಪ್ರಮಾಣ ಪತ್ರ, ಯುಡಿಐಡಿ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಪುಸ್ತಕ ಸೇರಿದಂತೆ ಇತರೆ ದೃಢೀಕೃತ ದಾಖಲಾತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕಿವುಡು ಮಕ್ಕಳ ಪಾಠಶಾಲೆಯ ಅಧೀಕ್ಷಕರ ಕಚೇರಿ ಅಥವಾ ದೂ.08392–297138 ಹಾಗೂ ಅಧೀಕ್ಷಕ ಗೋವಿಂದಪ್ಪ (ಮೊ.9008485380), ಶಿಕ್ಷಕ ರವಿ ಸಿ.ಕೆ(ಮೊ.9902106670), ಬಳ್ಳಾರಿ ಎಂಆರ್‌ಡಬ್ಲ್ಯೂಜೆ ರಾಣಿ(ಮೊ.8880875620), ಸಂಡೂರು ಎಂಆರ್‌ಡಬ್ಲ್ಯೂಜೆ ಕರಿಬಸಜ್ಜ(ಮೊ.9632052270) ಮತ್ತು ಸಿರುಗುಪ್ಪ ಎಂಆರ್‌ಡಬ್ಲ್ಯೂಜೆ ಸಾಬೇಶ(8880875620) ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೋಟಗಾರಿಕೆ ಇಲಾಖೆ: ಹನಿ ನೀರಾವರಿ ಘಟಕಕ್ಕೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 29–ತೋಟಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿಗೆ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟಗಾರಿಕೆ ಬೆಳೆ ಬೆಳೆಯುವ ರೈತರಿಗೆ ಹನಿ ನೀರಾವರಿ ಘಟಕಕ್ಕೆ ಸಹಾಯಧನ ನೀಡಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಎಲ್ಲಾ ವರ್ಗದ ರೈತರಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ 5 ಹೆಕ್ಟೇರ್ ಪ್ರದೇಶಕ್ಕೆ ಸಹಾಯಧನ ವಿತರಿಸಲು ಅವಕಾಶವಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ರೈತರಿಗೆ ಹಾಗೂ ಇತರೆ ವರ್ಗದ ರೈತರಿಗೆ 2 ಹೆಕ್ಟೇರ್ ಪ್ರದೇಶಕ್ಕೆ ಶೇ.90 ರ ಸಹಾಯಧನ ಕಲ್ಪಿಸಲಾಗುವುದು. 2 ಹೆಕ್ಟೇರ್ ನಿಂದ 5 ಹೆಕ್ಟೇರ್ ವರೆಗೂ ಶೇ.45 ರ ಸಹಾಯಧನ ಕಲ್ಪಿಸಲಾಗುವುದು. ಖಾಯಂ ನೀರಾವರಿ ಸೌಲಭ್ಯವಿರುವ ಹಾಗೂ ತೋಟಗಾರಿಕೆ ಬೆಳೆ ಹೊಂದಿರುವ ರೈತರು ಅಗತ್ಯ ದಾಖಲಾತಿಗಳೊಂದಿಗೆ ತೋಟಗಾರಿಕೆ ಇಲಾಖೆ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ರಕ್ಷಣೆಗಾಗಿ ಎಲ್ಲರೂ ಕೈ ಜೋಡಿಸಿ : ನ್ಯಾ.ದರಗದ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭಾರತವು ಮಕ್ಕಳ ರಕ್ಷಣೆಗಾಗಿ ವ್ಯಾಪಕ ಶ್ರೇಣಿಯ ಕಾನೂನುಗಳನ್ನು ಹೊಂದಿದೆ ಮತ್ತು ಮಕ್ಕಳ ರಕ್ಷಣೆಯನ್ನು ಸಾಮಾಜಿಕ ಅಭಿವೃದ್ಧಿಯ ಪ್ರಮುಖ ಅಂಶವಾಗಿ ಹೆಚ್ಚಾಗಿ ಸ್ವೀಕರಿಸಲಾಗುತ್ತಿದೆ ಎಂದು ಗೌ,ನ್ಯಾಯಾದೀಶರಾದ ಮಹಾಂತೇಶ ದರಗದ ಹೇಳಿದರು.

ನಗರದ ಗದಗ ರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ವಿದ್ಯಾಲಯದಲ್ಲಿ ಜರುಗಿದ ಕಾನೂನು ನೆರವು ಮತ್ತು ಜಾಗೃತಿಯ ಒಂದು ದಿನದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾನವ ಸಂಪನ್ಮೂಲ ಸಾಮರ್ಥ್ಯದ ಕೊರತೆ ಮತ್ತು ಗುಣಮಟ್ಟದ ತಡೆಗಟ್ಟುವಿಕೆ ಮತ್ತು ಪುನರ್ವಸತಿ ಸೇವೆಗಳಿಂದಾಗಿ ಕಾನೂನುಗಳನ್ನು ಅನುಷ್ಠಾನಗೊಳಿಸುವುದು ಸವಾಲಾಗಿದೆ. ಪರಿಣಾಮವಾಗಿ, ಲಕ್ಷಾಂತರ ಮಕ್ಕಳು ಹಿಂಸೆ, ನಿಂದನೆ ಮತ್ತು ಶೋಷಣೆಗೆ ಗುರಿಯಾಗುತ್ತಿದ್ದಾರೆ ಎಂದರು.

ಯುನಿಸೆಫ್ ಜಿಲ್ಲಾ ಸಂಯೋಜಕ ಹರೀಶ್ ಜೋಗಿ ಮಾತನಾಡಿ ಹಿಂಸೆ ಎಲ್ಲಾ ಸಂದರ್ಭಗಳಲ್ಲಿಯೂ ನಡೆಯುತ್ತದೆ: ಮನೆ, ಶಾಲೆ, ಮಕ್ಕಳ ಆರೈಕೆ ಸಂಸ್ಥೆಗಳು, ಕೆಲಸ ಮತ್ತು ಸಮುದಾಯದಲ್ಲಿ. ಹೆಚ್ಚಾಗಿ ಮಗುವಿಗೆ ತಿಳಿದಿರುವ ಯಾರಾದರೂ ಹಿಂಸಾಚಾರವನ್ನು ಮಾಡುತ್ತಾರೆ.

ಭಾರತವು ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯನ್ನು ಪರಿಹರಿಸುವ ಸಾಕಷ್ಟು ಸಮಗ್ರ ನೀತಿ ಮತ್ತು ಕಾನೂನು ಚೌಕಟ್ಟನ್ನು ಹೊಂದಿದೆ, ಎಲ್ಲಾ ಮಕ್ಕಳು ಗುಣಮಟ್ಟದ ರಕ್ಷಣಾ ಸೇವೆಗಳಿಗೆ ಸಮಾನ ಪ್ರವೇಶವನ್ನು ಹೊಂದಿರುವುದನ್ನು ಖಚಿತಪಡಿಸಿಕೊಳ್ಳಲು ಅವಕಾಶಗಳನ್ನು ಒದಗಿಸುತ್ತದೆ. ಮಕ್ಕಳಿಗಾಗಿ ಪ್ರಮುಖ ಮಕ್ಕಳ ರಕ್ಷಣಾ ಶಾಸನವನ್ನು ನಾಲ್ಕು ಪ್ರಮುಖ ಕಾನೂನುಗಳಲ್ಲಿ ಪ್ರತಿಪಾದಿಸಲಾಗಿದೆ: ಬಾಲ ನ್ಯಾಯ (ಆರೈಕೆ ಮತ್ತು ರಕ್ಷಣೆ) ಕಾಯ್ದೆ (2000, 2015 ರಲ್ಲಿ ತಿದ್ದುಪಡಿ ಮಾಡಲಾಗಿದೆ); ಬಾಲ್ಯ ವಿವಾಹ ನಿಷೇಧ ಕಾಯ್ದೆ (2006); ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆ (2012), ಮತ್ತು ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ (1986, 2016 ರಲ್ಲಿ ತಿದ್ದುಪಡಿ ಮಾಡಲಾಗಿದೆ) ಎಂದು.

ಹಿರಿಯ ತರಬೇತಿದಾರ ರಾಘವೇಂದ್ರ ಭಟ್ ಮಾತನಾಡಿ ಕಳೆದ ಐದು ವರ್ಷಗಳಲ್ಲಿ, ತ್ವರಿತ ನ್ಯಾಯಾಲಯಗಳನ್ನು ಸ್ಥಾಪಿಸಲು ಮತ್ತು ಮಕ್ಕಳು ಮತ್ತು ಮಹಿಳೆಯರ ವಿರುದ್ಧದ ಸೈಬರ್ ಅಪರಾಧವನ್ನು ನಿಭಾಯಿಸಲು ಗಮನಾರ್ಹ ಪ್ರಯತ್ನಗಳನ್ನು ಮಾಡಲಾಗಿದೆ. 2019 ರಲ್ಲಿ, ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಮಸೂದೆಯನ್ನು ತಿದ್ದುಪಡಿ ಮಾಡಲಾಯಿತು, ಇದು ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳಿಗೆ ಕಠಿಣ ಶಿಕ್ಷೆಯನ್ನು ನಿಗದಿಪಡಿಸಿತು ಎಂದರು.

ಈ ಸಂದರ್ಭದಲ್ಲಿ ಹಿರಿಯ ವಕೀಲರು ಹಾಗೂ ಶಿವಪ್ರೀಯಾ ಕಾಲೇಜ್ ಕೌನ್ಸಿಲ್ ಪೀರಾ ಹುಸೇನ್ ಪ್ರಾಂಶುಪಾಲ ಡಾ.ಬಸವರಾಜ ಹನಸಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮೀ ಪೂಜಾರ, ನರೇಂದ್ರ,ರಾಜಶೇಖರ ಗಾಂಜಿ ಸೇರಿದಂತೆ ಉಪನ್ಯಾಸಕರು, ಕಾನೂನು ವಿದ್ಯಾರ್ಥಿಗಳು ಹಾಜರಿದ್ದರು.

## ಬಳ್ಳಾರಿ: ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 29–ಬಳ್ಳಾರಿ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2025–26 ನೇ ಸಾಲಿಗೆ (ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮೋ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಜನಾಂಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ವೆಬ್‌ಸೈಟ್ http://bcwd.karnataka.gov.in/ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್ ಮೆಂಟ್ ನ ಎಲ್.ಎಲ್.ಸಿ. ಕಾಲೋನಿಯ ಡಿಸ್ನಿ ಫಂಕ್ಷನ್‌ಹಾಲ್ ಎದುರುಗಡೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಾರ್ಯಾಲಯ ಅಥವಾ ದೂ.08392–294492 ಗೆ ಸಂಪರ್ಕಿಸಬಹುದು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಗೆ ಇಲಾಖೆ: ತಾಳೆ ಬೆಳೆ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 29–ತೋಟಗಾರಿಕೆ ಇಲಾಖೆ ವತಿಯಿಂದ ಕೇಂದ್ರ ಪುರಸ್ಕೃತ ಖಾದ್ಯತೈಲ ಅಭಿಯಾನ–ತಾಳೆ ಬೆಳೆ ಯೋಜನೆಯಡಿ ತಾಳೆ ಬೆಳೆ ಬೆಳೆಯಲು ಆಸಕ್ತಿಯುಳ್ಳ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ನೀರಿನ ಸೌಲಭ್ಯ ಹೊಂದಿರುವ ಫಲಾನುಭವಿಗಳಿಗೆ ಹೊಸ ಪ್ರದೇಶ ವಿಸ್ತರಣೆ ಪ್ರತಿ ಹೆಕ್ಟರ್ ಗೆ ರೂ.20 ಸಾವಿರದಂತೆ ಸಹಾಯಧನ ನೀಡಲಾಗುತ್ತದೆ. ಈ ಹಿಂದೆ ಅಭಿವೃದ್ಧಿ ಪಡಿಸಲಾದ ತಾಳೆ ಬೆಳೆ ತೋಟಗಳ ಮೊದಲನೇ, ಎರಡನೇ, ಮೂರನೇ ಮತ್ತು ನಾಲ್ಕನೇ ವರ್ಷದ ನಿರ್ವಹಣೆಗೆ ಪ್ರತಿ ಹೆಕ್ಟರ್ ರೂ.5250/–ಮೊತ್ತದ ರಾಸಾಯನಿಕ ಮತ್ತು ಸಾವಯವ ಗೊಬ್ಬರ ನೀಡಲಾಗುತ್ತದೆ.

ಕನಿಷ್ಠ 1 ಹೆಕ್ಟರ್ ತಾಳೆ ಬೆಳೆ ಪ್ರದೇಶವನ್ನು ಕೈಗೊಂಡಿರುವ ಫಲಾನುಭವಿಗಳಿಗೆ 15 ಹೆಚ್.ಪಿ ಸಾಮಾರ್ಥ್ಯದ ಡೀಸೆಲ್, ವಿದ್ಯುತ್ ಚಾಲಿತ ಪಂಪ್‌ಸೆಟ್ ಕೊಳ್ಳಲು ಸಾಮಾನ್ಯ ರೈತರಿಗೆ ಒಟ್ಟು ಖರ್ಚಿನ ಶೇ.50 ರಷ್ಟು ಪ್ರತಿ ಘಟಕಕ್ಕೆ ಗರಿಷ್ಠ ರೂ.22,500 ರಂತೆ ಸಹಾಯಧನ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಅತೀ ಸಣ್ಣ ಮತ್ತು ಸಣ್ಣ ರೈತ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಠ ರೂ.27 ಸಾವಿರ ಸಹಾಯಧನ ನೀಡಲಾಗುವುದು.

ತಾಳೆ ಬೆಳೆಯುವ ರೈತರು ಮೊದಲ ನಾಲ್ಕು ವರ್ಷದವರೆಗೆ ತಾಳೆ ಬೆಳೆಯಲ್ಲಿ ತೋಟಗಾರಿಕೆ ಬೆಳೆಗಾಳ ಅಂತರ ಬೇಸಾಯ ಕೈಗೊಂಡಲ್ಲಿ ಪ್ರತಿ ಹೆಕ್ಟರ್ ಗೆ ರೂ.5 ಸಾವಿರ ಸಹಾಯಧನ ನೀಡಲಾಗುವುದು.

ಕನಿಷ್ಠ ಒಂದು ಎಕರೆ ಪ್ರದೇಶದಲ್ಲಿ ಇಳುವರಿ ನೀಡುತ್ತಿರುವ ತಾಳೆ ತೋಟದಲ್ಲಿ ಕೊಳವೆ ಬಾವಿ ಅಳವಡಿಸಿದ ರೈತರಿಗೆ ರೂ.50 ಸಾವಿರ ಮೊತ್ತಕ್ಕೆ ಸಹಾಯಧನ ನೀಡಲು ಅವಕಾಶವಿದೆ. ತಾಳೆ ಬೆಳೆ ಕೃಷಿಗೆ ಅಗತ್ಯವಿರುವ ಯಂತ್ರೋಪಕರಣಗಳ ಖರೀದಿಗೆ ಶೇಕಡವಾರು ಸಹಾಯಧನ ವಿತರಿಸಲು ಅವಕಾಶವಿದೆ.

ಎರೆಹುಳು ಘಟಕಕ್ಕೆ ಶೇ.50 ರಂತೆ 15 ಸಾವಿರ ರೂ. ಮತ್ತು ನೀರು ಕೊಯ್ಲು ಘಟಕಕ್ಕೆ ಶೇ.50 ರಂತೆ 75 ಸಾವಿರ ರೂ.ಗಳ ಸಹಾಯಧನ ವಿತರಿಸಲು ಅವಕಾಶ ಇದೆ.

ಆಸಕ್ತ ರೈತರು ಅಗತ್ಯ ದಾಖಲಾತಿಗಳೊಂದಿಗೆ ತೋಟಗಾರಿಕೆ ಇಲಾಖೆ ಕಚೇರಿಗೆ ಭೇಟಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಕಾರ್ಮಿಕರ ದಿನಾಚರಣೆ ಉದ್ಘಾಟನೆ.

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಆಲ್ ಇಂಡಿಂ–ಯಾ ಟ್ರೇಡ್ ಯೂನಿಯನ್ ಕಾಂಗ್ರೆಸ್ (AITUC) ಜಿಲ್ಲಾ ಸಮಿತಿಯಿಂದ ನಗರದ ಸಾಹಿತ್ಯ ಭವನದಲ್ಲಿ ಗುರುವಾರ 139 ನೇ ವಿಶ್ವ ಕಾರ್ಮಿಕರ ದಿನಾಚರಣೆ ಆಚರಿಸಲಾಯಿತು.

ಉದ್ಘಾಟನೆಯನ್ನು ಬೆಂಗಳೂರಿನ ಸಮಕಾಲಿನ ಸಾಮಾಜಿಕ ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ ಕಾಮ್ರೆಡ್ ಡಾ. ಬಿ.ಆರ್ ಮಂಜುನಾಥ್ ನೆರವೇರಿಸಿ ಮಾತನಾಡಿ ಕಟ್ಟಡ ಕಟ್ಟುವ, ಕಲ್ಲು ಒಡೆಯುವ ಕ್ವಾರೆ ಕಾರ್ಮಿಕರಿಗೆ ಸರಕಾರದಿಂದ ದೊರೆಯುವ ಸೌಲಭ್ಯಗಳು ದೊರೆಯಬೇಕು, ಕಾರ್ಮಿಕರು ಸರಕಾರದ ಯೋಜನೆಗಳನ್ನು ಪಡೆಯಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಟ್ಟಡ ಕಾರ್ಮಿಕರ ಫೆಡರೇಶನ್ ಗೌರವ ಅಧ್ಯಕ್ಷ ಡಾ. ಕೆ.ಎಸ್. ಜನಾರ್ಧನ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕಟ್ಟಡ ಕಟ್ಟುವ, ಕಲ್ಲು ಒಡೆಯುವ ಕ್ವಾರೆ ಕಾರ್ಮಿಕರ ಫೆಡರೇಶನ್ ಜಿಲ್ಲಾಧ್ಯಕ್ಷ ತುಕರಾಮ ಪಾತ್ರೋಟಿ ಭಾರತ ಕಮ್ಯುನಿಸ್ಟ್ ಪಕ್ಷದ ಕೊಪ್ಪಳ ಜಿಲ್ಲಾ ಮಂಡಳಿ ಕಾರ್ಯದರ್ಶಿ ಹುಲುಗಪ್ಪ ಅಕ್ಕಿ ರೊಟ್ಟಿ, ಕಟ್ಟಡ ಕಾರ್ಮಿಕರ ಫೆಡರೇಶನ್ ಕೊಪ್ಪಳ ತಾಲೂಕು ಅಧ್ಯಕ್ಷ ನೂರಸಾಬ್ ಹೊಸಮನಿ, ಕಟ್ಟಡ ಕಾರ್ಮಿಕರ ಫೆಡರೇಶನ್ ಕೊಪ್ಪಳ ತಾಲೂಕು ಕಾರ್ಯದರ್ಶಿ ರಾಜಸಾಬ, ತಹಸೀಲ್ದಾರ್, ಕಟ್ಟಡ ಕಾರ್ಮಿಕರ ಫೆಡರೇಶನ್ ಕೊಪ್ಪಳ ತಾಲೂಕು ಸಹ ಕಾರ್ಯದರ್ಶಿ ಮೌಲಾಹುಸೇನ್ ಹಣಿಗಿ, ಕಟ್ಟಡ ಕಾರ್ಮಿಕರ ಫೆಡರೇಶನ್ ಕೊಪ್ಪಳ ತಾಲೂಕು ಉಪಾಧ್ಯಕ್ಷ ಜಾಫರ್ ಕುರಿ, ರಾಜ್ಯ ಕಟ್ಟಡ ಕಟ್ಟುವ, ಕಲ್ಲು ಒಡೆಯುವ ಕ್ವಾರೆ ಕಾರ್ಮಿಕರ ಫೆಡರೇಶನ್ ಜಿಲ್ಲಾ ಹಾಗೂ ರಾಜ್ಯ ಕಾರ್ಯದರ್ಶಿ ಕಾಮ್ರೇಡ್ ಎ.ಎಲ್. ತಿಮ್ಮಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಮ್ರೆಡ್ ಮುಮ್ತಾಜ್ ಬೇಗಂ, ಎಐವೈಎಫ್ ಜಿಲ್ಲಾ ಸಂಚಾಲಕ ಕಾಮ್ರೇಡ್ ಪ್ರಸಾದ್ ಕಾಳೆ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಕೊಪ್ಪಳ ತಾಲೂಕ, ಕಾಮ್ರೆಡ್, ಜಾಫರ್ ಕುರಿ ಉಪಾಧ್ಯಕ್ಷರು ಕಟ್ಟಡ ಕಾರ್ಮಿಕರ ಸಂಘ ಜಿಲ್ಲಾ ಕೊಪ್ಪಳ, ಕಾಮ್ರೆಡ್, ರಾಜಪ್ಪ ಚೌಹಾಣ್ ತಾಲೂಕು ಉಪಾಧ್ಯಕ್ಷರು ಕೊಪ್ಪಳ ತಾಲೂಕ, ಕಾಮ್ರೆಡ್ ಅಡಿವಪ್ಪ ಚಲವಾದಿ, ಜಿಲ್ಲಾ ಕಾರ್ಯದರ್ಶಿ ಕಾಮ್ರೇಡ್ ಚೆನ್ನಮ್ಮ ಕುಕುನೂರ ಅಂಗನವಾಡಿ ಕಾರ್ಯಕರ್ತರ ಸಂಘ ಕುಕನೂರ್ ತಾಲೂಕ ಅಧ್ಯಕ್ಷರು. ಕಾಮ್ರೇಡ್ ಪ್ರಕಾಶ್ ದೇವರಮನೆ ಎಲೆಕ್ಟ್ರಿಕಲ್ ಸಂಘದ ಅಧ್ಯಕ್ಷರು ಭಾಗ್ಯನಗರ,

ಕಾಮ್ರೆಡ್ ರೇಣುಕಮ್ಮ ಹೊಸ ಕನಕಪುರ ತಾಲೂಕ ಸದಸ್ಯರು. ಕಾಮ್ರೆಡ್ ಶೇಖಮ್ಮ ಅಧ್ಯಕ್ಷರು ಮಹಿಳಾ ಸಂಘಟನೆ ಗಂಗಾವತಿ ತಾಲೂಕ, ಲಕ್ಷ್ಮಣ್ ನಾಯಕ ಕೂಲಿಕಾರ ಸಂಘಟನೆ ತಾಲೂಕ ಅಧ್ಯಕ್ಷರು ಕಾರಟಗಿ, ಕಾಮ್ರೆಡ್ ಮನು ಎ ಐ ವೈ ವೈ ಎಫ್ ತಾಲೂಕ ಸಂಚಾಲಕರು ಕೊಪ್ಪಳ, ಕಾಮ್ರೆಡ್ ಆದಿತ್ಯ ತುಕಾರಾಂ ಪ್ರಾತ್ರೋಟಿ

ಎ ಐ ಎಸ್ ಎಫ್, ಕೊಪ್ಪಳ ತಾಲೂಕ ಸಂಚಾಲಕರು ಕಾಮ್ರೆಡ್ ನವೀನ್ ದೇವರ ಮನೆ ಪ್ರಕಾಶ್, ಎಐಎಸ್‌ಎಫ್ ಭಾಗ್ಯನಗರ, ನವೀನ್ ಎಐಎಸ್‌ಎಫ್ ಡಾಲರ್ಸ್ ಕಾಲೋನಿ ಕೊಪ್ಪಳ ಉಪಸ್ಥಿತರಿದ್ದರು.

## ಹುನಕುಂಟಿ ಗ್ರಾಮಸ್ಥರು ಬಸ್ ಡಿಪೋದ ಮುಂದೆ ಶವವಿಟ್ಟು ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು:ತಾಲೂಕಿನ ಹುನಕುಂಟಿ ಗ್ರಾಮದ ಯುವಕ ಹಾಗೂ ಚಾಲಕ,ನಿರ್ವಾಹಕರ ನಡುವೆ ವಾಗ್ವಾದ ನಡೆದು ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದು ಗ್ರಾಮಸ್ಥರು ಬಸ್ ಡಿಪೋದ ಮುಂದೆ ಶವವಿಟ್ಟು ಪ್ರತಿಭಟನೆ ನಡೆಸಿದ ಘಟನೆ ಜರುಗಿದೆ

ಲಿಂಗಸುಗೂರುನಿಂದ ಸಜ್ಜಲಗುಡ್ಡ–ಬೆಂಗಳೂರು ಬಸ್ ಹುನಕುಂಟಿ ಮಾರ್ಗವಾಗಿ ಸಾಗುವಾಗ ಯುವಕ ಮುಕ್ಕಣ್ಣ ಗ್ರಾಮದ ರಸ್ತೆ ಪಕ್ಕದಲ್ಲಿ ಕುಳಿತಿರುವಾಗ ಬಸ್ ಚಲಿಸಿ ರಸ್ತೆಯ ನೀರು ಯುವಕನ ಮೇಲೆ ಬಿದ್ದಿರುವುದರಿಂದ ಸಿಟ್ಟಿಗೆದ್ದ ಯುವಕ ಚಾಲಕನಿಗೆ ಅವಾಚ್ಯವಾಗಿ ಬೈದಿದ್ದಾನೆಂದು ಹೇಳಲಾಗುತಿದ್ದು ಬಸ್ಸಿನ ಚಾಲಕ ಹಾಗೂ ನಿರ್ವಾಹಕ ಸೇರಿ ಯುವಕನೊಂದಿಗೆ ಜಗಳವಾಗಿದ್ದು ಕೊನೆಯಲ್ಲಿ ವಿಷಯ ಪೊಲೀಸ್ ಕಟ್ಟೆ ಹತ್ತಿದೆ ವಿಷಯವನ್ನು ತಿಳಿಗೊಳಿಸಲು ಪ್ರಯತ್ನಿಸಿದರು ಫಲಕಾರಿಯಾಗದೆ ಯುವಕ ಕೊನೆಗೆ ಹೊಲಕ್ಕೆ ತೆರಳಿ ತಾನೆ ಲೈವ್ ಮಾಡುತ್ತಾ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಹೇಳಲಾಗುತಿದೆ

ವಿಷಯ ತಿಳಿದ ಗ್ರಾಮಸ್ಥರ ಗಮನಕ್ಕೆ ಬರುತ್ತಲೆ ಯುವಕನ ಶವವನ್ನು ತೆಗೆದುಕೊಂಡುಬಂದು ಪಟ್ಟಣದ ಬಸ್ ಡಿಪೋ ಎದುರು ಶವವಿಟ್ಟು ಪ್ರತಿಭಟನೆ ನಡೆಸಿದ ಘಟನೆ ಜರುಗಿದೆ

# ವಿವಿಧ ಕಲೆ, ಹಾಗೂ ಕಲಾವಿದರ ತವರೂರು ಕೊಪ್ಪಳ,

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಕೇಂದ್ರ ಎಂದೊಡನೆ ನೆನಪಿಗೆ ಬರುವುದು ತಾಲೂಕಿನ ಭಾಗ್ಯನಗರ, ಕಿನ್ನಾಳ ಗ್ರಾಮಗಳು ಕೈಗಾರಿಕೋದ್ಯಮದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿವೆ.

ಭಾಗ್ಯನಗರ ಎಂದೊಡನೆ ಕೂದಲಿನ ವ್ಯಾಪಾರ, ಕಿನ್ನಾಳ ಎಂದೊಡನೆ ಬೊಂಬೆ ತಯಾರಿಕೆಯಲ್ಲಿ ಇವೆರಡೂ ಗ್ರಾಮಗಳು ರಾಷ್ಟ್ರೀಯ, ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದ್ದು ಸ್ತುತ್ಯಾರ್ಹವಾಗಿದೆ.

ಇನ್ನೂ ಕೊಪ್ಪಳ ಸೇರಿದಂತೆ ಜಿಲ್ಲೆಯಲ್ಲಿ ಹಲವಾರು ಗುಡಿ ಕೈಗಾರಿಕೆಗಳಿದ್ದು ಯಲಬುರ್ಗಾ ತಾಲೂಕಿನ ಮುರುಡಿಯಲ್ಲಿ ಹಾಗೂ ಕುಕನೂರು ತಾಲೂಕಿನ ಕಕ್ಕಿಹಳ್ಳಿಯಲ್ಲಿ ಮರಗೆತ್ತನೆ ಕೆಲಸ ಮಾಡುವ ಕರ ಕುಶಲ ಕಲಾವಿದರು, ತಳಬಾಳಿನಲ್ಲಿ ವಿಭೂತಿ ತಯಾರಕರು ಸೇರಿದಂತೆ, ಹಲವಾರು ರಂಗಭೂಮಿ ಕಲಾವಿದರು, ಕವಿಗಳು, ಲೇಖಕರು, ಸಾಹಿತಿಗಳನ್ನೊಳಗೊಂಡು ಹೆಸರು ಮಾಡಿದ ವ್ಯಕ್ತಿಗಳು ಎಲೆಮರೆ ಕಾಯಿಯಂತೆ ಇದ್ದು ಅವರನ್ನು ಗುರುತಿಸುವ ಕೆಲಸವಾಗಬೇಕಿದೆ.

ಇಂತಹ ಕಲಾವಿದರ ಪಟ್ಟಿಯಲ್ಲಿ ಕೊಪ್ಪಳದ ಉಮೇಶ ಫೋಟೋ ಸ್ಟೂಡಿಯೋದ ಮಾಲಕ ಉಮೇಶ ಅವರು ವಿವಿಧ ಭಂಗಿಯ ಫೋಟೋಗಳನ್ನು ತಯಾರಿಸಿ ಗ್ರಾಹಕರಿಗೆ ನೀಡುವ ಜೊತೆಗೆ ನೆನಪಿನ ಕಾಣಿಕೆಗಳನ್ನು ತಯಾರಿಸುವಲ್ಲಿ ಸಿದ್ಧ ಹಸ್ತರು.

ಸುಮಾರು ಆರೇಳು ವರ್ಷಗಳಿಂದ ನೆನಪಿನ ಕಾಣಿಕೆ ತಯಾರಿಕೆ ಮಾಡುವಲ್ಲಿ ನಿಪುಣರಾಗಿದ್ದು ವಿವಿಧ ರೀತಿಯಲ್ಲಿ ನೆನಪಿನ ಕಾಣಿಕೆಗಳನ್ನು ತಯಾರಿಸಿಕೊಡುತ್ತಾರೆ.

ಇವರು ಇಲ್ಲಿಯವರೆಗೆ ಹಲವಾರು ಮಹನೀಯರ ಜಯಂತೋತ್ಸವ, ಹಾಗೂ ಕ್ರೀಡೆಗಳ, ಶಾಲೆಯ ಸ್ನೇಹ ಸಮ್ಮಿಲನ, ಗುರುವಂದನೆ, ಅಮೃತ ಮಹೋತ್ಸವ, ಪ್ರತಿಭಾ ಕಾರಂಜಿ, ಜಾತ್ರಾ ಮಹೋತ್ಸವ, ಸಾಮೂಹಿಕ ವಿವಾಹ, ಸಂಗೀತ ರಸಮಂಜರಿ ಕಾರ್ಯಕ್ರಮ ಸೇರಿದಂತೆ ವಿವಿಧ ರೀತಿಯಲ್ಲಿ ನೆನಪಿನ ಕಾಣಿಕೆಗಳನ್ನು ಸಾವಿರಾರು ಮಾಡಿ ನೀಡಿದ್ದು, ಅತಿ ಯೋಗ್ಯ ದರದಲ್ಲಿ ಮಾಡಿಕೊಡುವ ಮೂಲಕ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ : 9880405150 ಇವರನ್ನು ಸಂಪರ್ಕಿಸಲು ಕೋರಿದ್ದಾರೆ.

### ಕಡೆಚೂರು ಜಿಟಿಟಿಸಿ ಕಾಲೇಜು ಆವರಣದಲ್ಲಿ 5 ಕೋಟಿ ವೆಚ್ಚದಲ್ಲಿ ನೂತನ ವಸತಿ ನಿಲಯಕ್ಕೆ ಅಡಿಗಲ್ಲು ಸಮಾರಂಭ

# ಜನರ ಸಮಾಧಿ ಮೇಲೆ ಕಾರ್ಖಾನೆ ಕಟ್ತೀರಾ...?

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಾನು ಕಡೆಚೂರು ಇಂಡಸ್ಟ್ರಿಯಲ್ ಕೈಗಾರಿಕೆಗಳ ಪರಿಸರ ಮಾಲಿನ್ಯದ ವಿರುದ್ಧ ಮಾತಾಡಿದರೆ ಇಂಡಸ್ಟ್ರಿಯಲ್ ಫ್ರೆಂಡ್ಲಿ ಇರಬೇಕು ಎಂದು ಕೈಗಾರಿಕಾ ಸಚಿವರು ಹೇಳುತ್ತಾರೆ ಆದರೆ ವಿಷಗಾಳಿಯಿಂದ ಜನ ಸತ್ತ ನಂತರ ಅವರ ಸಮಾಧಿ ಮೇಲೆ ಕಾರ್ಖಾನೆ ಕಟ್ಟಿ ಕೈಗಾರಿಕೆಗಳ ಜತೆ ಸ್ನೇಹ ಬೆಳಸುತ್ತಿರಾ...? ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅವರು ಬೃಹತ್ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಅವರ ವಿರುದ್ಧ ಬೇಸರ ಹೊರಹಾಕಿದರು.

ಗುರುಮಠಕಲ್ ತಾಲೂಕಿನ ಕಡೇಚೂರು – ಬಾಡಿಯಾಳ ಜಿಟಿಟಿಸಿ ಕಾಲೇಜು ಆವರಣದಲ್ಲಿ 2024–25ನೇ ಸಾಲಿನ ಕೆಕೆಆರ್ ಡಿಬಿ ಮೈಕ್ರೋ ಅನುದಾನದ ಅಡಿಯಲ್ಲಿ ರೂ.5ಕೋಟಿ ಮೊತ್ತದ ಬಾಲಕರ ವಸತಿ ನಿಲಯಕ್ಕೆ ಗುರುವಾರ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ನಂತರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ 29 ಕಂಪನಿಗಳಿಗೆ ಅಂತಿಮ ನೋಟಿಸ್ ಕೊಟ್ಟಿದ್ದಾರೆ ಆದರೆ ಮುಂದೇನಾಗುತ್ತದೆ ಕಾದು ನೋಡಬೇಕಿದೆ ಎಂದು ತಿಳಿಸಿದರು.

ಈ ಹಿಂದೆ ಕಾಲೇಜಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಇಲ್ಲಿನ ವಿದ್ಯಾರ್ಥಿಗಳು ಹಾಸ್ಟೆಲ್ ಸೌಲಭ್ಯ ಕಲ್ಪಿಸುವಂತೆ ಮನವಿ ಮಾಡಿದ್ದರು. ಅದರ ಹಿನ್ನಲೆಯಲ್ಲಿ ಈ ಕಟ್ಟಡ ನಿರ್ಮಾಣಕ್ಕೆ ಅಡಿಗಲ್ಲು ನೆರವೇರಿಸಲಾಗಿದೆ. ವಿದ್ಯಾರ್ಥಿಗಳಿಗೆ ಒಂದಡೆ ಹಾಸ್ಟೆಲ್ ಖುಷಿ ಕೊಟ್ಟರೂ ಇಲ್ಲಿನ ಮಾಲಿನ್ಯದಿಂದ ತೊಂದರೆ ಅನುಭವಿಸುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದ ಶಾಸಕರು, ನಮ್ಮ ತಂದೆ ಮಾಜಿ ಶಾಸಕ ನಾಗನಗೌಡ ಕಂದಕೂರ ಅವರ ಅವಧಿಯಿಂದಲೂ ಮಾಲಿನ್ಯತೆಯ ವಿರುದ್ಧ ಹೋರಾಟ ಮಾಡುತ್ತಾ ಬಂದಿದ್ದೇವೆ. ಇಲ್ಲಿನ ಕಾರಖಾನೆಗಳ ವಿರುದ್ಧದ ಹೋರಾಟದಲ್ಲಿ ಅನಾರೋಗ್ಯದ ಮಧ್ಯೆಯೂ ನಮ್ಮ ತಂದೆಯವರು ಭಾಗವಹಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು. ನಾನು ಶಾಸಕನದ ನಂತರದಲ್ಲಿ ಭಾಗವಹಿಸಿದ ಐದೂ ಅಧಿವೇಶನಗಳಲ್ಲಿ ಮಾಲಿನ್ಯದ ಬಗ್ಗೆ ಚರ್ಚೆ ಮಾಡಿದ್ದೇನೆ. ಇದಲ್ಲದೆ ಸಂಬಂಧಿಸಿದ ಎಲ್ಲ ಇಲಾಖೆಯ ಸಚಿವರನ್ನು ಅಧಿಕಾರಿಗಳನ್ನು ಭೇಟಿಯಾಗಿ ಮನವಿ ಸಹ ಮಾಡಿದ್ದಾಗಿ ತಿಳಿಸಿದರು. ಕಾರ್ಯಕ್ರಮ ತಡವಾಗಿ ಆಗಮಿಸಿದ ಯಾದಗಿರಿ ತಹಶೀಲ್ದಾರ ಸುರೇಶ ಅಂಕಲಗಿ ವಿರುದ್ಧ ಗರಂ ಆದ ಶಾಸಕರು, ಏನ್ರೀ ನೀವು ಮೊದಲು ಬರಬೇಕು, ತಡವಾಗಿ ಬಂದರೆ ಹೇಗೆ, ಲೇಟ್ ತಹಶೀಲ್ದಾರ ಎಂದು ತರಾಟೆಗೆ ತೆಗೆದುಕೊಂಡಿದ್ದಲ್ಲದೆ ಗ್ರಾಮಿಣ ಭಾಗದ ಜನರಿಗೆ ಕುಡಿಯುವ ನೀರು, ಆರೋಗ್ಯ, ನೈರ್ಮಲ್ಯ ಕಲ್ಪಿಸುವಂತೆ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.

ಇದಕ್ಕೂ ಮುನ್ನ ಲೋಕೋಪಯೋಗಿ ಇಲಾಖೆಯ ಎಇಇ ಪರಶುರಾಮ ಮುಸ್ತೂರಕರ್ ಅವರು ಪ್ರಾಸ್ತಾವಿಕ ಮಾತನಾಡಿ ಉದ್ದೇಶಿತ ಬಾಲಕರ ವಸತಿ ನಿಲಯವು ನೆಲ ಮಹಡಿ, ಮೊದಲ ಹಾಗೂ ಎರಡನೇ ಮಹಡಿಯನ್ನು ಒಳಗೊಂಡಿದ್ದು 58 ಬಾಲಕರಿಗೆ ಅನುಕೂಲವಾಗಲಿದೆ. ಇದರಲ್ಲಿ ಶೌಚಾಲಯ, ವಾರ್ಡನ್ ಕೋಣೆ, ಡೈನಿಂಗ್ ಹಾಲ್, ಅಡುಗೆ ಕೋಣೆ, ಕುಕ್ ಹಾಗೂ ಸಿಕ್ ರೂಮ್ ಗಳನ್ನು ಅಳವಡಿಸಲಾಗಿದೆ ಎಂದು ತಿಳಿಸಿದರು.

ಕಾಲೇಜು ಪ್ರಾಂಶುಪಾಲ ರವಿಚಂದ್ರ ಅವರು ಮಾತನಾಡಿ ಸಿಬ್ಬಂದಿಗಳಿಗೆ ಉಳಿದುಕೊಳ್ಳಲು ವಸತಿ ಗೃಹ, ಮುಖ್ಯರಸ್ತೆಯಲ್ಲಿ ಬಸ್ ತಂಗುದಾಣ ನಿರ್ಮಾಣ ಮಾಡಬೇಕು ಎಂದು ಕಾಲೇಜು ಮನವಿ ಮಾಡಿದರು ಇದಕ್ಕೆ ಶಾಸಕರು ಸಕಾರಾತ್ಮಕವಾಗಿ ಸ್ಪಂದಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಮುಖಂಡರಾದ ಸಿದ್ದನಗೌಡ ಕಡೇಚೂರು, ಗ್ರಾಪಂ ಅಧ್ಯ–ಕ್ಷೆ ಕಮಲಮ್ಮ ಯಂಕಟಪ್ಪ, ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಅಜಯರಡ್ಡಿ ಎಲ್ಹೇರಿ, ಗುರುನಾಥರಡ್ಡಿಗೌಡ ಸೈದಾಪೂರ, ಪ್ರಕಾಶಗೌಡ ಸೈದಾಪೂರ, ನರಸಪ್ಪ ಬದ್ದೇಪಲ್ಲಿ, ತಾಯಪ್ಪ ಬದ್ದೇಪಲ್ಲಿ, ಶಮಿಉಲ್ಲಾ ಸಾಹುಕಾರ ಕಡೆಚೂರು, ಶಂಕರಲಿಂಗ ಕಡೆಚೂರು, ಹೇಮರಡ್ಡಿ ದುಪ್ಪಲ್ಲಿ, ಶರಣಗೌಡ ಸೌರಾಷ್ಟ್ರಹಳ್ಳಿ, ವೀರೇಶ ಸಜ್ಜನ್, ರಾಜು ಮೇತ್ರ, ವಾಬಣ್ಣ ಕಡೆಚೂರು, ಬಸವರಾಜ ಬಟ್ಲಾ, ಸೋಮು ಕಡೆಚೂರು, ವಿಶ್ವನಾಥ ಕಡೆಚೂರು, ಚಂದ್ರಶೇಖರ ದುಪ್ಪಲ್ಲಿ, ಕೆಐಎಡಿಬಿ ಅಧಿಕಾರಿ ಸತೀಶ್, ತಹಶೀಲ್ದಾರ ಸುರೇಶ ಅಂಕಲಗಿ, ಲೋಕೋಪಯೋಗಿ ಇಲಾಖೆಯ ಎಇಇ ಪರಶುರಾಮ ಮುಸ್ತೂರಕರ್, ಟಿಎಚ್ಒ ಹಣಮಂತರೆಡ್ಡಿ, ಕೆಐಎಡಿಬಿ ಅಧಿಕಾರಿ ಲಕ್ಷ್ಮೀಕಾಂತ ಮಿತ್ರಾ, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಬಸವಲಿಂಗಪ್ಪ ಐರೆಡ್ಡಿ, ಜಿಟಿಟಿಸಿ ಕಾಲೇಜು ಪ್ರಾಂಶುಪಾಲ ರವಿಚಂದ್ರ, ತಾಪಂ ಇಒ ಮಹದೇವಪ್ಪ, ಮಾಲಿನ್ಯ ನಿಯಂತ್ರಣ ಅಧಿಕಾರಿ ಆದಮ ಪಾಷ, ತಾಲೂಕು ಕಾರ್ಮಿಕ ಅಧಿಕಾರಿ ಸಂಗೀತಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



**ಶ್ರೀ ಭೀರಲಿಂಗೇಶ್ವರನ ಸನ್ನಿಧಿಗೆ ಭೇಟಿ**

ಕಡೆಚೂರು ಕೈಗಾರಿಕಾ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಶ್ರೀ ಭೀರಲಿಂಗೇಶ್ವರ ದೇವಸ್ಥಾನಕ್ಕೆ ಶಾಸಕ ಶರಣಗೌಡ ಕಂದಕೂರ ಭೇಟಿ ನೀಡಿ, ದೇವರ ದರ್ಶನ ಪಡೆದರು.

ಇದೇ ವೇಳೆ ದೇವಸ್ಥಾನದ ಪೂಜಾರಿಗಳು ಶಾಸಕರನ್ನು ಸನ್ಮಾನಿಸಿ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯ ಒದಗಿಸಲು ಮನವಿ ಮಾಡಿದ್ದರಿಂದ ಇದಕ್ಕೆ ಸ್ಪಂದಿಸಿದ ಶಾಸಕರು ಸೌಲಭ್ಯ ಕಲ್ಪಿಸುವ ಭರವಸೆ ನೀಡಿದರು.

> ಜಿಟಿಟಿಸಿ ಕಾಲೇಜು ಪ್ರಾಂಶುಪಾಲರು ಕೈಗಾರಿಕೆಗಳ ಮಾಲಿನ್ಯತೆಯ ಕುರಿತು ನನಗೆ ಹಾಗೂ ಜಿಲ್ಲಾಡಳಿತಕ್ಕೆ ಮನವಿ ನೀಡಿದ್ದರು. ಈ ಬಗ್ಗೆ ಸದನದಲ್ಲಿ ಚರ್ಚೆ ಮಾಡಲಾಗಿತ್ತು. ಇದೀಗ ಅವರನ್ನು ವರ್ಗಾವಣೆ ಮಾಡಿದ್ದು ಖಂಡನೀಯ. ಈ ಭಾಗದ ಜನರು ಸಾಯಬೇಕಾ? ಅಥವಾ ನನ್ನನ್ನು ರಾಜಕೀಯವಾಗಿ ಮುಗಿಸಬೇಕು ಎಂದು ಸರಕಾರ ಈ ತೀರ್ಮಾನ ಕೈಗೊಂಡಿದೆಯಾ ಎಂಬ ಅನುಮಾನ ಕಾಡುತ್ತಿದೆ ಆದರೆ ಇದ್ಯಾವುದಕ್ಕೂ ಹೆದರಲ್ಲ ಹೋರಾಟ ನಿರಂತರವಾಗಿರುತ್ತದೆ ನನಗೆ ಕ್ಷೇತ್ರದ ಜನರ ಹಿತ ಮುಖ್ಯ.
>
> – ಶರಣಗೌಡ ಕಂದಕೂರ ಶಾಸಕರು, ಗುರುಮಠಕಲ್.

> **ಕೆಮಿಕಲ್ ಫ್ಯಾಕ್ಟರಿ ವಿರುದ್ಧ ಹೋರಾಟ ನಿರಂತರ...!**
>
> ಗಡಿ ಭಾಗದ ಜನರ ಜೀವಕ್ಕೆ ಕಂಟಕವಾಗಿರುವ ಮಾಲಿನ್ಯಕಾರಕ ಕಂಪನಿಗಳ ವಿರುದ್ಧ ನನ್ನ ಹೋರಾಟ ನಿರಂತರವಾಗಿ ಸಾಗಲಿದೆ, ಕಾರಖಾನೆಗಳನ್ನು ನಾಳೆನೇ ಮುಚ್ಚಬಹುದು ಆದರೆ ನಾನು ಒಂದು ಜವಾಬ್ದಾರಿ ಸ್ಥಾನದಲ್ಲಿದ್ದು ಕಾನೂನು ಹೋರಾಟ ಮಾಡುವುದು ಅಗತ್ಯವಿದೆ ಆ ನಿಟ್ಟಿನಲ್ಲಿ ನಾನು ಕೆಲಸ ಮಾಡುತ್ತಿದ್ದೇನೆ. ಇದಕ್ಕಾಗಿ ಎಲ್ಲ ರೀತಿಯ ದಾಖಲೆಗಳನ್ನು ಸಂಗ್ರಹಿಸಿದ್ದು ವಕೀಲರನ್ನು ನೇಮಕ ಮಾಡಿಕೊಂಡು ಕಾನೂನು ಹೋರಾಟ ಮಾಡಲು ಮುಂದಾಗಿದ್ದೇನೆ ಅದೂ ಫಲಿಸದಿದ್ದಲ್ಲಿ ಕ್ಷೇತ್ರದ ಜನರ ಸಹಕಾರದಿಂದ ಸಂಘರ್ಷದ ಹೋರಾಟ ಮಾಡಲಾಗುವುದು. ಜನರು ಎಚ್ಚೆತ್ತುಕೊಳ್ಳುವವರೆಗೆ ಮಾಲಿನ್ಯ ನಿಯಂತ್ರಣ ಕಷ್ಟ. ಮಾಧ್ಯಮಗಳ ಹಾಗೂ ಜನರ ಹೋರಾಟಕ್ಕೆ ನಾನು ನಿರಂತರವಾಗಿ ಬೆಂಬಲ ನೀಡುತ್ತಿದ್ದೇನೆ. ಅದರ ಪರಿಣಾಮ ಒಂದೆರಡು ತಿಂಗಳಿಂದ ಒಂಚೂರು ಮಾಲಿನ್ಯ ಕಡಿಮೆಯಾಗಿದೆ ಎಂದು ಜನ ಹೇಳುತ್ತಿದ್ದಾರೆ
>
> – ಶರಣಗೌಡ ಕಂದಕೂರ ಶಾಸಕರು, ಗುರುಮಠಕಲ್

> **ಕೊಪ್ಪಳ ಶ್ರೀ ಕಣ್ಣೀರಿಗೂ ಸ್ಪಂದಿಸದ ಸರ್ಕಾರ**
>
> ಕೆಮಿಕಲ್ ಕಂಪನಿಗಳು ಹೊರಸೂಸುವ ದುರ್ವಾಸನೆ ಮಿಶ್ರಿತ ಕೆಮಿಕಲ್ ತ್ಯಾಜ್ಯಯುಕ್ತ ಹೊಗೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಕೊಪ್ಪಳ ಗವಿಮಠದ ಪೂಜ್ಯರು ಕಣ್ಣೀರು ಮನವಿ ಮಾಡಿದರೂ ಸ್ಪಂದಿಸದ ಸರ್ಕಾರ ಶರಣಗೌಡನ ಪತ್ರಕ್ಕೆ ಸ್ಪಂದಿಸೀತೇ ಹಾಗಂತ ನಾನು ಯಾವುದೇ ಕಾರಣಕ್ಕೂ ಸುಮ್ಮನಿರಲ್ಲ, ಕೆಮಿಕಲ್ ಕಂಪನಿಗಳ ದುಷ್ಪರಿಣಾಮಗಳ ಬಗ್ಗೆ ಮುಖ್ಯಮಂತ್ರಿ, ಪರಿಸರ ಆಯೋಗ, ವಿಧಾನಸೌಧ ಹೊರಗಡೆ ಮತ್ತು ಒಳಗಡೆ ಸೇರಿದಂತೆ ಹಲವು ಕಡೆ ನಾನು ಹೋರಾಟ ನಡೆಸಿದ್ದೇನೆ, ನಾನು ಕುರ್ಚಿಗೆ ಅಂಟಿಕೊಂಡು ಕುಳಿತುಕೊಳ್ಳುವುದಿಲ್ಲ, ಮುಖ್ಯಮಂತ್ರಿ ಭೇಟಿ ಸಂದರ್ಭದಲ್ಲಿ ನಮ್ಮ ಉಸ್ತುವಾರಿ ಸಚಿವರು ಇಂಡಸ್ಟ್ರೀ ಪ್ರೆಂಡಲಿ ಇರಬೇಕು ಎನ್ನುವ ಸಲಹೆ ನೀಡಿದ್ದಾರೆ, ನನ್ನ ಜನರ ಸಮಾದಿ ಮೇಲೆ ನಾನು ಪ್ರೆಂಡ್ ಆಗಲ್ಲ ಎಂದು ಹೇಳಿದ್ದೇನೆ.

> **ರೈಲುಬೋಗಿ ಬಿಡಿ ಭಾಗಗಳ ತಯಾರಿಕೆ 3ಸಾವಿರಕ್ಕೆ ಹೆಚ್ಚಳ**
>
> ಕಡೇಚೂರು–ಬಾಡಿಯಾಳ ಕೈಗಾರಿಕಾ ಪ್ರದೇಶಕ್ಕೆ ರೈಲ್ವೆ ಖಾತೆಯ ರಾಜ್ಯ ಸಚಿವ ವಿ.ಸೋಮಣ್ಣ ಅವರು ಭೇಟಿ ನೀಡಿದ ಸಂದರ್ಭದಲ್ಲಿ ಮನವಿ ಮಾಡಿದ್ದ ಪರಿಣಾಮ ರೈಲು ಬಿಡಿ ಭಾಗಗಳ ತಯಾರಿಕಾ ಘಟಕ ವಿಸ್ತರಿಸಿ ಅದರ ತಯಾರಿಕಾ ಪ್ರಮಾಣವನ್ನು ವಾರ್ಷಿಕ 600 ರಿಂದ 3ಸಾವಿರಕ್ಕೆ ಹೆಚ್ಚಳ ಮಾಡಲಾಗಿದೆ. ಇದರಿಂದ ಸುಮಾರು 150 ರಿಂದ 200 ಜನರಿಗೆ ಉದ್ಯೋಗ ಸಿಗಲಿದೆ ಎಂದು ಶಾಸಕ ಶರಣಗೌಡ ಕಂದಕೂರ ಅವರು ತಿಳಿಸಿದರು.

## ಅಥಿತಿ ಉಪನ್ಯಾಸಕರ, ಅಥಿತಿ ಶಿಕ್ಷಕರ ಪ್ರವೇಶ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪಡೆಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 29: ಅಲ್ಪಸಂಖ್ಯಾತರನಿರ್ದೇಶನಾಲಯದಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮೌಲಾನಾ ಆಜಾದ ಮಾದರಿ ಶಾಲೆಗಳಿಗೆ 2024–25ನೇ ಸಾಲಿನ ಅಥಿತಿ ಉಪನ್ಯಾಸಕರ, ಅಥಿತಿ ಶಿಕ್ಷಕರ ಪ್ರವೇಶ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪಡೆಯಬೇಕು ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಭಾಗ್ಯಶ್ರೀ ಕುಂಬಾರ ಅವರು ತಿಳಿಸಿದ್ದಾರೆ.

ಬೆಂಗಳೂರು ಅಲ್ಪಸಂಖ್ಯಾತರ ನಿರ್ದೇಶನಾಲಯ ಅವರ ಅಲ್ಪಸಂಖ್ಯಾತರನಿರ್ದೇಶನಾಲಯದಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮೌಲಾನಾ ಆಜಾದ ಮಾದರಿ ಶಾಲೆಗಳಿಗೆ 2024–25ನೇ ಸಾಲಿನ ಅಥಿತಿ ಉಪನ್ಯಾಸಕರ, ಅಥಿತಿ ಶಿಕ್ಷಕರ ಆಯ್ಕೆಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು 2025ರ ಜೂನ್ 1 ರಂದು ನಡೆಸಲು ನಿರ್ಧರಿಸುತ್ತಾರೆ. ಯಾದಗಿರಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಡಾ॥ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮೌಲಾನಾ ಆಜಾದ ಮಾದರಿ ಶಾಲೆಗಳಿಗೆ 2024–25ನೇ ಸಾಲಿನ ಅಥಿತಿ ಉಪನ್ಯಾಸಕರ, ಅಥಿತಿ ಶಿಕ್ಷಕರ ಆಯ್ಕೆಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು 2025ರ ಜೂನ್ 1 ರಂದು ನಡೆಸಲಾಗುತ್ತಿದ್ದು, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ತಮ್ಮ ಹತ್ತಿರದ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಶಹಾಪುರ, ಸುರಪುರ, ಯಾದಗಿರಿ ಅಥವಾ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಯಾದಗಿರಿಯನ್ನು ಸಂಪರ್ಕಿಸಿ ಪ್ರವೇಶ ಪರೀಕ್ಷೆಯ ಪ್ರವೇಶ ಪತ್ರವನ್ನು ಪಡೆಯಬೇಕು.

ಅಭ್ಯರ್ಥಿಗಳಿಗೆ ಪ್ರವೇಶ ಪರೀಕ್ಷೆಯ ಬಗ್ಗೆ ಸೂಚನೆಗಳು : ಅಲ್ಪಸಂಖ್ಯಾತರನಿರ್ದೇಶನಾಲಯದಿಂದ ಈ ಬಾರಿಗೆ ಪ್ರವೇಶ ಪರೀಕ್ಷೆಯಲ್ಲಿ ಉತ್ತರಿಸಲು ಓ.ಎಂ.ಆರ್ ಉತ್ತರ ಪತ್ರಿಕೆಗಳನ್ನು ಪರಿಚಯಿಸಲಾಗುತ್ತದೆ. ಪ್ರತಿ ಓ.ಎಂ.ಆರ್ ಹಾಳೆಯು ಮೇಲ್ಭಾಗದಲ್ಲಿ ಮೂಲ ಪ್ರತಿ ಮತ್ತು ಕೆಳ ಭಾಗದಲ್ಲಿ ಅಭ್ಯರ್ಥಿಯ ನಕಲು ಪ್ರತಿ ಒಳಗೊಂಡ ದ್ವಿಪ್ರತಿಯಲ್ಲಿ ನೀಡಲಾಗುತ್ತಿದೆ. ವಿದ್ಯಾರ್ಥಿಗಳ ಪ್ರವೇಶ ಪತ್ರವನ್ನು (ಊಚಿಟಟ ಖಿಛಿಇಜಣ) ತಮ್ಮ ಹತ್ತಿರದ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಶಹಾಪುರ, ಸುರಪುರ, ಯಾದಗಿರಿ ಅಥವಾ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಯಾದಗಿರಿಯಿಂದ ಪಡೆಯತಕ್ಕದ್ದು. ಪರೀಕ್ಷೆ ಮುಗಿದ ನಂತರ ಮೂಲ ಓ.ಎಂ.ಆರ್ ಪ್ರತಿಯನ್ನು ನಕಲು ಪ್ರತಿಯಿಂದ ಬೇರ್ಪಡಿಸುವುದು ಹಾಗೂ ನಕಲು ಪ್ರತಿಯನ್ನು ಅಭ್ಯರ್ಥಿಯು ತನ್ನ ಬಳಿ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೂ ಸುರಕ್ಷಿತವಾಗಿರಿಸಿಕೊಳ್ಳುವುದು. ಅಭ್ಯರ್ಥಿಗಳ ಪ್ರವೇಶ ಪತ್ರದಲ್ಲಿ ನೋಂದಣಿ ಸಂಖ್ಯೆ, ವಿದ್ಯಾರ್ಥಿಯ ವಿವರಗಳು, ಪರೀಕ್ಷಾ ಕೇಂದ್ರದ ವಿವರಗಳು ಹಾಗೂ ಪರೀಕ್ಷಾ ವೇಳಾಪಟ್ಟಿಯ ಬಗ್ಗೆ ಅಗತ್ಯ ಅಂಶಗಳನ್ನು ಮುದ್ರಿಸಲಾಗಿರುತ್ತದೆ. ಪ್ರಶ್ನೆಪುಸ್ತಿಕೆಯು 100 ಪ್ರಶ್ನೆಗಳನ್ನೊಳಗೊಂಡಿದ್ದು, ಕನ್ನಡ, ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಮುದ್ರಿಸಲಾಗಿರುತ್ತದೆ. ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಕಡ್ಡಾಯವಾಗಿ, ಪ್ರವೇಶ ಪತ್ರ ಹಾಗೂ ಆಧಾರ್ ಕಾಡ್, ಯಾವುದೇ ಸರ್ಕಾರಿ ಗುರುತಿನ ಚೀಟಿ ತೆಗೆದುಕೊಂಡು ಬರಬೇಕು, ಇಲ್ಲದಿದ್ದಲ್ಲಿ ಅಭ್ಯರ್ಥಿಗಳನ್ನು ಪರೀಕ್ಷಾ ಕೇಂದ್ರದ ಒಳಗೆ ಪ್ರವೇಶಿಸಲು ಅನುಮತಿಸತಕ್ಕದ್ದಲ್ಲ. ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್, ಡಿಜಿಟಲ್ ಉಪಕರಣಗಳು, ಮೊಬೈಲ್ ಫೋನ್, ಬ್ಲೂಟೂಥ್, ಮಾಕರ್ಸ್, ವೈಟ್ ಫ್ಲೂಯಿಡ್, ವೈರ್ಲೆಸ್ ಸೆಟ್ಸ್, ಚೀಟಿ, ಬುಕ್ಸ್, ಪುಸ್ತಕ ಇತ್ಯಾತಿಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ : ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೊಠಡಿ, ಸಂ.ಸಿ–7, ಮೊದಲನೇ ಮಹಡಿ, ಜಿಲ್ಲಾ ಕಛೇರಿಗಳ ಸಂಕೀರ್ಣ (ಮಿನಿ ವಿಧಾನ ಸೌಧ) ಚಿತ್ತಾಪುರ ರಸ್ತೆ, ಯಾದಗಿರಿ ಕಛೇರಿ ದೂ.ಸಂ.08473253235, ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಬಾಲಚೇಡ ಪ್ರಾಂಶುಪಾಲರು ಮೊ.ನಂ.9449246564, 9900716156, 9731090143, ಶಹಾಪುರ. ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಪ್ರಾಂಶುಪಾಲರು, ಮೊ.ನಂ.9901720962, 9535440856, 8095971486, ಸುರಪುರ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲರು ಮೊ.ನಂ.7022196113,

## ಆಕಸ್ಮಿಕ ಜೀವಹಾನಿ ತಡೆಗಟ್ಟಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳುವುದು ಕಡ್ಡಾಯವಾಗಿ ಪಾಲಿಸಲು ಸಲಹೆ : ಡಿ.ಸಿ ಸುಶೀಲಾ.ಬಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 29: 2025ರ ನೈರುತ್ಯ ಮುಂಗಾರು (ಜೂನ್ 1 ರಿಂದ ಸೆಪ್ಟೆಂಬರ್ 30ರ ವರೆಗೆ) ಅವಧಿಗೆ ಭಾರತೀಯ ಹವಾಮಾನ ಇಲಾಖೆ (ಖಒಆ)ಯ ಪರಿಷ್ಕತ ದೀರ್ಘಾವಧಿ ಮುನ್ಸೂಚನೆಯ ಅನ್ವಯ ಜಿಲ್ಲೆಯಾದ್ಯಂತ ವಾಡಿಕೆಗಿಂತ ಅಧಿಕ ಮಳೆಯಾಗುವ ಸಾಧ್ಯತೆಗಳಿದೆ. ನೈರುತ್ಯ ಮುಂಗಾರು ಅವಧಿಯಲ್ಲಿ ಸುರಿಯುವ ಮಳೆಯಿಂದಾಗಿ ಹೆಚ್ಚಿನ ಮೇಲೆ ಹರಿವು ಉಂಟಾಗಿ ಕೃಷ್ಣಾ ಮತ್ತು ಭೀಮಾ ನದಿಗಳು, ತೊರೆಗಳು ತುಂಬಿ ಹರಿಯುತ್ತವೆ. ಅಲ್ಲದೆ, ಕೆರೆಕಟ್ಟೆಗಳು, ಮತ್ತು ಇತರ ಜಲ ಮೂಲಗಳಲ್ಲಿ ಹೆಚ್ಚಿನ ನೀರು ಸಂಗ್ರಹವಾಗುತ್ತದೆ. ಈ ಸಂದರ್ಭಗಳಲ್ಲಿ ನದಿ, ತೊರೆ, ಜಲಪಾತಗಳು ಮತ್ತು ಕೆರೆಕಟ್ಟೆಗಳ ಬಳಿ ಅಕಸ್ಮಿಕವಾಗಿ ಮತ್ತು ಅಜಾಗರೂಕತೆಗಳಿಂದಾಗಿ ಅಪಾಯಗಳು ಗಮನಾರ್ಹವಾಗಿ ಹೆಚ್ಚಿರುತ್ತವೆ, ಆಕಸ್ಮಿಕ ಮತ್ತು ಅಜಾಗರೂಕತೆಗಳಿಂದಾಗುವ ದುರಂತ ಜೀವಹಾನಿಯನ್ನು ತಡೆಗಟ್ಟಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವುದು ಕಡ್ಡಾಯವಾಗಿ ಪಾಲಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ.

ಸಾರ್ವಜನಿಕ ಸಲಹೆಗಳು ಮತ್ತು ಜಾಗೃತಿ, ಜಲಮೂಲ ಬಳಿ ಹೋಗುವುದನ್ನು ತಪ್ಪಿಸಿ : ನೈರುತ್ಯ ಮುಂಗಾರು ಅವಧಿಯಲ್ಲಿ ಹೆಚ್ಚಿನ ಮಳೆಯಿಂದಾಗಿ ಒಳಹರಿವು ಹೆಚ್ಚಳಗೊಂಡು, ನೀರಿನ ಮಟ್ಟದಲ್ಲಿನ ಏರಿಕೆ, ಅತೀವೇಗ ಮತ್ತು ಬಲವಾಗಿ ಹರಿಯುವ ನದಿ ಪ್ರವಾಹಗಳು ಅಪಾಯವನ್ನುಂಟು ಮಾಡುತ್ತದೆ. ಅದ್ದರಿಂದ ನದಿಗಳು, ಕೊಳಗಳು, ಕ್ವಾರಿಗಳು, ಕಾಲುವೆಗಳು, ತುಂಬಿ ಹರಿಯುವ ಚರಂಡಿಗಳು ಮತ್ತು ಪ್ರವಾಹ ಪೀಡಿತ ಪ್ರದೇಶಗಳ ಬಳಿ ಈಜುವುದು, ಆಟವಾಡುವುದು ಮತ್ತು ಓಡಾಡುವುದನ್ನು ತಪ್ಪಿಸಲು ಸಾರ್ವಜನಿಕರಿಗೆ ವಿಶೇಷವಾಗಿ ಮಕ್ಕಳು ಮತ್ತು ಯುವಕರಿಗೆ ಕಟ್ಟುನಿಟ್ಟಾಗಿ ಸೂಚಿಸಿದೆ.

ತುಂಬಿ ಹರಿಯುವ ಸೇತುವೆಗಳು, ಸ್ಥಳಗಳಿಂದ ದೂರವಿರಿ : ಮುಳುಗಿರುವ ಮತ್ತು ಸೇತುವೆ ಮೇಲ್ಮಟ್ಟದಲ್ಲಿ ಹರಿಯುವ ನದಿ, ತೊರೆಗಳು, ಕಲ್ವರ್ಟ್ಗಳನ್ನು ದಾಟಲು ಪ್ರಯತ್ನಿಸದಂತೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿ, ಈ ಸಂದರ್ಭಗಳಲ್ಲಿ ಸೇತುವೆಗಳಂತಹ ರಚನಾತ್ಮಕ ರಚನೆಗಳು ಹಾನಿಗೊಂಡು ಇವುಗಳನ್ನು ದಾಟಲು ಪ್ರಯತ್ನಿಸುವವರು ನೀರಿನ ಸೆಳೆತಕ್ಕೆ ಸಿಲುಕುವ ಸಾಧ್ಯತೆಗಳಿದ್ದು, ಇವುಗಳಿಂದ ದೂರ ಇರಿ.

ನೀರಿನ ಬಳಿ ಸೆಲ್ಫಿ ಛಾಯಾಗ್ರಹಣ ಬೇಡ : ಪ್ರಕ್ಷುಬ್ಧಗೊಂಡ ನದಿಗಳು, ಜಲಪಾತಗಳು ಅಥವಾ ಅಪಾಯ ಮಟ್ಟದಲ್ಲಿ ನೀರು ಹೆಚ್ಚಿರುವ ಸ್ಥಳಗಳ ಬಳಿ ಸೆಲ್ಫಿ ಅಥವಾ ಛಾಯಾಚಿತ್ರಗಳನ್ನು ತೆಗೆದುಕೊಳ್ಳುವುದನ್ನು ನಿಷೇಧಿಸಲಾಗಿರುತ್ತದೆ.

ಮಕ್ಕಳ ಮೇಲ್ವಿಚಾರಣೆ : ವಿಶೇಷವಾಗಿ ಜಲಮೂಲಗಳು ಮತ್ತು ತಗ್ಗಿನಿಂದ ಕೂಡಿದ ಪ್ರವಾಹ ಪೀಡಿತ ಜನವಸತಿ ಪ್ರದೇಶಗಳಲ್ಲಿ ಪೋಷಕರು ಮಕ್ಕಳ ಮೇಲೆ ವಿಶೇಷ ಕಾಳಜಿ ಮತ್ತು ಮೇಲ್ವಿಚಾರಣೆಯನ್ನು ಮಾಡಲು ವಿನಂತಿಸಿದೆ.

ಪ್ರವಾಹದ ನೀರನ್ನು ಹಾಯುವುದು, ಚಾಲನೆ ಮಾಡುವುದನ್ನು ತಪ್ಪಿಸಿ : ಪ್ರವಾಹ ಪರಿಸ್ಥಿತಿ ಸಂದರ್ಭಗಳಲ್ಲಿ, ಶಿಥಿಲಗೊಂಡ ಸೇತುವೆಗಳು, ಅದೃಶ್ಯ ತೆರೆದ ಮ್ಯಾನ್ಹೋಲ್ಗಳು, ಹಾನಿಗೊಂಡ ರಸ್ತೆಗಳು ಮತ್ತು ನೀರಿನ ಸೆಳೆತಗಳು ಗಂಭೀರ ಪ್ರಮಾಣದ ಅಪಾಯಗಳನ್ನು ಉಂಟುಮಾಡಬಹುದು. ಅದ್ದರಿಂದ ಪ್ರವಾಹದ ನೀರಿನಲ್ಲಿ ಹಾಯುವುದು ಮತ್ತು ಚಾಲನೆ ಮಾಡಬಾರದು.

ವಿದ್ಯುತ್ ಸುರಕ್ಷತೆ : ವಿದ್ಯುತ್ ಸಂಪರ್ಕ ಕಲ್ಪಿಸುವ ಸ್ಥಾವರ, ರಚನೆಗಳ ಬಳಿ ನೀರಿನಿಂದ ಆವೃತಗೊಂಡ ಪ್ರದೇಶಗಳು, ಶಿಥಿಲಗೊಂಡ, ಮುರಿದು ಬಿದ್ದ ವಿದ್ಯುತ್ ಕಂಬಗಳು, ಕಡಿತಗೊಂಡ ವಿದ್ಯುತ್ ಸಂಪರ್ಕಗಳನ್ನು ಮುಟ್ಟದಂತೆ ಮತ್ತು ಸನಿಹ ತೆರಳದಂತೆ ಸೂಚಿಸಿದೆ.

ಕಟ್ಟುನಿಟ್ಟಾಗಿ ಪಾಲಿಸಬೇಕಾದ ಎಚ್ಚರಿಕೆಗಳು : ಭಾರತೀಯ ಹವಾಮಾನ ಇಲಾಖೆ (ಖಒಆ), ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರ, ಕೇಂದ್ರ ಜಲ ಆಯೋಗ, ಜಿಲ್ಲಾಡಳಿತಗಳು ನೀಡುವ ಎಚ್ಚರಿಕೆಗಳು ಮತ್ತು ಸಲಹೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸಾರ್ವಜನಿಕರಿಗೆ ತಿಳಿಸಿದೆ.

ಸಿಡಿಲು ಗುಡುಗುಗಳ ಸಂದರ್ಭಗಳಲ್ಲಿ ಅನುಸರಿಸಬೇಕಾದ ಕ್ರಮಗಳು ಮನೆಯಲ್ಲಿ ಇರುವ ಸಂದರ್ಭಗಳಲ್ಲಿ : ವಾತಾವರಣದಲ್ಲಿನ ಬದಲಾವಣೆಗಳನ್ನು ಗಮನಿಸಿ, ಹತ್ತಿರದ ಪ್ರದೇಶಗಳಲ್ಲಿ ಉಂಟಾಗುವ ಸಿಡಿಲು ಗುಡುಗುಗಳಿಂದ ಸಿಡಿಲು ಸಂಭವನೀಯತೆ ಊಹಿಸಿ, ಸ್ಥಳೀಯ ಮಾಧ್ಯಮಗಳಲ್ಲಿ ನೀಡಲಾಗುವ ಸೂಚನೆಗಳನ್ನು ಪಾಲಿಸಿ, ಪ್ರಯಾಣವನ್ನು ಮಂದೂಡಿರಿ ಹಾಗೂ ಮನೆಯ ಕಿಟಕಿ, ಬಾಗಿಲುಗಳನ್ನು ಮುಚ್ಚಿರಿ, ಮಕ್ಕಳು, ವಯೋವೃದ್ಧರು ಹಾಗೂ ಜಾನುವಾರುಗಳನ್ನು ಸಿಡಿಲು ಸಂದರ್ಭಗಳಲ್ಲಿ ಮನೆಯ ಒಳಗಿರಲು ತಿಳಿಸಿ, ವಿದ್ಯುತ್ ಸಂಪರ್ಕಗಳನ್ನು ಕಡಿತಗೊಳಿಸಿ, ಮನೆಯ ಛಾವಣಿಗಳಲ್ಲಿ ಒಣಗಿದ ಹುಲ್ಲು ಮತ್ತು ಕಸಕಡ್ಡಿಗಳ ಸಂಗ್ರಹಣೆಯನ್ನು ತೆರವುಗೊಳಿಸಿ, ಸಿಡಿಲು ಸಂದರ್ಭಗಳಲ್ಲಿ ಸ್ನಾನ ಮಾಡುವುದು, ಪಾತ್ರೆ ತೊಳೆಯುವುದು, ಬಟ್ಟೆ ಒಗೆಯುವುದನ್ನು ಮುಂದೂಡಿರಿ. ಕಿಟಕಿ, ಬಾಗಿಲು, ವಿದ್ಯುತ್ ಸಂಪರ್ಕಗಳಿಂದ ದೂರವಿರಿ.

ಮನೆಯ ಹೊರಾವರಣದಲ್ಲಿ ಇದ್ದ ಸಂದರ್ಭಗಳಲ್ಲಿ : ಹತ್ತಿರದಲ್ಲಿ ಲಭ್ಯ ಸುರಕ್ಷಿತ ಸ್ಥಳಗಳ ಆಶ್ರಯ ಪಡೆಯಿರಿ, ಎತ್ತರವಾದ ಮರ, ಕಟ್ಟಡ ಮತ್ತು ನೀರು ಸಂಗ್ರಹಣೆ ರಚನೆಗಳು, ನದಿ, ಕೆರೆಗಳಿಂದ ದೂರವಿರಿ, ಯಾವುದೇ ಸುರಕ್ಷಿತ ಸ್ಥಳಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಎರಡು ಕಾಲುಗಳ ನಡುವೆ ಮುಖವಿರಿಸಿ ಮಂಡಿಯೂರಿ ಕುಳಿತುಕೊಳ್ಳಿ ಮತ್ತು ನೆಲದ ಮೇಲೆ ಮಲಗಬೇಡಿ, ವಿದ್ಯುತ್ ಕಂಬಗಳು, ವಿದ್ಯುತ್ ಸಂಪರ್ಕಗಳಿಂದ ದೂರವಿರಿ, ಪ್ರಯಾಣ ಮಾಡಬೇಡಿ ಹಾಗೂ ಮರದ ಕೆಳಗೆ ಆಶ್ರಯಿಸಬೇಡಿ, ರಬ್ಬರ್ ಮತ್ತು ಪ್ಲಾಸ್ಟಿಕ್ ವಸ್ತುಗಳು ಸಿಡಿಲು ಬಡಿತದಿಂದ ರಕ್ಷಣೆ ನೀಡುವುದಿಲ್ಲ, ದೋಣಿ ಹಾಯುವುದು, ಈಜುವುದು, ವಾಹನ ಚಲಾಯಿಸುವುದನ್ನು ಮಾಡಬೇಡಿ.

ಸಿಡಿಲು ಬಡಿತ ಪ್ರಥಮ ಚಿಕಿತ್ಸೆ : ಹತ್ತಿರದ ಪ್ರಾಥಮಿಕ ಚಿಕಿತ್ಸಾ ಕೇಂದ್ರಕ್ಕೆ ಕರೆದ್ಯೊಯಿರಿ, ಅಗತ್ಯ ಪ್ರಥಮ ಚಿಕಿತ್ಸೆ ನೀಡಿ, ಸಿಡಿಲು ಬಡಿತಕ್ಕೆ ಒಳಗಾದವರಿಗೆ ಸೂಕ್ತ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳಿ, ಸಿಡಿಲು ಬಡಿತಕ್ಕೆ ಒಳಗಾದವರ ದೇಹದ ಮೇಲಿನ ಗಾಯ, ಕಣ್ಣಿನ ದೃಷ್ಟಿ, ಕಿವಿ ಹಾಗೂ ಮೂಳೆ ಮುರಿತಕ್ಕೆ ಸಂಬಂಧಿಸಿದ ತಪಾಸಣೆಗಳನ್ನು ಕೈಗೊಳ್ಳಿರಿ, ಸಿಡಿಲು ಬಡಿತದಿಂದ ಉಂಟಾದ ಸುಟ್ಟ ಗಾಯಗಳನ್ನು ಪರೀಕ್ಷಿಸಿ ಹಾಗೂ ಪರಿಣಾಮಗಳನ್ನು ಗುರುತಿಸಿ, ಮಳೆಗಾಲದ ಅವಧಿಯಲ್ಲಿ ಮಳೆ ಅವಘಡ ಹಾಗೂ ಮುಳುಗಡೆ ಘಟನೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಜಾಗೃತಿ ಕ್ರಮಗಳು ನಿರ್ಣಾಯಕವಾಗಿದ್ದು, ಸಲಹೆ, ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.31ಕ್ಕೆ ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.29 : ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಮೇ 31ರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 1.30 ಗಂಟೆವರೆಗೆ ನೇರ ಸಂದರ್ಶನ ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ. ನೇರಸಂದರ್ಶನವನ್ನು ಎರಡು ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಆಯೋಜನೆ ಮಾಡಲಾಗಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ. 18 ರಿಂದ 30 ವರ್ಷಗಳವರೆಗಿನ ಎಸ್.ಎಸ್. ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು. ನೇರಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

## ಬಳ್ಳಾರಿ: ಎಲ್ಲಾ ಮೋಟಾರ್ ಬೈಕ್ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ

ಬಳ್ಳಾರಿ, ಮೇ 29–ಜಿಲ್ಲೆಯಲ್ಲಿ ಎಲ್ಲಾ ಮೋಟಾರ್ ಬೈಕ್ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾರಾಣಿ ವಿ.ಜೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಭಾರತೀಯ ಮೋಟಾರು ವಾಹನ ಕಾಯ್ದೆ 1989 ಹಾಗೂ ಕರ್ನಾಟಕ ಮೋಟಾರ್ ವಾಹನ ನಿಯಮ ಪ್ರಕಾರ ಪ್ರತಿಯೊಬ್ಬ ಮೋಟಾರ್ ಸೈಕಲ್ ವಾಹನ ಸವಾರ (ಖಿಜಜಡಿ) ಹಾಗೂ ಹಿಂಬದಿ ಸವಾರನು (ಕುಟಟುಅಟಿ ಖಿಜಜಡಿ) ತಮ್ಮ ಸುರಕ್ಷತೆ–ಗಾಗಿ ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಿದೆ.

ಜಿಲ್ಲೆಯಲ್ಲಿ ಇತ್ತೀಚೆಗೆ ರಸ್ತೆ ಅಪಘಾತಗಳಲ್ಲಿ ತಲೆಗೆ ತೀವ್ರ ಗಾಯಗಳಾಗಿ ಸಾವಿಗೀಡಾಗಿರುತ್ತಿರುವುದು ಕಂಡುಬರುತ್ತಿದ್ದು, ಹಾಗಾಗಿ ಹಿಂಬದಿ ಸವಾರ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು.

ವಾಹನ ಚಲಾಯಿಸುವ ತಮ್ಮ ಕುಟುಂಬದ ಎಲ್ಲಾ ಸದಸ್ಯರು, ಶಾಲಾ–ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಕಡ್ಡಾಯವಾಗಿ ಐ.ಎಸ್.ಐ ಮಾರ್ಕ್ ಹೊಂದಿದ ಹೆಲ್ಮೆಟ್ ನ್ನು ಧರಿಸಬೇಕು. ಮುಖ್ಯವಾಗಿ ರಸ್ತೆ ಸುರಕ್ಷತಾ ಕ್ರಮಗಳನ್ನು ಕಟ್ಟು ನಿಟ್ಟಾಗಿ ಅನುಸರಿಸಬೇಕು.

ಪ್ರಸ್ತುತ ಜಿಲ್ಲೆಯ ಎಲ್ಲಾ ಸಾರ್ವಜನಿಕ ರಸ್ತೆಯಲ್ಲಿ ಪೊಲೀಸ್ ಇಲಾಖೆಯಿಂದ ಈ ಬಗ್ಗೆ ವಿಶೇಷ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದ್ದು, ಒಂದು ವೇಳೆ ಹೆಲ್ಮೆಟ್ ಧರಿಸದೇ ವಾಹನ ಚಲಾಯಿಸುವುದು ಕಂಡು ಬಂದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ಪ್ರಕರಣ ದಾಖಲಿಸಿ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.



ಪ್ರತಿಯೊಬ್ಬ ಸಾರ್ವಜನಿಕರು ವಾಹನ ಚಲಾಯಿಸುವಾಗ ಸವಾರ ಮತ್ತು

# ಕಾಂಗ್ರೆಸ್ ಸರಕಾರದಿಂದ ಜನಪರ ಆಡಳಿತ:ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.29: ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಜನಪರ ಆಡಳಿತ ನೀಡುತ್ತಿದೆ. ಚುನಾವಣೆ ಪೂರ್ವ ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸುತ್ತಿದೆ ಎಂದು ಸಂಸದ ಸಾಗರ ಖಂಡ್ರೆ ಹೇಳಿದರು.

ತಾಲೂಕಿನ ಕಳಸದಾಳ ತಾಂಡಾ, ಧಾರಜವಾಡಿ ತಾಂಡಾ, ಗರ್ಮಾ ತಾಂಡಾ ಮತ್ತು ದೊಡ್ಡೋದಿ ತಾಂಡಾಗಳಲ್ಲಿ ಶಾಸಕರ 3.25 ಕೋಟಿ ರೂ ಅನುದಾನದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದ ಕಾಂಗ್ರೆಸ್ ಸರಕಾರ ಎರಡು ವರ್ಷ ಅಧಿಕಾರ ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಉಪ ಮುಖ್ಯಮಂತ್ರಿ ಸೇರಿದಂತೆ ಸಂಪುಟದ ಎಲ್ಲ ಸಚಿವರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದಾರೆ.

ಜಿಲ್ಲೆಯಲ್ಲಿ ವಿವಿಧ ಯೋಜನೆಯಡಿ ಕೋಟ್ಯಾಂತರ ರೂ ಅನುದಾನದಲ್ಲಿ ರಸ್ತೆಗಳು, ಕಟ್ಟಡ, ಕುಡಿಯುವ ನೀರು ಸೇರಿದಂತೆ ಮುಂತಾದ ಅಭಿವೃದ್ಧಿ ಕಾರ್ಯಕ್ರಮಗಳು ಪ್ರಗತಿಯಲ್ಲಿವೆ ಎಂದರು.

ರಾಜ್ಯದ ಜನರು ವಿಶ್ವಾವಿಟ್ಟು ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ನೀಡಿದ್ದಾರೆ. ಅದರಂತೆ ಕಾಂಗ್ರೆಸ್ ಸರಕಾರ ಆಡಳಿತ ನೀಡುತ್ತಿದೆ.

ನಾನು ಕೂಡ ಸಂಸದನಾಗಿ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡಿದ್ದೇನೆ. ಅಧಿವೇಶನದಲ್ಲಿ ಕ್ಷೇತ್ರದ ಪ್ರಗತಿ ಕುರಿತು ಚರ್ಚಿಸಿದ್ದೇನೆ. ಕೇಂದ್ರದ ವಿವಿಧ ಯೋಜನೆಯಡಿ ಅನುದಾನ ತಂದು ಈ ಭಾಗಕ್ಕೆ ಅಗತ್ಯ ಮೂಲ ಸೌಕರ್ಯ ಒದಗಿಸುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ತಿಳಿಸಿದರು.

ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹಣಮಂತ ಚವ್ಹಾಣ, ಪ್ರಮುಖರಾದ ಹಣಮಂತ ಮನಕಾರಿ, ಶಂಕರ, ವಿಜಯಕುಮಾರ್, ಬಾಲಾಜಿ ಚವ್ಹಾಣ ಸೇರಿದಂತೆ ಹಲವರು ಇದ್ದರು.

# ಬಸವಕಲ್ಯಾಣಕ್ಕೆ ವಸತಿ ಶಾಲೆ ಮಂಜೂರು:ವಿಜಯಸಿಂಗ್ ಮನವಿಗೆ ಸ್ಪಂದನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 29 : ವಿಧಾನ ಪರಿಷತ್ ಮಾಜಿ ಸದಸ್ಯ ವಿಜಯಸಿಂಗ್ ಅವರ ಪ್ರಯತ್ನದಿಂದಾಗಿ ಜಿಲ್ಲೆಯ ಬಸವಕಲ್ಯಾಣ ನಗರಕ್ಕೆ ಹೊಸ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮಂಜೂರಾಗಿದೆ.

ಈ ಕುರಿತು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಹಾಗೂ ವಕ್ಫ್ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಎಸ್.ಎಜಾಸ್ ಪಾಷ ಬುಧವಾರ ಆದೇಶ ಹೊರಡಿಸಿದ್ದಾರೆ.

ಬಸವಕಲ್ಯಾಣದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಆರಂಭಿಸಲು ವಿಜಯಸಿಂಗ್ ಅವರು ಅಲ್ಪಸಂಖ್ಯಾತರ ಖಾತೆ ಸಚಿವ ಜಮೀರ್ ಅಹಮ್ಮದ್ ಖಾನ್ ಅವರಿಗೆ ಮನವಿಪತ್ರ ಸಲ್ಲಿಸಿದ್ದರು. ತಾಲ್ಲೂಕಿನಲ್ಲಿ ಅಲ್ಪಸಂಖ್ಯಾತರ ಸಂಖ್ಯೆ ಅಧಿಕ ಇದೆ. ಹೀಗಾಗಿ ವಸತಿ ಶಾಲೆ ಮಂಜೂರು

ಮಾಡಿ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಕೋರಿದ್ದರು. ಅವರ ಮನವಿಗೆ ಸ್ಪಂದಿಸಿದ ರಾಜ್ಯ ಸರ್ಕಾರ ಬಸವಕಲ್ಯಾಣದಲ್ಲಿ ವಸತಿ ಶಾಲೆ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶ ಹೊರಡಿಸಿದೆ. ಸರ್ಕಾರ, ವಸತಿ ಶಾಲೆ ಮಂಜೂರು ಮಾಡಿದ್ದಕ್ಕೆ ಸಂತಸ ವ್ಯಕ್ತಪಡಿಸಿರುವ ವಿಜಯಸಿಂಗ್ ಅವರು, ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಶಾಲೆಯ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದ್ದಾರೆ.

# ಕಾಶಿ ಜಗದ್ಗುರುಗಳ ನೇತೃತ್ವದಲ್ಲಿ ಬೆದವಟ್ಟಿಯ ಶ್ರೀಗಳ ಅಂತ್ಯಸಂಸ್ಕಾರ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ:ಮೇ.29: ತಾಲೂಕಿನ ಬೆದವಟ್ಟಿ ಗ್ರಾಮದ ಸಂಸ್ಥಾನ ಹಿರೇಮಠದ ಶ್ರೀಗಳಾದ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯರು ಬುಧವಾರ ಮಧ್ಯಾಹ್ನ 2 ಗಂಟೆ–ಯ ವೇಳೆಗೆ ಶ್ರೀಗಳು ಇಹಲೋಕ ತ್ಯಜಿಸಿದ್ದು ಗುರುವಾರ ಸಾಯಂಕಾಲ 5:00 ಗಂಟೆಯ ವೇಳೆಗೆ ಶ್ರೀಗಳ ಮರಣೋತ್ತರ ವಿಧಿ ವಿಧಾನಗಳನ್ನು ಕಾಶಿ ಜಗದ್ಗುರು ಶ್ರೀಗಳ ನೇತೃತ್ವದಲ್ಲಿ ವಿವಿಧ ಮಠಾಧೀಶರ ಸಮ್ಮುಖದಲ್ಲಿ ನೆರವೇರಿಸಲಾಯಿತು. ಶ್ರೀಗಳ ದೇಹಾಂತ್ಯ ಸುದ್ದಿ ತಿಳಿಯುತ್ತಿದ್ದಂತೆಯೇ ಭಕ್ತ ವರ್ಗ ಮಠದ ಕಡೆಗೆ ಆಗಮಿಸ ತೊಡಗಿದರು. ಹಲವು ಗ್ರಾಮಗಳಿಂದ ತಂಡೋಪತಂಡವಾಗಿ ಶ್ರೀಮಠದ ಕಡೆಗೆ ಆಗಮಿಸಿ ಅಂತಿಮ ದರ್ಶನ ಪಡೆದು ಶ್ರೀಗಳ ಅಂತಿಮ ಯಾತ್ರೆಯಲ್ಲಿ ಭಾಗಿಯಾದರು.

ಬುಧವಾರ ಸಾಯಂಕಾಲದಿಂದ ಗುರುವಾರ ಮಧ್ಯಾಹ್ನದವರೆಗೆ ಸಾರ್ವಜನಿಕರಿಗಾಗಿ ಶ್ರೀಗಳ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು ನಂತರ ಶ್ರೀಗಳ ಮರಣೋತ್ತರ ವಿಧಿ ವಿಧಾನಗಳು ಪ್ರಾರಂಭಗೊಂಡು ಕಾಶಿ ಜಗದ್ಗುರು ಮಹಾಸ್ವಾಮಿಗಳ ನೇತೃತ್ವದಲ್ಲಿ ಜೊತೆಗೆ ಹಲವಾರು ಮಠಾಧೀಶರ ದಿವ್ಯ ಸಾನಿಧ್ಯದಲ್ಲಿ ಶ್ರೀಗಳ ಅಂತಿಮ ವಿಧಿ ವಿಧಾನ ನೆರವೇರಿಸಲಾಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀಗಳ ಪಾರ್ಥಿವ ಶರೀರದ ಮೆರವಣಿಗೆ ಮಾಡಲಾಯಿತು ದಾರಿಉದ್ದಕ್ಕೂ ಜನಸ್ತೋಮಗೊಂಡಿದ್ದ ಭಕ್ತರು ಶ್ರೀಗಳಿಗೆ ಅಂತಿಮ ನಮನ ಸಲ್ಲಿಸಿದರು. ನಂತರ ಮಠದ ಆವರಣದಲ್ಲಿ ಶ್ರೀಗಳ ಅಂತ್ಯಸಂಸ್ಕಾರ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀವೀರಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿ ಚಳಗೇರಿ, ಶ್ರೀಸಿದ್ದಲಿಂಗ ಶಿವಾಚಾರ್ಯ ಮಂಗಳೂರು, ಡಾ. ಮಹಾದೇವ ಸ್ವಾಮಿಗಳು ಕುಕನೂರು, ಶ್ರೀ ಸಿದ್ರಾಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಯಲಬುರ್ಗಾ, ಬಸವಲಿಂಗ ಶಿವಚಾರ್ಯ ಸ್ವಾಮಿಗಳು ಯಲಬುರ್ಗಾ, ಶ್ರೀ ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ಹೆಬ್ಬಾಳ, ಅಭಿನವ ಪಂಚಾಕ್ಷರ ಸ್ವಾಮಿಗಳು ರಾಜೂರು, ಚಿಕ್ಕೇನಕೊಪ್ಪದ ಶ್ರೀಚನ್ನವೀರ ಶರಣರು ಸೇರಿದಂತೆ ಅನೇಕ ಮಠಾಧೀಶರು ಹಾಗೂ ಪ್ರಮುಖರು ಪಾಲ್ಗೊಂಡಿದ್ದರು.

# ಶಾಲಾ ಪ್ರಾರಂಭೋತ್ಸವ ಶಾಲಾ ದಾಖಲಾತಿಗಾಗಿ ಮನೆ ಮನೆಗೆ ಭೇಟಿ: ವೆಂಕಟೇಶ್ ಗುಡಾಳ್



ಮಲ್ಲಮ್ಮನುಡಿವಾರ್ತೆಚಿಟಗುಪ್ಪ:ಮೇ.29: ಪಟ್ಟಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ್ ನೇತೃತ್ವದಲ್ಲಿ ಶಾಲಾ ಪ್ರಾರಂಭೋತ್ಸ ಅಂಗವಾಗಿ ಶಾಲಾ ದಾಖಲಾತಿ ಜನ ಜಾಗೃತಿ ಜಾಥಾ ಜರುಗಿತ್ತು. ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ್ ಶಾಲಾ ದಾಖಲಾತಿಗಾಗಿ ಮನೆಮನೆಗೆ ಹೋಗಿ ಶಿಕ್ಷಣದ ಮಹತ್ವದ ಬಗ್ಗೆ ವಿವರಿಸಿ ಪೋಷಕರಿಂದ ಶಾಲಾ ದಾಖಲಾತಿ ಮಾಡಿಸಿದರು. ಮೇ 29ರಂದು ಶಾಲಾ ಪ್ರಾರಂಭೋತ್ಸ ದಿನದಂದು ಶಾಲಾ ದಾಖಲಾತಿ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಸ್ವಂತ ಹಣದಲ್ಲಿ ಕಲಿಕಾ ಸಾಮಗ್ರಿಗಳು ನೀಡಿದರು. ಇಲ್ಲಿಯ ಸರ್ಕಾರಿ ಕನ್ಯಾ ಮಾದರಿ ಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗುಡಾಳ್ ಅವರ ಅಧ್ಯಕ್ಷತೆಯಲ್ಲಿ ಶಾಲಾ ಪ್ರಾರಂಭೋತ್ಸ ಜರುಗಿತ್ತು. ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಮಹಾವೀರ ಜಮಖಂಡಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲುಕಾಧ್ಯಕ್ಷ ರಾಜಪ್ಪ ಜಮಾದರ್, ಪುರಸಭೆ ಸದಸ್ಯೆ ಪದ್ಮಾವತಿ ಜವಳಿ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲುಕಾಧ್ಯಕ್ಷ ಅನೀಲಕುಮಾರ ಸಿಂಧೆ, ಶಾಲೆಯ ಮುಖ್ಯ ಗುರುಗಳಾದ ಸುನೀತಾ, ಸರ್ದಾರ್ ಅಲಿ, ರಾಮಚಂದ್ರ, ಸಂತೋಷ ಕೊಡ್ಲಿ, ಸಂಜೀವನ ಭೋಸ್ಲೆ, ಗುಂಡಪ್ಪ ಕೋರಿ, ಸಂಜುರೆಡ್ಡಿ, ಅಖಿಲ, ಶ್ರೀನಿವಾಸ, ಸಂತೋಷ, ಸೀಮಾ, ಪುಷ್ಪ, ಹಸನ್ ಲಚ್ಚಿಕೆ, ನಾಗಪ್ಪ, ಸೇರಿದಂತೆ ವಿವಿಧ ಶಾಲೆಯ ಮುಖ್ಯ ಗುರುಗಳು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಸಾಪ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಲು ಹಡಪದ ಮನವಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಮೇ.29:ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಮೇ 30ರಂದು ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜನಲ್ಲಿ 111ನೇ ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥಾಪನಾ ದಿನಾಚರಣೆಯನ್ನು ತಾಲುಕಾಧ್ಯಕ್ಷ ಅನೀಲಕುಮಾರ್ ಸಿಂಧೆ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ. ಕಾರ್ಯಕ್ರಮದಲ್ಲಿ ತಾಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರು, ಅಜೀವ ಸದಸ್ಯರು, ಕನ್ನಡ ಪರ ಸಂಘಟನೆಯ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕನ್ನಡ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕನ್ನಡ ಸಾಹಿತ್ಯ

ಪರಿಷತ್ತಿನ ನಗರ ಘಟಕ ಅಧ್ಯಕ್ಷ ರಾಜಕುಮಾರ್ ಆರ್. ಹಡಪದ ಪತ್ರಿಕಾ ಪ್ರಕಟಣೆ ಮನವಿ ಮಾಡಿದ್ದಾರೆ.

# ಇಂದು ಮತ್ತು ನಾಳೆ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.29: ಕಾರಂಜಾ ಜಲಾಶಯದಿಂದ ಬೀದರ ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುತ್ತಿರುವ ಜ್ಯಾಕವೇಲ್‌ನಲ್ಲಿರುವ 500 ಏಗಿ Transformer ಕೆ–ಟ್ಟು ಹೋಗಿದ್ದು ಹಾಗೂ ನೌಬಾದ ಐ.ಪಿ.ಎಸ್.ನಲ್ಲಿರುವ ಮೋಟಾರು ಮತ್ತು ವಿದ್ಯುತ್ ರಿಪೇರಿ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಮೇ.30 ಮತ್ತು 31 ರವರೆಗೆ ಈ ಎರಡು ದಿವಸ ಬೀದರ ನಗರಕ್ಕೆ ಕುಡಿಯುವ ನೀರು ಸರಬರಾಜು ಆಗುವುದಿಲ್ಲ. ಕಾರಣ ಸಾರ್ವಜನಿಕರು ಸಹಕರಿಸಬೇಕೆಂದು ಬೀದರ ನಗರಸಭೆ ಪೌರಾಯುತ್ತಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.1 ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತ್ಯೋತ್ಸವ



ಕಲಬುರಗಿ:ಮೇ.29:ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮನವರ 603 ನೇ ಜಯಂತ್ಯೋತ್ಸವ ಹಾಗೂ ರೆಡ್ಡಿ ಸಮಾಜದ ನೂತನ ಜಿಲ್ಲಾಧ್ಯಕ್ಷರ ಪದಗ್ರಹಣ ಸಮಾರಂಭವು ಜೂನ್ 1 ರಂದು ಬೆಳಿಗ್ಗೆ 11 ಕ್ಕೆ ನಗರದ ಖೂಬಾ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ಡಾ.ಎಸ್.ಬಿ.ಕಾಮರೆಡ್ಡಿ ತಿಳಿಸಿದರು.

ಹರಿಹರ ಎರೆಹೊಸಳ್ಳಿಯ ರೆಡ್ಡಿ ಗುರುಪೀಠದ ಪೂಜ್ಯ ಶ್ರೀ ದೇಮನಾನಂದ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ಹೆಡಗಿಮದ್ರಾ ಪೂಜ್ಯ ಶ್ರೀ ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯರು ನೇತೃತ್ವ ವಹಿಸುವರು.


ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ ಅವರು ಸಮಾರಂಭವನ್ನು ಉದ್ಘಾಟಿಸುವರು.

ಯಾದಗಿರಿ ಶಾಸಕರಾದ ಚೆನ್ನಾರೆಡ್ಡಿ ಪಾಟೀಲ ತುನ್ನೂರು ಹಾಗೂ ಗುರುಮಠಕಲ್ ಶಾಸಕರಾದ ಶರ–ಣಗೌಡ ಕಂದಕೂರ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಹಿರಿಯ ಸಾಹಿತಿ ಶ್ರೀಮತಿ ಪ್ರಮೀಳಾ ಜಾನಪ್ಪಗೌಡ ಅವರು ವಿಶೇಷ ಉಪನ್ಯಾಸ ನೀಡುವರು.

ರೆಡ್ಡಿ ಸಮಾಜದ ನೂತನ ಜಿಲ್ಲಾಧ್ಯಕ್ಷರಾದ ಡಾ.ಶರಣಬಸವಪ್ಪ ಬಿ.ಕಾಮರೆಡ್ಡಿ ಅವರು ಜಿಲ್ಲಾಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಮಾಡುವರು.

ಈ ಸಮಾರಂಭದ ಅಧ್ಯಕ್ಷತೆಯನ್ನು ರೆಡ್ಡಿ ಸಮಾಜದ ನಿಕಟಪೂರ್ವ ಜಿಲ್ಲಾಧ್ಯಕ್ಷರಾದ ಪ್ರೊ.ಚೆನ್ನಾರೆಡ್ಡಿ ಪಾಟೀಲ ವಹಿಸುವರು.

# ಭಾರತದ ಬ್ರಹ್ಮೋಸ್‌ನಿಂದ ನಮ್ಮ ಪ್ಲ್ಯಾನ್‌ಗಳೆಲ್ಲಾ ತಲೆಕೆಳಗೆ ಸತ್ಯ ಒಪ್ಪಿಕೊಂಡ ಪಾಕ್ ಪ್ರಧಾನಿ



ಇಸ್ಲಾಮಾಬಾದ್:ಮೇ.29: ಆಪರೇಷನ್ ಸಿಂಧೂರದ ಪರಾಕ್ರಮದ ಬಗ್ಗೆ ಪಾಕ್ ಪ್ರಧಾನಿ ಮತ್ತಷ್ಟು ಸತ್ಯ ಬಾಯಿಬಿಡ್ತಿದ್ದಾರೆ. ರಾವಲ್ಪಿಂಡಿ ಏರ್‌ಪೋರ್ಟ್ ಮೇಲೆ ಬ್ರಹ್ಮೋಸ್ ಕ್ಷಿಪಣಿಯ ದಾಳಿ ಆಯಿತು. ನಾವು ಪ್ಲ್ಯಾನ್ ಮಾಡುವ ಮೊದಲೇ ಅವರು ದಾಳಿ ಮಾಡಿದ್ದರು. ಇದು ನಮ್ಮ ಮಿಲಿಟರಿ ವೈಫಲ್ಯ ಅಂತ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಒಪ್ಪಿಕೊಂಡಿದ್ದಾರೆ.

ಅಜೆರ್ಬೈಜಾನ್‌ನ ಲಾಚಿನ್‌ನಲ್ಲಿ ನಡೆದ ಪಾಕಿಸ್ತಾನ–ಟರ್ಕಿ–ಅಜೆರ್ಬೈಜಾನ್ ತ್ರಿಪಕ್ಷೀಯ ಶೃಂಗಸಭೆಯಲ್ಲಿ ಮಾತನಾಡಿದ ಷರೀಫ್, ಮೇ 10ರಂದು ಬೆಳಗ್ಗಿನ ಜಾವ 4:30ಕ್ಕೆ ಪ್ರಾರ್ಥನೆ ಬಳಿಕ ಭಾರತದ ಮೇಲೆ ದಾಳಿ ಮಾಡಲು ಫೀಲ್ಡ್ ಮಾರ್ಷಲ್ ಅಸೀಮ್ ಮುನೀರ್ ನೇತೃತ್ವದ ನಮ್ಮ ಸೇನೆಯು ಪ್ಲ್ಯಾನ್ ಮಾಡಿತ್ತು. ಆದ್ರೆ ಭಾರತ ನಮ್ಮ ಯೋಜಿತ ದಾಳಿಯನ್ನೆಲ್ಲ ತಲೆಕೆಳಗೆ ಮಾಡಿತು ಅಂತ ಹೇಳಿದ್ದಾರೆ.

ನಾವು ದಾಳಿ ಮಾಡುವ ಮೊದಲೇ ಭಾರತ ಬ್ರಹ್ಮೋಸ್‌ನಿಂದ (ಸೂಪರ್ ಸಾನಿಕ್ ಕ್ರೂಸ್ ಕ್ಷಿಪಣಿ) ಪಾಕ್‌ನ ಹಲವು ಮಿಲಿಟರಿ ಕೇಂದ್ರಗಳು ಹಾಗೂ ವಾಯುನೆಲೆಗಳ ಮೇಲೆ ದಾಳಿ ಮಾಡಿತ್ತು. ನಮ್ಮ ಕಾರ್ಯತಂತ್ರದ ನೆಲೆಗಳನ್ನೂ ನಾಶಗೊಳಿಸಿತು. ಪಾಕಿಸ್ತಾನದ ವಿವಿಧ ಪ್ರಾಂತ್ಯಗಳನ್ನು ಗುರಿಯಾಗಿಸಿಕೊಂಡು ಬ್ರಹ್ಮೋಸ್ ಕ್ಷಿಪಣಿ ದಾಳಿ ನಡೆಸಿದಾಗ ರಾವಲ್ಪಿಂಡಿಯ ನೂರ್ ಖಾನ್ ಮತ್ತು ಮುರಿಯ್‌ನ (ಚಕ್ವಾಲ್) ವಾಯುನೆಲೆಗಳು ಧ್ವಂಸವಾದವು. ಇದರಿಂದ ನಮ್ಮ ಯೋಜಿತ ದಾಳಿ ತಲೆಕೆಳಗಾಯಿತು. ಆಪರೇಷನ್ ಸಿಂಧೂರ ಭಾಗವಾಗಿ ಭಾರತ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿ ಬ್ರಹ್ಮೋಸ್ ಅನ್ನು ಪ್ರಯೋಗಿಸಿತ್ತು. ಇದಾದ ಬಳಿಕ ಪಾಕ್ ಭಾರತದ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಚೀನಾ ನಿರ್ಮಿತ ಡ್ರೋನ್‌ಗಳನ್ನು ಹಾರಿಸಿತ್ತು. ಇದನ್ನೂ ನಮ್ಮ ವಾಯುರಕ್ಷಣಾ ವ್ಯವಸ್ಥೆ ಎಸ್–400 ವಿಫಲಗೊಳಿಸಿತು.

# ಅಕ್ರಮ ಗೋಸಾಗಣೆ ತಡೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.29: ಜಿಲ್ಲೆಯಲ್ಲಿ ದಿನನಿತ್ಯ ಗೋಹತ್ಯೆ ಮತ್ತು ಅಕ್ರಮ ಗೋಸಾಗಾಣಿಕೆ ನಡೆಯುತ್ತಿದ್ದು, ಸದರಿ ಸಾಲಿನಲ್ಲಿ ಮುಸ್ಲಿಂ ಹಬ್ಬದ ಪ್ರಯುಕ್ತ ಗೋವುಗಳನ್ನು ವಧೆ ಮಾಡದಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಆದೇಶ ಹೊರಡಿಸಿ ಕಟ್ಟುನಿಟ್ಟಿನ ಪಾಲನೆ ಮಾಡಬೇಕು ಎಂದು

ವಿಶ್ವಹಿಂದೂ ಪರಿಷತ್ ವತಿಯಿಂದ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಲಿಂಗರಾಜ್ ಅಪ್ಪ ಅವರು ತಿಳಿಸಿದರು.

ಬಕ್ರೀದ ಹಬ್ಬದಲ್ಲಿ ಅಕ್ರಮ ಗೋವುಗಳನ್ನು ವಧೆ ಮಾಡುವುದನ್ನು ಸಂಪೂರ್ಣ ನಿಷೇಧಿಸಿ ಸರಕಾರಿ ಆದೇಶ ಸಂಖ್ಯೆ (69/2020) ರ ಪ್ರಕಾರ ಸರಕಾರದ ನಿಯಮ ಗಾಳಿಗೆ ತೂರದೇ ನಿಯಮಗಳನ್ನು ಸಂಪೂರ್ಣ ಪಾಲನೆ ಮಾಡಬೇಕು. ಹಿಂದು ಸಂಪ್ರದಾಯದ ಪ್ರಕಾರ ಪುರಾತನ ಕಾಲದಿಂದಲು ಗೋವುಗಳನ್ನು ದೇವರ ಸ್ವರೂಪದಲ್ಲಿ ಪೂಜಿಸುತ್ತಾ ಬಂದಿರುತ್ತೇವೆ.

ನಾವು ಪ್ರತಿ ವರ್ಷ ಜಿಲ್ಲಾಧಿಕಾರಿಗಳು, ಮತ್ತು ಆಯುಕ್ತರು, ಮಹಾನಗರ ಪಾಲಿಕೆ ಕಲಬುರಗಿ, ಪೊಲೀಸ್ ಆಯುಕ್ತರು, ಕಲಬುರಗಿ ಇವರಿಗೆ ಮನವಿ ಪತ್ರ ಕೊಟ್ಟರು ಕೂಡಾ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ ಎಂದು ಆರೋಪಿಸಿದರು.

# ಹುನಕುಂಟಿ ಗ್ರಾಮಸ್ಥರಿಂದ ಬಸ್ ಡಿಪೋದ ಮುಂದೆ ಶವವಿಟ್ಟು ಪ್ರತಿಭಟನೆ



ಲಿಂಗಸಗೂರು:ಮೇ.29:ತಾಲೂಕಿನ ಹುನಕುಂಟಿ ಗ್ರಾಮದ ಯುವಕ ಹಾಗೂ ಚಾಲಕ, ನಿರ್ವಾಹಕರ ನಡುವೆ ವಾಗ್ವಾದ ನಡೆದು ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದು ಗ್ರಾಮಸ್ಥರು ಬಸ್ ಡಿಪೋದ ಮುಂದೆ ಶವವಿಟ್ಟು ಪ್ರತಿಭಟನೆ ನಡೆಸಿದ ಘಟನೆ ಜರುಗಿದೆ

ಲಿಂಗಸುಗೂರು ನಿಂದ ಸಜ್ಜಲಗುಡ್ಡ–ಬೆಂಗಳುರು ಬಸ್ ಹುನಕುಂಟಿ ಮಾರ್ಗವಾಗಿ ಸಾಗುವಾಗ ಯುವಕ ಮುಕ್ಕಣ್ಣ ಗ್ರಾಮದ ರಸ್ತೆ ಪಕ್ಕದಲ್ಲಿ ಕುಳಿತಿರುವಾಗ ಬಸ್ ಚಲಿಸಿ ರಸ್ತೆಯ ನೀರು ಯುವಕನ ಮೇಲೆ ಬಿದ್ದಿರುವುದರಿಂದ ಸಿಟ್ಟಿಗೆದ್ದ ಯುವಕ ಚಾಲಕನಿಗೆ ಅವಾಚ್ಯವಾಗಿ ಬೈದಿದ್ದಾನೆಂದು ಹೇಳಲಾಗುತಿದ್ದು ಬಸ್ಸಿನ ಚಾಲಕ ಹಾಗೂ ನಿರ್ವಾಹಕ ಸೇರಿ ಯುವಕನೊಂದಿಗೆ ಜಗಳವಾಗಿದ್ದು ಕೊನೆಯಲ್ಲಿ ವಿಷಯ ಪೊಲೀಸ್ ಕಟ್ಟೆ ಹತ್ತಿದೆ ವಿಷಯವನ್ನು ತಿಳಿಗೊಳಿಸಲು ಪ್ರಯತ್ನಿಸಿದರು ಫಲಕಾರಿಯಾಗದೆ ಯುವಕ ಕೊನೆಗೆ ಹೊಲಕ್ಕೆ ತೆರಳಿ ತಾನೆ ಲೈವ್ ಮಾಡುತ್ತಾ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಹೇಳಲಾಗುತಿದೆ

ವಿಷಯ ತಿಳಿದ ಗ್ರಾಮಸ್ಥರ ಗಮನಕ್ಕೆ ಬರುತ್ತಲೆ ಯುವಕನ ಶವವನ್ನು ತೆಗೆದುಕೊಂಡುಬಂದು ಪಟ್ಟಣದ ಬಸ್ ಡಿಪೋ ಎದುರು ಶವವಿಟ್ಟು ಪ್ರತಿಭಟನೆ ನಡೆಸಿದ ಘಟನೆ ಜರುಗಿದೆ

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.